VOLUME: 16 | 08 MAY 2026 | ಶುಕ್ರವಾರ | RS: 2 | PAGE: 06 | ISSUE: 91 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

'ಟಾಕ್ಸಿಕ್' ಸಿನಿಮಾದ ದಿನಾಂಕ ಬದಲಾವಣೆ ಆದ ಬಳಿಕ ಅದರ ಪರಿಣಾಮದಿಂದಲೋ ಏನೋ ಎಷ್ಟೋಂದು ಸಿನಿಮಾಗಳ ಬಿಡುಗಡೆ ದಿನಾಂಕ ಬದಲಾವಣೆ ಆಗಿವೆ, ಈಗಲೂ ಆಗುತ್ತಲೇ ಇವೆ. 'ಉಸ್ತಾದ್ ಭಗತ್ ಸಿಂಗ್', 'ಡಕಾಯತ್', 'ಪೆದ್ದಿ' ಸಿನಿಮಾಗಳ ಬಿಡುಗಡೆ ದಿನಾಂಕದಲ್ಲಿ ಬದಲಾವಣೆ ಆಯ್ತು. ಇದೀಗ ಸಮಂತಾ ಋತ್ ಪ್ರಭು ನಟಿಸಿರುವ ಬಹುನಿರೀಕ್ಷಿತ ಚಿತ್ರ 'ಮಾ ಇಂಟಿ ಬಂಗಾರಂ' ಬಿಡುಗಡೆಯ ದಿನಾಂಕದಲ್ಲಿ ಬದಲಾವಣೆಯಾಗಿದೆ.



BHARATHA SARATHI
KANNADA DAILY NEWS PAPER
# ಭಾರತ ಸಾರಥಿ
CALL 9740160669
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
prabhavaa.com



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ಮಮತಾ ಬ್ಯಾನರ್ಜಿ ಸರ್ಕಾರ ವಜಾಗೊಳಿಸಿದ ರಾಜ್ಯಪಾಲರು

ಕೋಲ್ಕತ್ತಾ: ಪಶ್ಚಿಮ ಬಂಗಾಳ ರಾಜ್ಯಪಾಲ ಆರ್.ಎನ್. ರವಿ ಅವರು ತೃಣಮೂಲ ಕಾಂಗ್ರೆಸ್ ಮುಖ್ಯಸ್ಥೆ, ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರ ಸಚಿವ ಸಂಪುಟವನ್ನು ವಜಾಗೊಳಿಸಿದ್ದಾರೆ. ಮೇ 7, 2026 ರಿಂದ ಜಾರಿಗೆ ಬರುವಂತೆ ಭಾರತೀಯ ಸಂವಿಧಾನದ 174(2)(ಬಿ) ವಿಧಿಯ ಅಡಿಯಲ್ಲಿ ರಾಜ್ಯಪಾಲ ಆರ್. ಎನ್. ರವಿ ಅವರು ರಾಜ್ಯ ವಿಧಾನಸಭೆಯನ್ನು ವಿಸರ್ಜಿಸಿ ಆದೇಶ ಹೊರಡಿಸಿದ್ದಾರೆ.

2026ರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿಯ ಭರ್ಜರಿ ಗೆಲುವಿನ ಹೊರತಾಗಿಯೂ ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಲು ಮಮತಾ ಬ್ಯಾನರ್ಜಿ ನಿರಾಕರಿಸಿದ್ದರು. ರಾಜ್ಯ ವಿಧಾನಸಭೆಯ ಅವಧಿ ಪೂರ್ಣಗೊಂಡ ಹಿನ್ನೆಲೆಯಲ್ಲಿ ಸಂವಿಧಾನಾತ್ಮಕ ಬಿಕ್ಕಟ್ಟಿನ ನಡುವೆಯೂ ಇಂದಿನಿಂದ ಜಾರಿಗೆ ಬರುವಂತೆ ರಾಜ್ಯಪಾಲರು



ಬಂಗಾಳ ವಿಧಾನಸಭೆಯನ್ನು ವಿಸರ್ಜಿಸಿದ್ದಾರೆ. ಈ ಮೂಲಕ ಹೊಸ ಸರ್ಕಾರ ರಚನೆಗೆ ದಾರಿ ಮಾಡಿಕೊಡಲಾಗಿದೆ ಎಂದು ಗವರ್ನರ್ ಆರ್ .ಎನ್. ರವಿ ಹೊರಡಿಸಿದ ಅಧಿಸೂಚನೆಯಲ್ಲಿ ತಿಳಿಸಲಾಗಿದೆ.

ಮಂಗಳವಾರವಷ್ಟೇ ಮಮತಾ ಬ್ಯಾನರ್ಜಿ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಲು ನಿರಾಕರಿಸಿದ್ದರು. ಚುನಾವಣಾ ಫಲಿತಾಂಶ ಜನಾದೇಶವಲ್ಲ, ಇದೊಂದು ಪಿತೂರಿ. ಭಾರತೀಯ ಚುನಾವಣಾ ಆಯೋಗದ ಬೆಂಬಲದೊಂದಿಗೆ ಬಿಜೆಪಿ ಚುನಾವಣೆಯಲ್ಲಿ ಅಕ್ರಮವೆಸಗಿದೆ. ಅಧಿಕೃತವಾಗಿ ಚುನಾವಣಾ ಆಯೋಗದ ಮೂಲಕ, ಅವರು ನಮ್ಮನ್ನು ಸೋಲಿಸಬಹುದು. ಆದರೆ, ನೈತಿಕವಾಗಿ, ನಾವು ಚುನಾವಣೆಗಳನ್ನು ಗೆದ್ದಿದ್ದೇವೆ. ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡುವ ಪ್ರಶ್ನೆಯೇ ಉದ್ಭವಿಸುವುದಿಲ್ಲ. ನಾನು ಸೋತಿಲ್ಲ, ನಾನು ರಾಜೀನಾಮೆ ನೀಡುವುದಿಲ್ಲ ಎಂದು ಹೇಳಿದ್ದರು.

ಮಮತಾ ಬ್ಯಾನರ್ಜಿ ಅವರ ಈ ಪ್ರತಿಕ್ರಿಯೆಯನ್ನು ಉಲ್ಲೇಖಿಸಿ ಮಾತನಾಡಿದ್ದ ಲೋಕಸಭೆಯ ಮಾಜಿ ಪ್ರಧಾನ ಕಾರ್ಯದರ್ಶಿ ಪಿಡಿಟಿ ಆಚಾರ್ಯ, ವಿಧಾನಸಭಾ ಚುನಾವಣೆಯಲ್ಲಿ ತೃಣಮೂಲ ಕಾಂಗ್ರೆಸ್ ಸೋತಿದೆ. ಆದರೆ, ಹೊಸ ವಿಧಾನಸಭೆ ರಚನೆಯಾಗಿ ಹೊಸ ಸರ್ಕಾರ ರಚನೆಯಾಗುವವರೆಗೂ ಹಳೆಯ ವಿಧಾನಸಭೆ ಮುಂದುವರಿಯುತ್ತದೆ. ಆಡಳಿತ ಪಕ್ಷ ಚುನಾವಣೆಯಲ್ಲಿ ಸೋತ ತಕ್ಷಣ, ಮುಖ್ಯಮಂತ್ರಿಗಳು ರಾಜ್ಯಪಾಲರಿಗೆ ತಮ್ಮ ರಾಜೀನಾಮೆಯನ್ನು ಸಲ್ಲಿಸುತ್ತಾರೆ. ಅದನ್ನು ಎಲ್ಲರೂ ಅನುಸರಿಸುತ್ತಾರೆ. ನಂತರ ರಾಜ್ಯಪಾಲರು ಹೊಸ ಮುಖ್ಯಮಂತ್ರಿ ಪ್ರಮಾಣ ವಚನ ಸ್ವೀಕರಿಸುವವರೆಗೆ ಅಧಿಕಾರದಲ್ಲಿ ಮುಂದುವರಿಯುವಂತೆ ಮುಖ್ಯಮಂತ್ರಿಗೆ ಸಲಹೆ ನೀಡುತ್ತಾರೆ ಎಂದು ಹೇಳಿದ್ದರು.

ಪಶ್ಚಿಮ ಬಂಗಾಳದ ವಿಧಾನಸಭಾ ಚುನಾವಣೆ ಎ. 23 ಮತ್ತು 29ರಂದು ಎರಡು ಹಂತಗಳಲ್ಲಿ ನಡೆದಿದ್ದು, ಮೇ 4 ರಂದು ಮತ ಎಣಿಕೆ ನಡೆಸಲಾಗಿತ್ತು. 294 ಸದಸ್ಯ ಬಲದ ವಿಧಾನಸಭೆಯಲ್ಲಿ 207 ಸ್ಥಾನಗಳನ್ನು ಗಳಿಸುವ ಮೂಲಕ ಬಿಜೆಪಿ ಭರ್ಜರಿ ಜಯ ಸಾಧಿಸಿದೆ. ಸರ್ಕಾರವನ್ನು ಉಳಿಸಿಕೊಳ್ಳುವ ವಿಶ್ವಾಸವನ್ನು ವ್ಯಕ್ತಪಡಿಸಿದ್ದ ತೃಣಮೂಲ ಕಾಂಗ್ರೆಸ್ ಕೇವಲ 80 ಸ್ಥಾನಗಳಿಗೆ ಗಳಿಸುವ ಮೂಲಕ ಸೋತಿದೆ.

## ಟಿಎಂಸಿಯಿಂದ ಹಿಂಸಾಚಾರ?

ಕೋಲ್ಕತ್ತಾ: ಪಶ್ಚಿಮ ಬಂಗಾಳ ವಿಧಾನಸಭೆ ಚುನಾವಣೆ ಫಲಿತಾಂಶ ಪ್ರಕಟವಾದ ನಂತರ ರಾಜ್ಯದಲ್ಲಿ ಚುನಾವಣೋತ್ತರ ಹಿಂಸಾಚಾರ ತೀವ್ರಗೊಂಡಿದ್ದು, ಉತ್ತರ 24 ಪರಗಣ ಜಿಲ್ಲೆಯ ಪಾಣಿಹಟಿಯಲ್ಲಿ ನಡೆದ ಬಾಂಬ್ ಸ್ಫೋಟದಲ್ಲಿ ಐವರು ಬಿಜೆಪಿ ಕಾರ್ಯಕರ್ತರು ಗಾಯಗೊಂಡಿದ್ದಾರೆ ಎಂದು ಪೊಲೀಸರು ಇಂದು ಗುರುವಾರ ತಿಳಿಸಿದ್ದಾರೆ.

**ಬುಧವಾರ ತಡರಾತ್ರಿ ಈ ಘಟನೆ ನಡೆದಿದ್ದು, ಬಿಜೆಪಿ ನಾಯಕ ಸುವೇಂದು ಅಧಿಕಾರಿ ಅವರ ಆಪ್ತ ಸಹಾಯಕ ಚಂದ್ರನಾಥ್ ರಥ್ ಅವರನ್ನು ಮೋಟಾರ್ ಸೈಕಲ್‌ನಲ್ಲಿ ಬಂದ ದುಷ್ಕರ್ಮಿಗಳು ಗುಂಡಿಕ್ಕಿ ಕೊಂದ ಕೆಲವೇ ಗಂಟೆಗಳ ನಂತರ, ಟಿಎಂಸಿ ಪ್ರತೀಕಾರದ ಹಿಂಸಾಚಾರ ನಡೆಸುತ್ತಿದೆ ಎಂದು ಕೇಸರಿ ಬಣ ಆರೋಪಿಸಿದೆ.**

ಪಾಣಿಹಟಿಯ ಸೇಂಟ್ ಕ್ಸೇವಿಯರ್ ಸಂಸ್ಥೆಯ ಬಳಿ ಬಾಂಬ್ ಸ್ಫೋಟ ಸಂಭವಿಸಿದ್ದು, ದುಷ್ಕರ್ಮಿಗಳು ಬಿಜೆಪಿ ಕಾರ್ಯಕರ್ತರ ಗುಂಪಿನ ಮೇಲೆ ಕಚ್ಚಾ ಬಾಂಬ್‌ಗಳನ್ನು ಎಸೆದಿದ್ದಾರೆ. ಘಟನೆಯಲ್ಲಿ ಕನಿಷ್ಠ ಐದು ಜನರು ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಗಾಯಾಳುಗಳನ್ನು ಕೋಲ್ಕತ್ತಾದ ಆರ್‌ಜಿ ಕಾರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗೆ ದಾಖಲಿಸಲಾಗಿದೆ.

ಸ್ಥಳೀಯ ಮೂಲಗಳ ಪ್ರಕಾರ, ಪಾಣಿಹಟಿಯ ವಾರ್ಡ್ ಸಂಖ್ಯೆ 2 ರ ದತ್ತಾ ರಸ್ತೆಯಲ್ಲಿ ಬಿಜೆಪಿ ಕಾರ್ಯಕರ್ತರು ನಿವಾಸಿಗಳೊಂದಿಗೆ ಸಂವಹನ ನಡೆಸುತ್ತಿದ್ದಾಗ ಮೋಟಾರ್ ಸೈಕಲ್‌ನಲ್ಲಿ ಬಂದ ದುಷ್ಕರ್ಮಿಗಳು ಗುಂಪೊಂದು ಕಚ್ಚಾ ಬಾಂಬ್ ಎಸೆದು ಪರಾರಿಯಾಗಿದೆ ಎಂದು ಹೇಳಲಾಗಿದೆ.

ದಾಳಿಕೋರರಿಗೆ ಆಡಳಿತಾರೂಢ ತೃಣಮೂಲ ಕಾಂಗ್ರೆಸ್ ಬೆಂಬಲವಿದೆ ಎಂದು ಬಿಜೆಪಿ ಆರೋಪಿಸಿದೆ. ಆದರೆ ಮಮತಾ ಬ್ಯಾನರ್ಜಿ ನೇತೃತ್ವದ ಪಕ್ಷವು ಈ ಆರೋಪವನ್ನು ನಿರಾಕರಿಸಿದೆ.

"ನಾವು ತನಿಖೆ ಆರಂಭಿಸಿದ್ದೇವೆ ಮತ್ತು ಘಟನೆಯಲ್ಲಿ ಭಾಗಿಯಾಗಿರುವವರನ್ನು ಗುರುತಿಸಲು ಸುತ್ತಮುತ್ತಲಿನ ಪ್ರದೇಶಗಳ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸುತ್ತಿದ್ದೇವೆ.

ಆರೋಪಿಗಳನ್ನು ಬಂಧಿಸಲು ದಾಳಿ ನಡೆಸಲಾಗುತ್ತಿದೆ" ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. "ನಾವು ಕಟ್ಟುನಿಟ್ಟಿನ ಕಟ್ಟೆಚ್ಚರ ವಹಿಸುತ್ತಿದ್ದೇವೆ ಮತ್ತು ವದಂತಿಗಳನ್ನು ಹರಡದಂತೆ ಜನರಿಗೆ ಮನವಿ ಮಾಡುತ್ತಿದ್ದೇವೆ. ಶಾಂತಿ ಕಾಪಾಡಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ" ಎಂದು ಅಧಿಕಾರಿ ಹೇಳಿದ್ದಾರೆ.

ಆರ್‌ಜಿ ಕಾರ್ ಆಸ್ಪತ್ರೆಯ ಅತ್ಯಾಚಾರ ಸಂತ್ರಸ್ತೆಯ ತಾಯಿ, ಹೊಸದಾಗಿ ಆಯ್ಕೆಯಾದ ಬಿಜೆಪಿ ಶಾಸಕಿ ರತ್ನಾ ದೇಬ್ನಾಥ್ ಅವರ ನಿವಾಸದ ಬಳಿ ಈ ಸ್ಫೋಟ ಸಂಭವಿಸಿದೆ.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುರುವಾರ ಮೈಸೂರಿನ ತಮ್ಮ ನಿವಾಸದ ಬಳಿ ದಿವಂಗತ ರಾಕೇಶ್ ಸಿದ್ದರಾಮಯ್ಯ ಅವರ ಸ್ಮರಣಾರ್ಥ ಸಮತಾ ಟ್ರಸ್ಟ್ ವತಿಯಿಂದ ಆರೋಗ್ಯ ಇಲಾಖೆಗೆ ನೀಡಲಾದ ಅಂಬುಲೆನ್ಸ್ ಗಳಿಗೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

## ಹೈಕಮಾಂಡ್ ಸಿಎಂ ಬಗ್ಗೆ ಸ್ಪಷ್ಟನೆ ನೀಡಲಿ: ಕೆ.ಎನ್.ರಾಜಣ್ಣ

ಮೈಸೂರು: ಹೈಕಮಾಂಡ್ ಸಿಎಂಗೆ ಅಧಿಕಾರ ಮುಂದುವರೆಸಿ ಎಂಬ ಗ್ರೀನ್ ಸಿಗ್ನಲ್ ಕೊಡಲಿ, ಇಲ್ಲ ಬದಲಾವಣೆ ಮಾಡ್ತೀವಿ ಅಂತಾದ್ರೂ ಹೇಳಲಿ ಎಂದು ಮಾಜಿ ಸಚಿವ ಕೆ.ಎನ್ ರಾಜಣ್ಣ ಹೇಳಿದ್ದಾರೆ.

ಮೈಸೂರಿನಲ್ಲಿ ಮಾತನಾಡಿದ ಅವರು, ನಾನು ಸಿಎಂ ಬದಲಾಗುತ್ತಾರೆ ಅಂತಾನೂ ಹೇಳಲ್ಲ, ಇರುತ್ತಾರೆ ಅಂತಾನೂ ಹೇಳಲ್ಲ. ಆದರೆ ಹೈಕಮಾಂಡ್ ಸಿಎಂಗೆ ನೀವು ಪರಿಪೂರ್ಣ ಸ್ವತಂತ್ರರು ಅಧಿಕಾರ ಮುಂದುವರೆಸಿ ಎಂಬ ಗ್ರೀನ್ ಸಿಗ್ನಲ್ ಆದರೂ ಕೊಡಲಿ. ಇಲ್ಲ ಬದಲಾವಣೆ ಮಾಡುತ್ತೇವೆ ಎಂಬುದಾದರೂ ಹೇಳಲಿ. ಎರಡು ಬಿಟ್ಟು ಬರಿ ಗೊಂದಲವೇ ಇದ್ರೆ ಅದು ಎಲ್ಲಾ ರೀತಿಯ ಸಮಸ್ಯೆಗೆ ಕಾರಣವಾಗುತ್ತದೆ ಎಂದಿದ್ದಾರೆ.

ಕಾಂಗ್ರೆಸ್ ಹೈಕಮಾಂಡ್ ಅತಿ ಬೇಗ ಜಾಗರೂಕವಾಗಿ ನಿರ್ಧಾರ ಕೈಗೊಳ್ಳಲಿ. ನಿರ್ಧಾರ ತಡವಾದಷ್ಟು ಅದು ಪಕ್ಷಕ್ಕೆ ಮತ್ತು ಸರ್ಕಾರದ ಮೇಲೆ ಪರಿಣಾಮ ಬೀರುತ್ತದೆ. ಡಿಕೆ ಶಿವಕುಮಾರ್‌ಗೆ ಆಸೆ ಇರುವುದು ಸಹಜ. ಅವರು ನಮ್ಮ ಪಕ್ಷದ ಅಧ್ಯಕ್ಷರು. ಹೀಗಾಗಿ ಸಿಎಂ ಕುರ್ಚಿ ಮೇಲೆ ಜಾಸ್ತಿಯೇ ಆಸೆ ಇದೆ. ಅದು ತಪ್ಪು ಕೂಡ ಅಲ್ಲ ಎಂದು ತಿಳಿಸಿದ್ದಾರೆ.

## ಕಾಂಗ್ರೆಸ್ ಸ್ಥಿತಿ ಭಿಕ್ಷುಕರ ರೀತಿ ಆಗಿದೆ: ಛಲವಾದಿ ನಾರಾಯಣಸ್ವಾಮಿ

ಬೆಂಗಳೂರು: ತಮಿಳುನಾಡಿನಲ್ಲಿ ಡಿಎಂಕೆ ಜೊತೆ ಇದ್ದ ಕಾಂಗ್ರೆಸ್, ನಟ ವಿಜಯ್ ನೇತೃತ್ವದ ಟಿವಿಕೆ ಪಕ್ಷ ಹೆಚ್ಚಿನ ಸ್ಥಾನ ಪಡೆದ ಕೂಡಲೇ ರಾತ್ರೋರಾತ್ರಿ ಆ ಪಕ್ಷದ ಮುಂದೆ ಹೋಗಿ ಸಚಿವ ಸ್ಥಾನಕ್ಕೆ ಭಿಕ್ಷೆ ಬೇಡುತ್ತಿದೆ. ಡಿಎಂಕೆ ಸಖ್ಯ ಬಿಟ್ಟು ಕಾಂಗ್ರೆಸ್ ಸ್ಥಿತಿ ಭಿಕ್ಷುಕರ ರೀತಿ ಆಗಿದೆ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣ ಸ್ವಾಮಿ ಅವರು ವ್ಯಂಗ್ಯವಾಡಿದ್ದಾರೆ.




ರಾಜ್ಯ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಷ್ಟ್ರೀಯ ಪಕ್ಷ ಕಾಂಗ್ರೆಸ್‌ಗೆ ಇಂತಹ ಹೀನಾಯ ಸ್ಥಿತಿ ಬಂದಿದೆ. ಪಂಚರಾಜ್ಯ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಮುಸ್ಲಿಮರು ಸಾಕಷ್ಟು ಬೆಂಬಲ ನೀಡಿದ್ದಾರೆ. ಕಾಂಗ್ರೆಸ್‌ಗೆ ಮುಸ್ಲಿಮರು ಇಲ್ಲದಿದ್ದರೆ ತಿಪ್ಪೆಗುಂಡಿಗೆ ಹಾಕುವ ಕಸಕ್ಕೆ ಸಮ ಎಂದರು.

ಪಂಚ ರಾಜ್ಯಗಳ ಚುನಾವಣೆಯಲ್ಲಿ ಬಿಜೆಪಿಗೆ ಅಭೂತಪೂರ್ವವಾದ ಜಯ ಸಿಕ್ಕಿದೆ. ಪಶ್ಚಿಮ ಬಂಗಾಳದಲ್ಲಿ ಬಿಜೆಪಿಗೆ ದೊಡ್ಡ ಮಟ್ಟದಲ್ಲಿ ಆಶೀರ್ವಾದ ಮಾಡಿದ್ದಾರೆ. ಆ ರಾಜ್ಯದಲ್ಲಿ ಟಿಎಂಸಿ ಆಡಳಿತದಲ್ಲಿ ಜನರು ನರಕಯಾತನೆ ಅನುಭವಿಸುತ್ತಿದ್ದರು. ಆ ನರಕದಿಂದ ಮೋದಿ ಅವರು ಜನರನ್ನು ಹೊರತಂದಿದ್ದಾರೆ. ಈ ಬಾರಿಯೂ ಬಿಜೆಪಿ ಗೆಲ್ಲದೇ ಇದ್ದಿದ್ದರೆ ಅಲ್ಲಿನ ಜನರ ಸ್ಥಿತಿ ಏನಾಗುತ್ತಿತ್ತು ಎಂದು ಊಹಿಸಿ ಎಂದರು.

ಪಶ್ಚಿಮ ಬಂಗಾಳದಲ್ಲಿ ಗೆದ್ದ ಶಾಸಕರು ಯಾವುದಾದರೂ ರಸ್ತೆಗೆ ಈಗ ಬಂದರೆ ಹೆಣ್ಣು ಮಕ್ಕಳು ಕೈ ಮುಗಿದು ನಮ್ಮನ್ನು ರಕ್ಷಿಸಿ ಎಂದು ಮನವಿ ಮಾಡುತ್ತಿದ್ದಾರೆ. ಮಮತಾ ಅವರ ಆಡಳಿತದಲ್ಲಿ ನಾವು ನರಕ ಅನುಭವಿಸಿದ್ದೇವೆ ಇನ್ನು ಮುಂದೆ ಇಂತಹ ಸ್ಥಿತಿ ಬರದಿರಲಿ ಎಂದು ಹೇಳುತ್ತಿದ್ದಾರೆ. ಅಂದರೆ ಅಲ್ಲಿ ಯಾವ ಸ್ಥಿತಿ ಇತ್ತು ಎಂದು ಯೋಚಿಸಿ ಎಂದು ಹೇಳಿದರು.

ಅಸ್ಸಾಂ ಮತ್ತು ಪುದುಚೇರಿಯಲ್ಲಿ ನಮ್ಮ ಪಕ್ಷಕ್ಕೆ ಜನ ಬೆಂಬಲ ನೀಡಿದ್ದಾರೆ. ತಮಿಳುನಾಡು ಮತ್ತು ಕೇರಳದಲ್ಲಿ ನಮ್ಮ ಪಕ್ಷದ ಕಾರ್ಯಕರ್ತರ ಬೆಂಬಲದಿಂದ ಮತಬ್ಯಾಂಕ್ ಹೆಚ್ಚಿಸಿಕೊಂಡಿದ್ದೇವೆ. ಇನ್ನೂ ಅಲ್ಲಿ ಮುಂದಿನ ಚುನಾವಣೆಯಲ್ಲಿ ಎಲ್ಲಾ ಪಕ್ಷಗಳಂತೆ ಬಿಜೆಪಿ ಶಕ್ತಿ ಹೆಚ್ಚಲಿದೆ. ಸ್ವತಂತ್ರ ಸರ್ಕಾರ ಮಾಡುವ ಶಕ್ತಿಯನ್ನು ಜನರು ಕೊಡ್ತಾರೆ. ಕೇರಳದಲ್ಲಿ ಕಾಂಗ್ರೆಸ್ ಯುಡಿಎಫ್ ಏಳು ಪಕ್ಷಗಳ ಜೊತೆಗೂಡಿದೆ. ತುಂಡು ತುಂಡು ಪಕ್ಷ ಸೇರಿ ಖಿಚಡಿ ಪಕ್ಷ ಆಗಿದೆ ಎಂದು ಗೇಲಿ ಮಾಡಿದರು.

ಪಂಚರಾಜ್ಯ ಚುನಾವಣೆಯಲ್ಲಿ ಪರಿಶಿಷ್ಟ ಜಾತಿ ವರ್ಗದ ಜನ ಹೆಚ್ಚಿನ ಪ್ರಮಾಣದಲ್ಲಿ ಬಿಜೆಪಿಗೆ ಬೆಂಬಲ ನೀಡಿದ್ದಾರೆ. ಆದರೆ ಕಾಂಗ್ರೆಸ್‌ಗೆ ಮುಸ್ಲಿಮರು ಸಾಕಷ್ಟು ಬೆಂಬಲ ಕೊಟ್ಟಿದ್ದಾರೆ.

ಅಸಾಂನಲ್ಲಿ 19 ಜನ ಕಾಂಗ್ರೆಸ್‌ನಿಂದ ಗೆದ್ದಿದ್ದಾರೆ ಇದರಲ್ಲಿ ಒಂದು ಎಸ್‌ಸಿ ಇನ್ನು ಉಳಿದವರು ಮುಸ್ಲಿಮರು. ಕಾಂಗ್ರೆಸ್ ಮುಸ್ಲಿಮರನ್ನು ದಾರಿ ತಪ್ಪಿಸಿ ಬಿಜೆಪಿ ಗುಮ್ಮ ತೋರಿಸುತ್ತಾ ಬಂದಿದೆ. ಮುಸ್ಲಿಮರು ಇಲ್ಲದಿದ್ದರೆ ಕಾಂಗ್ರೆಸ್ ಇಲ್ಲ. ಪಶ್ಚಿಮ ಬಂಗಾಳದಲ್ಲೂ ಬಿಜೆಪಿ ಪರಿಶಿಷ್ಟ ಜಾತಿ ಮತ್ತು ವರ್ಗಗಳಿಗೆ ಅವಕಾಶ ನೀಡಿದೆ ಎಂದರು.

ಕರ್ನಾಟಕದಲ್ಲಿ ಮುಂದೆ ನಡೆಯುವ ಚುನಾವಣೆಯಲ್ಲಿ ಕೂಡ ಪರಿಶಿಷ್ಟ ಜಾತಿ ವರ್ಗಗಳು ಬಿಜೆಪಿಗೆ ಜೊತೆ ನಿಲ್ಲಲಿದ್ದಾರೆ. ಇಲ್ಲಿಯೂ ಕಾಂಗ್ರೆಸ್‌ಗೆ ಪಾಠ ಕಲಿಸಬೇಕು ಎಂದು ಮುಸ್ಲಿಂ ಸಮುದಾಯಗಳು ನಿರ್ಧರಿಸಿವೆ ಎಂದು ನುಡಿದರು.

ಮಾತೆತ್ತಿದರೆ ನಾವು ಅಹಿಂದ ನಾಯಕರು ಎನ್ನುವವರು ಅಹಿಂದ ವರ್ಗಗಳಿಗೆ ಚುನಾವಣೆಯಲ್ಲಿ ಅವಕಾಶ ನೀಡಲಿಲ್ಲ. ಪ್ರಧಾನಿ ನರೇಂದ್ರ ಮೋದಿ ಅವರೂ ಅಹಿಂದ ವರ್ಗದವರು.

ಹಿಂದುಳಿದ ವರ್ಗದಿಂದ ಪ್ರಧಾನಿಯಾದವರು. 25 ವರ್ಷಗಳಿಂದ ಸೋಲದೇ ಒಂದು ದಿನವೂ ರಜೆ ಪಡೆಯದೇ ಕೆಲಸ ಮಾಡುತ್ತಿದ್ದಾರೆ. ಮೋದಿಜಿ ಅವರ ನಾಯಕತ್ವಕ್ಕೆ ಅಹಿಂದ ವರ್ಗದವರು ಬೆಂಬಲ ವ್ಯಕ್ತಪಡಿಸುತ್ತಾ ಇದ್ದಾರೆ. ಇಡೀ ದೇಶದಲ್ಲಿ ಬಿಜೆಪಿಯನ್ನು ಅಹಿಂದ ವರ್ಗಗಳು ಬೆಂಬಲಿಸುತ್ತಿವೆ. ಇದನ್ನು ಇಲ್ಲಿನ ನಾಯಕರು ಅರ್ಥ ಮಾಡಿಕೊಳ್ಳಬೇಕು. ಅಹಿಂದ ನಾಯಕನ ಕೈಲಿ ಬಿಜೆಪಿ ಇಡೀ ದೇಶ ಕೊಟ್ಟಿದೆ ಎಂದರು.

## ಆರಂಭದಲ್ಲೇ ವಿಜಯ್ ಎಡವಟ್ಟು

ಚೆನ್ನೈ: ತಮಿಳುನಾಡು ಚುನಾವಣೆಯಲ್ಲಿ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿ ಸರ್ಕಾರ ರಚನೆ ಉಮೇದಿನಲ್ಲಿರುವ ವಿಜಯ್ ಆರಂಭದಲ್ಲಿ ಯಡವಟ್ಟು ಮಾಡಿಕೊಂಡ್ರಾ ಅನ್ನೊ ಪ್ರಶ್ನೆ ಉದ್ಭವಿಸಿದೆ.



ಕಾಂಗ್ರೆಸ್ ಬೆಂಬಲ ನೀಡಿದ ಉತ್ಸಾಹದಲ್ಲಿ ಸರ್ಕಾರ ರಚನೆಗೆ ಹಕ್ಕು ಮಂಡಿಸಲು ಹೋದ ವಿಜಯ್‌ಗೆ ರಾಜ್ಯಪಾಲರು ಶಾಕ್ ಕೊಟ್ಟಿದ್ದಾರೆ. ಈ ಬಾರಿಯ ಚುನಾವಣೆಯಲ್ಲಿ ಬ್ಲಾಕ್‌ಬಾಸ್ಟರ್ ಪ್ರದರ್ಶನ ನೀಡಿದ ನಟ, ರಾಜಕಾರಣಿ ವಿಜಯ್ ಸರ್ಕಾರ ರಚನೆ ವಿಚಾರದಲ್ಲಿ ಆರಂಭದಲ್ಲೇ ಎಡವಿದ್ರಾ ಅನ್ನೊ ಪ್ರಶ್ನೆ ಹುಟ್ಟುಹಾಕಿದೆ. ಟಿವಿಕೆ ಅಧ್ಯಕ್ಷ ವಿಜಯ್ ಬುಧವಾರ (ಮೇ 7) ತಮಿಳುನಾಡಿನ ರಾಜ್ಯಪಾಲರನ್ನು ಭೇಟಿಯಾಗಿ ಸರ್ಕಾರ ರಚನೆಗಾಗಿ ಹಕ್ಕು ಮಂಡಿಸಿದ್ದಾರೆ. ಆದರೆ ಬೆಂಬಲ ಪತ್ರ ನೀಡದ ಹಿನ್ನೆಲೆ ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಬಹುಮತದ ಬಗ್ಗೆ ಸ್ಪಷ್ಟನೆ ಕೇಳಿದ್ದಾರೆ. ಈ ಮೂಲಕ ವಿಜಯ್‌ಗೆ ಶಾಕ್ ಕೊಟ್ಟಿದ್ದಾರೆ.

234 ಸದಸ್ಯ ಬಲದ ತಮಿಳುನಾಡಿನಲ್ಲಿ ಬಹುಮತವನ್ನು ಸಾಬೀತು ಮಾಡಲು ಬೇಕಾಗಿರುವ ಮ್ಯಾಜಿಕ್ ಸಂಖ್ಯೆ 118. 107 ಸ್ಥಾನಗಳಲ್ಲಿ ಗೆಲುವು ದಾಖಲಿಸಿರುವ ಟಿವಿಕೆ ಅತಿ ದೊಡ್ಡ ಪಕ್ಷವಾಗಿ ಹೊರಹೊಮ್ಮಿದೆ. ಆದರೆ ಕಾಂಗ್ರೆಸ್ ಬೆಂಬಲದ ಹೊರತಾಗಿಯೂ ಬಹುಮತಕ್ಕೆ ಬೇಕಾಗಿರುವ ಅಧಿಕೃತ ಸಂಖ್ಯಾಬಲದ ಕೊರತೆ ಕಾಡುತ್ತಿದೆ. ಬೆಂಬಲದ ಬಗ್ಗೆ ಇತರೆ ಪಕ್ಷಗಳು ಬೆಂಬಲ ಪತ್ರ ನೀಡಿದ ಹಿನ್ನೆಲೆ ಬಹುಮತದ ಬಗ್ಗೆ ರಾಜ್ಯಪಾಲರಿಗೆ ಮನದಟ್ಟು ಮಾಡಿಸಲು ವಿಜಯ್‌ಗೆ ಸಾಧ್ಯವಾಗಿಲ್ಲ.

ಕಾಂಗ್ರೆಸ್‌ನ ಐದು ಸ್ಥಾನಗಳನ್ನು ಸೇರಿಸಿದರೆ ಟಿವಿಕೆ ಸಂಖ್ಯಾಬಲ 113ಕ್ಕೆ ಏರಿಕೆಯಾಗುತ್ತದೆ. ಆದರೆ ಬಹುಮತಕ್ಕೆ ಬೇಕಾಗಿರುವ ಮ್ಯಾಜಿಕ್ ಸಂಖ್ಯೆ 118. ಅಂದರೆ ಇನ್ನೂ 6 ಸ್ಥಾನಗಳ ಕೊರತೆಯಿದೆ. ಆ 6 ಶಾಸಕರ ಬೆಂಬಲ ಯಾವ ಪಕ್ಷದಿಂದ ಸಿಗಲಿದೆ ಎಂದು ವಿಜಯ್ ವಿವರಿಸಿಲ್ಲ ಎನ್ನಲಾಗಿದೆ. ಹೀಗಾಗಿ ಸಂಖ್ಯೆಗಳ ಕೊರತೆ ಹಿನ್ನೆಲೆ ಸರ್ಕಾರ ರಚನೆಗೆ ಅನುಮತಿ ನೀಡಬೇಕೋ? ಬೇಡವೋ? ಎನ್ನುವುದಕ್ಕೆ ಕಾನೂನು ಸಲಹೆ ಪಡೆದು ತಿಳಿಸುವುದಾಗಿ ಹೇಳಿದ್ದಾರೆ.

## ಆಪರೇಷನ್ ಸಿಂಧೂರ್ ವೀಡಿಯೋ ಬಿಡುಗಡೆ

ನವದೆಹಲಿ: ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪಾಕ್ ಮೂಲದ ಉಗ್ರರು ನಡೆಸಿದ ನರಮೇಧಕ್ಕೆ ಪ್ರತೀಕಾರವಾಗಿ ಭಾರತ ನಡೆಸಿದ 'ಆಪರೇಷನ್ ಸಿಂಧೂರ' ವಿಶೇಷ ಕಾರ್ಯಾಚರಣೆಗೆ 1 ವರ್ಷ ಪೂರ್ಣಗೊಂಡಿದೆ.

ಈ ಹೊತ್ತಿನಲ್ಲೇ ಪಾಕ್ ವಿರುದ್ಧ ತೀರಿಸಿಕೊಂಡ ಪ್ರತೀಕಾರ ಹಾಗೂ ಭಾರತೀಯ ಮೂರು ಸೇನೆಗಳ ಪರಾಕ್ರಮವನ್ನು ನೆನಪಿಸುವ ವಿಶೇಷ ವಿಡಿಯೋವೊಂದನ್ನು ಭಾರತೀಯ ವಾಯುಪಡೆ ಹಂಚಿಕೊಂಡಿದೆ.

ಎಕ್ಸ್ ಖಾತೆಯಲ್ಲಿ ವಿಡಿಯೋ ಹಂಚಿಕೊಂಡಿರುವ ಭಾರತೀಯ ವಾಯುಪಡೆ, ಆಪರೇಷನ್ ಸಿಂಧೂರ ನ್ಯಾಯ ದೊರಕಿಸಿದೆ. ಈ ಕಾರ್ಯ ನಿಖರವಾಗಿದ್ದು, ನೆನಪಿನಲ್ಲಿ ಶಾಶ್ವತವಾಗಿ ಉಳಿಯುತ್ತದೆ ಎಂದು ಬರೆದುಕೊಂಡಿದೆ. ಅಲ್ಲದೇ, ಭಾರತ ಯಾವುದನ್ನೂ ಮರೆಯುವುದಿಲ್ಲ– ಭಾರತ ಯಾವುದನ್ನೂ ಕ್ಷಮಿಸುವುದಿಲ್ಲ, ಆಪರೇಷನ್ ಸಿಂಧೂರ ಮುಂದುವರಿಯುತ್ತದೆ ಎಂದು ವಾಯುಪಡೆ ಎಚ್ಚರಿಸಿದೆ.

ಅಲ್ಲದೇ ವಾಯುಪಡೆ ಹಂಚಿಕೊಂಡ ಇದೇ ವಿಡಿಯೋನಲ್ಲಿ ಪ್ರಧಾನಿ ನರೇಂದ್ರ ಮೋದಿ ಸಹ ಉಗ್ರರ ವಿರುದ್ಧ ಗುಡುಗಿದ್ದಾರೆ. ಭಾರತವು ಪ್ರತಿಯೊಬ್ಬ ಭಯೋತ್ಪಾದಕ ಮತ್ತು ಅವರ ಬೆಂಬಲಿಗರನ್ನ ಗುರುತಿಸಿ, ಪತ್ತೆಮಾಡಿ ಶಿಕ್ಷಿಸುತ್ತದೆ ಎಂದು ಹೇಳಿದ್ದಾರೆ.

ದಶಕಗಳಿಂದ ಭಾರತದ ಮಣ್ಣಿನಲ್ಲಿ ಪಾಕಿಸ್ತಾನ ನಡೆಸುತ್ತಿರುವ ಭಯೋತ್ಪಾದನಾ ಕೃತ್ಯಗಳಿಗೆ ಕೇವಲ ಮೌಖಿಕ ಎಚ್ಚರಿಕೆ ನೀಡುವ ಬದಲು, ನೇರವಾಗಿ ತಿರುಗೇಟು ಕೊಡುವ ಕೆಲಸವನ್ನು ಭಾರತ ಈ ಕಾರ್ಯಾಚರಣೆ ಮೂಲಕ ಸಾಬೀತು ಮಾಡಿತ್ತು. ಹಾಗಾಗಿ ಪಾಕಿಸ್ತಾನವು ಭಯೋತ್ಪಾದಕ ಸಂಘಟನೆಗಳನ್ನು ತನ್ನ ಪರೋಕ್ಷ ಯುದ್ಧದ ದಾಳಗಳಾಗಿ ಬಳಸಿಕೊಳ್ಳುತ್ತಿರುವುದನ್ನ ಎದುರಿಸುವಲ್ಲಿ, 'ಆಪರೇಷನ್ ಸಿಂಧೂರ' ಭಾರತದ ಇತಿಹಾಸದಲ್ಲಿ ಒಂದು ಮಹತ್ವದ ಮೈಲಿಗಲ್ಲಾಗಿದೆ.


2025ರ ಮೇ 7ರಂದು ಆರಂಭವಾದ ಈ ಕಾರ್ಯಾಚರಣೆಯು, ಪಾಕಿಸ್ತಾನದಲ್ಲಿರುವ ಭಯೋತ್ಪಾದಕ ಮೂಲಸೌಕರ್ಯಗಳ ವಿರುದ್ಧ ನಡೆದ ತೀವ್ರಗತಿಯ ಮತ್ತು ನಿಖರ ಅಭಿಯಾನವಾಗಿತ್ತು. ಇದು ಸಂಘರ್ಷವು ಮಿತಿಮೀರದಂತೆ ಎಚ್ಚರವಹಿಸಿ ಶತ್ರುವಿಗೆ ಗರಿಷ್ಠ ಹಾನಿ ಉಂಟುಮಾಡುವಂತೆ ವಿನ್ಯಾಸಗೊಳಿಸಲಾದ ಭಾರತದ ಸಂಘಟಿತ ಮಿಲಿಟರಿ ಸಾಮರ್ಥ್ಯದ ಪ್ರದರ್ಶನವಾಗಿತ್ತು. 1 ವರ್ಷದ ನಂತರ, ಇದು ಭಾರತದ ಬೆಳೆಯುತ್ತಿರುವ 'ಕಾರ್ಯತಂತ್ರದ ಪ್ರಬುದ್ಧತೆ'ಗೆ ಸಾಕ್ಷಿಯಾಗಿ ನಿಂತಿದೆ.

## ಪ್ರಧಾನಿ ನರೇಂದ್ರ ಮೋದಿ ಕಾರ್ಯಕ್ರಮಕ್ಕೆ ಸಿದ್ಧತೆ

ಬೆಂಗಳೂರು: ಮಮತಾ ಬ್ಯಾನರ್ಜಿ ರಾಜೀನಾಮೆ ನೀಡಲ್ಲ ಎನ್ನುವ ಮೂಲಕ ಸಂವಿಧಾನಕ್ಕೆ ಅಗೌರವ ತೋರಿದ್ದಾರೆ. ಅವರಿಗೆ ಸಮಸ್ಯೆ ಇದ್ದರೆ ಕೋರ್ಟ್ ಮೊರೆ ಹೋಗಬೇಕೇ ಹೊರತು ಕೊಲೆ ಮಾಡಿಸಬಾರದು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆಕ್ರೋಶ ವ್ಯಕ್ತಪಡಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಮತಾ ಬ್ಯಾನರ್ಜಿ ಸಂವಿಧಾನಕ್ಕೆ ಅಗೌರವ ತೋರಿದ್ದಾರೆ.

ತಮ್ಮನ್ನು ವಜಾ ಮಾಡಿ ಕಳುಹಿಸಲಿ, ಅದರಿಂದ ಹೊಸ ನಾಟಕ ನಡೆಯಲಿ ಎಂದೇ ಅವರು ಬಯಸುತ್ತಿದ್ದಾರೆ. ಅವರಿಗೆ ಕಾನೂನು, ಸಂವಿಧಾನ ಎಂಬುದು ಗೊತ್ತಿಲ್ಲ. ಮುಖ್ಯಮಂತ್ರಿ ಕುರ್ಚಿಗೆ ಅವರು ಫೆವಿಕಾಲ್ ಹಾಕಿಕೊಂಡು ಕೂತಿದ್ದಾರೆ. ಮಾನ ಮರ್ಯಾದೆ ಇರುವ ಯಾವುದೇ ಮುಖ್ಯಮಂತ್ರಿ ರಾಜೀನಾಮೆ ಕೊಟ್ಟು ನಿರ್ಗಮಿಸುತ್ತಾರೆ. ಸಿಎಂ ಸ್ಥಾನಕ್ಕೆ ಗೌರವದಿಂದ ನಡೆದುಕೊಳ್ಳಬೇಕು. ಅವರಿಗೆ ಗಲಭೆ ನಡೆಯಬೇಕೆಂಬ ಉದ್ದೇಶವಿದೆ. ಅದಕ್ಕಾಗಿ ಚಂದ್ರನಾಥ ರಥ್ ಅವರನ್ನು ಟಿಎಂಸಿ ಮುಖಂಡರು ಕೊಲೆ ಮಾಡಿದ್ದಾರೆ. ತಾವೊಬ್ಬರೇ ರಾಜ್ಯವನ್ನು ನಿಯಂತ್ರಿಸಬೇಕೆಂಬ ಮನಸ್ಥಿತಿ ಅವರಲ್ಲಿದೆ. ಅವರು ರಾಜೀನಾಮೆ ಸಲ್ಲಿಸದಿದ್ದರೂ ಹಳೆ ವಿಧಾನಸಭೆ



ವಿಸರ್ಜನೆಯಾದ ನಂತರ ಸಹಜವಾಗಿಯೇ ಅಧಿಕಾರ ಹೊರಟುಹೋಗಲಿದೆ. ನಾನೇ ಸಿಎಂ ಆಗಿ ಮುಂದುವರಿಯಬೇಕೆಂಬ ಅಧಿಕಾರದ ಮದದಿಂದ ಅವರು ವರ್ತಿಸುತ್ತಾರೆ. ಇಷ್ಟು ದೀರ್ಘ ಕಾಲ ಸಿಎಂ ಆಗಿರುವ ಅವರಿಗೆ ಸಾಮಾನ್ಯ ಪ್ರಜ್ಞೆ ಇಲ್ಲ ಎಂಬುದು ಜನರಿಗೆ ಗೊತ್ತಾಗಿದೆ.

ಮೂವತ್ತು ವರ್ಷ ಅಧಿಕಾರ ನಡೆಸಿದ ಹಿಂದಿನ ನಾಯಕರು ಕೂಡ ಇದೇ ರೀತಿ ವರ್ತಿಸಿದ್ದರೆ ಮಮತಾ ಬ್ಯಾನರ್ಜಿ ಏನು ಮಾಡುತ್ತಿದ್ದರು? ಅವರಿಗೆ ಸಮಸ್ಯೆ ಇದ್ದರೆ ಕೋರ್ಟ್ ಮೊರೆ ಹೋಗಲಿ. ಡಿ.ಎನ್. ಜೀವರಾಜ್‌ಗೆ ಸಂಬಂಧಿಸಿದಂತೆ ನಾವು ಕೂಡ ಕೋರ್ಟ್ ಮೊರೆ ಹೋಗಿದ್ದೆವು. ಈ ರೀತಿ ಕಾನೂನು ಹೋರಾಟ ಮಾಡಬೇಕೆ ಹೊರತು ಕೊಲೆ ಮಾಡಲು ಹೋಗಬಾರದು ಎಂದರು.

ಪಂಚರಾಜ್ಯಗಳ ಚುನಾವಣೆ ಬಳಿಕ ಪ್ರಧಾನಿ ನರೇಂದ್ರ ಮೋದಿ ಬೆಂಗಳೂರಿಗೆ ಬರುತ್ತಿದ್ದಾರೆ. ಬಿಜೆಪಿಯ ಸಾಧನೆ ಇಡೀ ಜಗತ್ತಿಗೆ ಗೊತ್ತಾಗಿದ್ದು, ಅಮೆರಿಕದ ಅಧ್ಯಕ್ಷರು ಕೂಡ ಪ್ರಧಾನಿಗೆ ಅಭಿನಂದನೆ ಹೇಳಿದ್ದಾರೆ. ಪಶ್ಚಿಮ ಬಂಗಾಳದಲ್ಲಿ ಮೊದಲ ಬಾರಿಗೆ ಬಿಜೆಪಿ ಸರ್ಕಾರ ರಚಿಸುತ್ತಿರುವುದು ಪಕ್ಷಕ್ಕೆ ಕೀರ್ತಿ ತರುವ ಸಂಗತಿ. ಬೆಂಗಳೂರಿಗೆ ಬರಲಿರುವ ಪ್ರಧಾನಿಗೆ ಗೌರವ ಸಲ್ಲಿಸಲಿದ್ದು, ಬೆಂಗಳೂರಿನ ಜನರನ್ನುದ್ದೇಶಿಸಿ ಪ್ರಧಾನಿ ಮಾತಾಡಲಿದ್ದಾರೆ.

ಭಾರತ ಸಾರಥಿ
BHARATHA SARATHI KANNADA DAILY NEWS PAPER
08/05/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಬಂಗಾಳದಲ್ಲೇ ಬೀಡುಬಿಟ್ಟ ಶಾ

ಕೋಲ್ಕತ್ತಾ

ಪಶ್ಚಿಮ ಬಂಗಾಳದಲ್ಲಿ ಅಭೂತಪೂರ್ವಗೆಲುವು ಸಾಧಿಸಿರುವ ಬಿಜೆಪಿ ಇದೀಗ ಮೊದಲ ಬಾರಿ ಸರ್ಕಾರ ರಚನೆಗೆಸಿದ್ಧತೆ ನಡೆಸಿದ್ದು, ಶಾಸಕಾಂಗ ಪಕ್ಷದ ನಾಯಕನ ಆಯ್ಕೆಗೆ ಸ್ವತಃ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರೇ ಅಖಾಡಕ್ಕೆ ಳಿದಿದ್ದಾರೆ.

ಪಕ್ಷದ ಕೇಂದ್ರ ವೀಕ್ಷಕರಾಗಿ ನೇಮಕಗೊಂಡಿರುವ ಅಮಿತ್ ಶಾ ಅವರು ಕೋಲ್ಕತ್ತಾದಲ್ಲೇ ವಾಸ್ತವ್ಯ ಹೂಡಿದ್ದು, ಮುಖ್ಯಮಂತ್ರಿ ಆಯ್ಕೆಯ ಮೇಲೆ ಬಿಗಿ ಹಿಡಿತ ಸಾಧಿಸುತ್ತಿದ್ದಾರೆ.

ಏಕೆಂದರೆ ಅವರು ಚುನಾವಣಾ ಪ್ರಚಾರವನ್ನು ವೈಯಕ್ತಿಕವಾಗಿ ಮೇಲ್ವಿಚಾರಣೆ ಮಾಡಲು ವಾರಗಳ ಕಾಲ ರಾಜ್ಯದಲ್ಲಿ ಬೀಡುಬಿಟ್ಟಿದ್ದರು. ಇದು ಬಂಗಾಳಕ್ಕೆ ಬಿಜೆಪಿ ನೀಡುವ ಪ್ರಾಮುಖ್ಯತೆಯನ್ನು ಒತ್ತಿಹೇಳುತ್ತದೆ.

ಕೋಲ್ಕತ್ತಾದಲ್ಲಿ ಅಮಿತ್ ಶಾ ಅವರ ಉಪಸ್ಥಿತಿಯು ಅಧಿಕಾರವನ್ನು ಬಲಪಡಿಸಲು ಮತ್ತು ಆಂತರಿಕ ಭಿನ್ನಾಭಿಪ್ರಾಯವನ್ನು ತಪ್ಪಿಸುವ ಕಾರ್ಯತಂತ್ರದ ಭಾಗವಾಗಿದೆ ಎಂದು ಹೇಳಲಾಗುತ್ತಿದೆ.

ಹೆಚ್ಚುತ್ತಿರುವ ಊಹಾಪೋಹಗಳ ನಡುವೆ, ಮೇ 8 ರಂದು ನಡೆಯಲಿರುವ ಬಿಜೆಪಿ ಶಾಸಕಾಂಗ ಪಕ್ಷದ ಸಭೆಗೆ ಮುಂಚಿತವಾಗಿ, ಸುವೇಂದು ಅಧಿಕಾರಿ ಮುಖ್ಯಮಂತ್ರಿ ಹುದ್ದೆಯ ರೇಸ್ ನಲ್ಲಿ ಮುಂಚೂಣಿಯಲ್ಲಿದ್ದಾರೆ. ಈ ಸಭೆಯಲ್ಲಿ ಅಮಿತ್ ಶಾ ಭಾಗವಹಿಸುವ ನಿರೀಕ್ಷೆಯಿದೆ.

ಪಶ್ಚಿಮ ಬಂಗಾಳದ ರಾಜಕೀಯ ಸಂಸ್ಕೃತಿಯು ಸಾಂಪ್ರದಾಯಿಕವಾಗಿ ಜಾತಿಗಿಂತ ವರ್ಗ ಆಧಾರಿತ ಚರ್ಚೆಯಿಂದ ಹೆಚ್ಚಾಗಿ ರೂಪುಗೊಂಡಿದೆ, ಇದು ಎಡರಂಗ ಯುಗದ ಪರಂಪರೆಯಾಗಿದ್ದು, ಇದು ರಾಜ್ಯದಲ್ಲಿ ಬಿಜೆಪಿಯ ಕಾರ್ಯತಂತ್ರದ ಮೇಲೆ ಪ್ರಭಾವ ಬೀರುತ್ತಿದೆ.

ಈ ಹಿನ್ನೆಲೆಯಲ್ಲಿ, ಸುವೇಂದು ಅಧಿಕಾರಿ ಮುಖ್ಯಮಂತ್ರಿಯಾಗಿ ಹೊರಹೊಮ್ಮುವ ಸಾಧ್ಯತೆಯನ್ನು ತಳ್ಳಿಹಾಕುವಂತಿಲ್ಲ ಎಂದು ಬಿಜೆಪಿ ನಾಯಕರು ಹೇಳುತ್ತಾರೆ.

ಪಶ್ಚಿಮ ಬಂಗಾಳ ನಾಯಕತ್ವದ ಆಯ್ಕೆಯಲ್ಲಿ ಜಾತಿ ನಿರ್ಣಾಯಕ ಅಂಶವಾಗಿರಬಾರದು ಎಂದು ಪಕ್ಷದ ಮೂಲಗಳು ಸೂಚಿಸಿವೆ. ಬದಲಾಗಿ, ಸಾಂಸ್ಥಿಕ ಶಕ್ತಿ, ಆಡಳಿತಾತ್ಮಕ ಅನುಭವ ಮತ್ತು ದೀರ್ಘಾವಧಿಯ ಚುನಾವಣಾ ಕಾರ್ಯತಂತ್ರ, ವಿಶೇಷವಾಗಿ 2029ರ ಲೋಕಸಭಾ ಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು, ನಿರ್ಧಾರ ತೆಗೆದುಕೊಳ್ಳುವ ಸಾಧ್ಯತೆಯಿದೆ.

ಬಿಜೆಪಿ ರಾಜ್ಯಾಧ್ಯಕ್ಷ ಸಮಿಕ್ ಭಟ್ಟಾಚಾರ್ಯ ಅವರು ನೂತನ ಮುಖ್ಯಮಂತ್ರಿಯ ಹೆಸರನ್ನು ಪ್ರಸ್ತಾಪಿಸುವ ನಿರೀಕ್ಷೆಯಿದೆ ಮತ್ತು ಇನ್ನೊಬ್ಬ ಹಿರಿಯ ನಾಯಕರು ಅದನ್ನು ಬೆಂಬಲಿಸಬಹುದು ಎಂದು ಬಿಜೆಪಿ ಹಿರಿಯ ನಾಯಕರೊಬ್ಬರು ಹೇಳಿದ್ದಾರೆ.

# ಕಡಂದಲೆ 400 ಕೆ.ವಿ. ಉಪಕೇಂದ್ರ ಶೀಘ್ರ ಪೂರ್ಣ

ಮಂಗಳೂರು

ಕರಾವಳಿ ಭಾಗದ ಜಿಲ್ಲೆಗಳಾದ ದಕ್ಷಿಣ ಕನ್ನಡ ಹಾಗೂ ಉಡುಪಿಗೆ ಗುಣಮಟ್ಟದ ಹಾಗೂ ತಡೆರಹಿತ ವಿದ್ಯುತ್ ಪೂರೈಕೆ ಒದಗಿಸುವ ಮಹತ್ವಾಕಾಂಕ್ಷಿ 'ಕಡಂದಲೆ 400 ಕೆವಿ ವಿದ್ಯುತ್ ಉಪಕೇಂದ್ರ' ಕಾಮಗಾರಿಯನ್ನು ಜುಲೈ 15ರೊಳಗೆ ಪೂರ್ಣಗೊಳಿಸಲಾಗುವುದು ಎಂದು ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕರಾದ ಡಾ. ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ.



ಇಂಧನ ಸಚಿವರಾದ ಕೆ. ಜೆ. ಜಾರ್ಜ್ ಅವರ ನಿರ್ದೇಶನದಂತೆ ಕಾಮಗಾರಿ ವೇಗ ಪಡೆದುಕೊಂಡಿದ್ದು, ಭೂವಿವಾದದ ಹಿನ್ನೆಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಸ್ಥಗಿತಗೊಂಡಿದ್ದ ದಕ್ಷಿಣ ಕನ್ನಡ ಜಿಲ್ಲೆಯ ಮೂಡಬಿದರೆ ತಾಲೂಕಿನ ಕಡಂದಲೆ ಗ್ರಾಮದ 400 ಕೆವಿ ಲೈನ್ ಕಾಮಗಾರಿಗೆ ಇದೀಗ ಪುನಃ ಚೈತನ್ಯ ಬಂದಿದೆ. ಇಂಧನ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ ಅವರ ಸಹಕಾರದಿಂದ ಎಲ್ಲಾ ಅಡೆತಡೆಗಳನ್ನು ನಿವಾರಿಸಲಾಗಿದೆ.

ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪ್ರಗತಿ ಪರಿಶೀಲನೆ ನಡೆಸಿದ ಡಾ. ರಾಮ್ ಪ್ರಸಾತ್ ಮನೋಹರ್ ಅವರು ಮಾತನಾಡಿ, "ಮಂಗಳೂರು ರಾಜ್ಯದ ಪ್ರಮುಖ ಕೈಗಾರಿಕಾ ಕೇಂದ್ರವಾಗಿದ್ದು, ನಿರಂತರ ವಿದ್ಯುತ್ ಪೂರೈಕೆ ಅತ್ಯಗತ್ಯ.

ಮುಂಬರುವ ಮುಂಗಾರಿನೊಳಗೆ ಯೋಜನೆಯನ್ನು ಪೂರ್ಣಗೊಳಿಸಿ ವಿದ್ಯುತ್ ಪ್ರಸರಣ ಆರಂಭಿಸಲಾಗುವುದು" ಎಂದು ಹೇಳಿದರು.

ಮಂಗಳೂರಿನ ದೀರ್ಘಕಾಲೀನ ವಿದ್ಯುತ್ ಭದ್ರತೆ ದೃಷ್ಟಿಯಿಂದ ಕೈಗೊಳ್ಳಲಾಗುತ್ತಿರುವ ಈ ಮಹತ್ವದ ಯೋಜನೆಗೆ ಸಾರ್ವಜನಿಕರು ಸಹಕಾರ ನೀಡುವಂತೆ ಡಾ. ರಾಮ್ ಪ್ರಸಾತ್ ಮನೋಹರ್ ಮನವಿ ಮಾಡಿದ್ದಾರೆ.






ಬೆಂಗಳೂರು ಕೆಂಗೇರಿಯ ಬಿಜಿಎಸ್ ಹೆಲ್ತ್ ಅಂಡ್ ಎಜುಕೇಷನ್ ಸಿಟಿಯ ಬಿಜಿಎಸ್ ಆಡಿಟೋರಿಯಂನಲ್ಲಿ ಬಿಜಿಎಸ್‌ಬಿ ಸ್ಕೂಲ್ ಕಾಲೇಜಿನ ವಿದ್ಯಾರ್ಥಿಗಳಿಗಾಗಿ ಆಯೋಜಿಸಲಾದ 'ಗ್ರಾಜುಯೇಷನ್ ಸಮಾರಂಭ 2026' ಭವ್ಯವಾಗಿ ನಡೆಯಿತು. ಬಿಜಿಎಸ್ ಮತ್ತು ಎಸ್‌ಜೆಬಿ ಸಮೂಹ ಸಂಸ್ಥೆಗಳ ವ್ಯವಸ್ಥಾಪಕ ನಿರ್ದೇಶಕರಾದ ಪರಮಪೂಜ್ಯ ಶ್ರೀ ಶ್ರೀ ಡಾ. ಪ್ರಕಾಶನಾಥ ಸ್ವಾಮೀಜಿಗಳವರು ದಿವ್ಯ ಸಾನಿಧ್ಯ ವಹಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಬೆಂಗಳೂರು ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಡಾ.ಎಸ್.ಎಂ.ಜಯಕರರವರು ಸೇರಿದಂತೆ ಇತರ ಗಣ್ಯರು ಉಪಸ್ಥಿತರಿದ್ದರು. ಬಿಜಿಎಸ್ ಮತ್ತು ಎಸ್‌ಜೆಬಿ ಸಮೂಹ ಸಂಸ್ಥೆಗಳ ಸಿಬ್ಬಂದಿ ವರ್ಗದವರು, ಪೋಷಕರು ಹಾಗೂ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಮಾರಂಭವನ್ನು ಸಂಭ್ರಮದಿಂದ ಆಚರಿಸಿದರು.

# ಸಾಧಕ ವಿದ್ಯಾರ್ಥಿಗಳಿಗೆ 35 ಸಾವಿರ ಪ್ರೋತ್ಸಾಹಧನ

ಬೆಂಗಳೂರು

ಬೆಂಗಳೂರು ದಕ್ಷಿಣ ನಗರ ಪಾಲಿಕೆ ವ್ಯಾಪ್ತಿಯ ಉತ್ತರಹಳ್ಳಿ ಪದವಿ ಪೂರ್ವ ಕಾಲೇಜಿನ ಸಾಧಕ ವಿದ್ಯಾರ್ಥಿಗಳಿಗೆ ಪಾಲಿಕೆ ವತಿಯಿಂದ ಪ್ರೋತ್ಸಾಹ ಧನ ನೀಡಿ ಸನ್ಮಾನಿಸಲಾಯಿತು. ಜಯನಗರದಲ್ಲಿರುವ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ 85 ಶೇಕಡಕ್ಕಿಂತ ಹೆಚ್ಚು ಅಂಕಗಳೊಂದಿಗೆ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪಾಲಿಕೆ ಆಯುಕ್ತರಾದ ಕೆ.ಎನ್.ರಮೇಶ್ ಅವರು ಗೌರವಿಸಿದರು.



2024–25ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಫಲಿತಾಂಶ ದಾಖಲಿಸಿದ ಉತ್ತರಹಳ್ಳಿ ಪದವಿ ಪೂರ್ವ ಕಾಲೇಜಿನ ಎಂಟು ವಿದ್ಯಾರ್ಥಿಗಳಿಗೆ ತಲಾ ರೂ.35,000 ನಗದು ಪುರಸ್ಕಾರ ನೀಡಲಾಯಿತು.

ಪಾಲಿಕೆ ವ್ಯಾಪ್ತಿಯ ಐದು ಕಾಲೇಜುಗಳಲ್ಲೇ ವಾಣಿಜ್ಯ ವಿಭಾಗದ ಪ್ರತೀಕ್ ಪಿ (585 ಅಂಕ, 97.50%) ಪ್ರಥಮ ಸ್ಥಾನ ಪಡೆದು ಕಾಲೇಜಿಗೆ ಕೀರ್ತಿ ತಂದಿದ್ದಾರೆ.

# 'ಡಿಎಂಕೆಗೆ ಕೈ ಕೊಟ್ಟ ಕಾಂಗ್ರೆಸ್, ಇಂಡಿ ಒಕ್ಕೂಟದ ಪಕ್ಷಗಳು ಪರಾಮರ್ಶೆ ಮಾಡಿಕೊಳ್ಳಲಿ'

ಬೆಂಗಳೂರು

ತಮಿಳುನಾಡಲ್ಲಿ ಡಿಎಂಕೆ ಜೊತೆ ಚುನಾವಣೆ ಎದುರಿಸಿದ ಕಾಂಗ್ರೆಸ್, ಈಗ ಅದೇ ಪಕ್ಷಕ್ಕೆ ಕೈ ಕೊಟ್ಟಿದೆ. ಇಂಡಿ ಒಕ್ಕೂಟದ ಮಿತ್ರಪಕ್ಷಗಳು ಈ ಬಗ್ಗೆ ಪರಾಮರ್ಶೆ ಮಾಡಬೇಕಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದರು.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮಿಳುನಾಡಲ್ಲಿ ಕಾಂಗ್ರೆಸ್‌ನ ಬಣ್ಣ ಬಯಲಾಗಿದೆ. ಕಾಂಗ್ರೆಸ್‌ನ ಸ್ನೇಹ ಮಾಡಿದ ಡಿಎಂಕೆ ಪಕ್ಷದ ನಾಯಕರು ಈಗ ಸಪ್ಪೆ ಮೋರೆ ಹಾಕಿಕೊಂಡಿದ್ದಾರೆ. ಚುನಾವಣೆ ಬಳಿಕ ಒಂದಾಗಿ ಸರ್ಕಾರ ರಚಿಸಬೇಕೆಂದು ತೀರ್ಮಾನವಾಗಿತ್ತು. ಫಲಿತಾಂಶ ಬಂದ ನಂತರ ಕಾಂಗ್ರೆಸ್ ಗೆದ್ದೆತ್ತಿನ ಬಾಲ ಹಿಡಿದಿದೆ. ಯಾವುದೇ ಸಿದ್ಧಾಂತವನ್ನು ಇವರು ಅನುಸರಿಸುತ್ತಿಲ್ಲ. ಇವರನ್ನು ನಂಬಿದ ಡಿಎಂಕೆ ಬೆನ್ನಿಗೆ ಚೂರಿ ಹಾಕಿದ್ದು, ಕಾಂಗ್ರೆಸ್ ಕೈ ಕೊಡುವ ಪಕ್ಷ ಎಂದು ಜನರಿಗೆ ಗೊತ್ತಾಗಿದೆ. ಕಾಂಗ್ರೆಸ್ ಪಕ್ಷ ನಂಬಿಕೆಗೆ ಅರ್ಹವಲ್ಲ ಎಂಬುದು ಸ್ಪಷ್ಟವಾಗಿದೆ. ಇಂಡಿ ಒಕ್ಕೂಟದಲ್ಲಿರುವ ಬೇರೆ ಪಕ್ಷಗಳು ಈ ಬಗ್ಗೆ ಪರಾಮರ್ಶೆ ಮಾಡಿಕೊಳ್ಳಬೇಕಿದೆ. ಕಾಂಗ್ರೆಸ್ ಹೇಗೆ ಕೈ ಕೊಡುತ್ತದೆ ಎಂದು ಗಮನಿಸಬೇಕಾಗುತ್ತದೆ. ಇಲ್ಲವಾದರೆ ಮಿತ್ರಪಕ್ಷಗಳಿಗೂ ಡಿಎಂಕೆ ಸ್ಥಿತಿಯೇ ಬರಲಿದೆ ಎಂದರು.

ಶಾಸಕ ಡಿ.ಎನ್.ಜೀವರಾಜ್‌ಗೆ ಪ್ರಮಾಣವಚನ ಬೋಧಿಸಲು ಸ್ಪೀಕರ್ ಯು.ಟಿ.ಖಾದರ್ ಒಪ್ಪಿಕೊಂಡಿದ್ದಾರೆ. ಈ ಬಗ್ಗೆ ರಾಜ್ಯಪಾಲರ ಬಳಿ ಹೋದ ನಂತರ ಪ್ರಮಾಣವಚನ ಬೋಧಿಸಲು ಅವಕಾಶ ನೀಡಿದ್ದಾರೆ. ಒಂದು ಬಾರಿ ರಾಜ್ಯಪತ್ರದಲ್ಲಿ ಹೆಸರು ಪ್ರಕಟವಾದ ನಂತರ ಹಾಗೂ ಚುನಾವಣಾ ಆಯೋಗ ಪ್ರಮಾಣಪತ್ರ ನೀಡಿದ ಬಳಿಕ ಪ್ರಮಾಣವಚನ ಬೋಧಿಸಲೇಬೇಕು. ರಾಜ್ಯಪಾಲರು ಅಥವಾ ಅವರು ಸೂಚಿಸಿದ ವ್ಯಕ್ತಿ ಪ್ರಮಾಣವಚನ ಬೋಧಿಸಬಹುದು. ಕೊನೆ ಹಂತದಲ್ಲಿ ಸ್ಪೀಕರ್ ಯು.ಟಿ.ಖಾದರ್ ಅವರೇ ಫಲಿತಾಂಶವನ್ನು ಒಪ್ಪಿಕೊಂಡು ಪ್ರಮಾಣವಚನ ನೀಡುತ್ತಿರುವುದು ಸಂತಸ ತಂದಿದೆ ಎಂದರು.

ರಾಜೇಗೌಡರು ಗೆದ್ದಾಗ ಚುನಾವಣಾ ಆಯೋಗ ಸರಿ ಇದೆ, ಈಗ ಸರಿ ಇಲ್ಲ ಎನ್ನುತ್ತಾರೆ. ಕೇರಳದಲ್ಲಿ ಇವಿಎಂ ಸರಿ ಇದೆ, ಪಶ್ಚಿಮ ಬಂಗಾಳದಲ್ಲಿ ಸರಿ ಇಲ್ಲ ಎಂದು ರಾಹುಲ್ ಗಾಂಧಿ ಹೇಳುತ್ತಿದ್ದು, ಇವರೆಲ್ಲರಿಗೂ ಬ್ರೈನ್ ಮ್ಯಾಪಿಂಗ್ ಮಾಡಬೇಕಿದೆ. ಇನ್ನಾದರೂ ಚುನಾವಣಾ ಫಲಿತಾಂಶಗಳ ಬಗ್ಗೆ ಆಲೋಚಿಸಿ ಮಾತನಾಡಲಿ ಎಂದರು. ಮಲ್ಲಿಕಾರ್ಜುನ ಖರ್ಗೆ ಪ್ರವೇಶದ ಬಳಿಕ ಸಿಎಂ ಕುರ್ಚಿ ಬಗ್ಗೆ ಯಾರೂ ಮಾತಾಡುತ್ತಿಲ್ಲ. ಡಿ.ಕೆ.ಶಿವಕುಮಾರ್ ಅವರ ಕನಸು ಭಗ್ನವಾಗಿದೆ. ಕನಕಪುರದ ಬಂಡೆಯಾದ ನಾನು ವಿಧಾನಸೌಧಕ್ಕೆ ಮೆಟ್ಟಿಲಾಗುತ್ತೇನೆ ಎಂದು ಹೇಳಿದ್ದರು. ಕಾಂಗ್ರೆಸ್‌ನ ಹಿರಿಯ ನಾಯಕರು ಈ ಬಂಡೆಯನ್ನು ಶಿಲೆಯಾಗಿ ಕೆತ್ತುತ್ತಲೇ ಇದ್ದಾರೆ ಎಂದರು.

# 'ಕುರ್ಸಿ ಪೆ ನಜರ್' ಬಿಡುಗಡೆ

ಬೆಂಗಳೂರು

ಪಿಡಿಲೈಟ್ ಇಂಡಸ್ಟ್ರೀಸ್ ತನ್ನ ಜನಪ್ರಿಯ ಫೆವಿಕೋಲ್ ಬ್ರ್ಯಾಂಡ್‌ನ ಹೊಸ ಟಿವಿ ಜಾಹೀರಾತು 'ಕುರ್ಸಿ ಪೆ ನಜರ್' ಅನ್ನು ಬಿಡುಗಡೆ ಮಾಡಿದೆ. ಭಾರತೀಯ ಸಮಾಜದಲ್ಲಿ 'ಕುರ್ಚಿ'ಗೆ ಇರುವ ಮಹತ್ವ, ಅಧಿಕಾರ ಮತ್ತು ಮಹತ್ವಾಕಾಂಕ್ಷೆಯ ಸಂಕೇತವಾಗಿ ಅದು ಹೇಗೆ ರೂಪುಗೊಂಡಿದೆ ಎಂಬ ಅಂಶವನ್ನು ಹಾಸ್ಯಮಯ ಹಾಗೂ ಮನಮುಟ್ಟುವ ರೀತಿಯಲ್ಲಿ ಈ ಜಾಹೀರಾತು ಚಿತ್ರಿಸಿದೆ.

ಮನೆ, ಕಚೇರಿ ಹಾಗೂ ವಿವಿಧ ಸಂಸ್ಥೆಗಳಲ್ಲಿ ಸಾಮಾನ್ಯವಾಗಿ ಕಾಣಿಸಿಕೊಳ್ಳುವ "ಕುರ್ಚಿಯ ಮೇಲಿನ ಕಣ್ಣು" ಎಂಬ ಮನಸ್ಥಿತಿಯನ್ನು ಆಧರಿಸಿ ರೂಪುಗೊಂಡಿರುವ ಈ ಕಿರುಚಿತ್ರ, ಯಾರು ಕುರ್ಚಿಯಲ್ಲಿ ಕುಳಿತಿದ್ದಾರೆ, ಯಾರು ಅದರ ನಿರೀಕ್ಷೆಯಲ್ಲಿ ಇದ್ದಾರೆ ಹಾಗೂ ಮುಂದಿನ ಹಕ್ಕುದಾರ ಯಾರು ಎಂಬ ಪ್ರಶ್ನೆಗಳ ಮೂಲಕ ಮಾನವ ಸಂಬಂಧಗಳು ಮತ್ತು ಪ್ರಭಾವದ ಸೂಕ್ಷ್ಮತೆಯನ್ನು ಅನಾವರಣ ಗೊಳಿಸುತ್ತದೆ.




ಫೆವಿಕೋಲ್‌ನ ವಿಶಿಷ್ಟ ಹಾಸ್ಯಶೈಲಿ ಮತ್ತು ಜನಜೀವನಕ್ಕೆ ಹತ್ತಿರವಾಗಿರುವ ಕಥನಶೈಲಿ ಮತ್ತೊಮ್ಮೆ ಈ ಜಾಹೀರಾತಿನಲ್ಲಿ ಮೂಡಿಬಂದಿದೆ.

ಈ ಅಭಿಯಾನವು ಫೆವಿಕೋಲ್ ಮತ್ತು ಜಾಹೀರಾತು ಕ್ಷೇತ್ರದ ದಿಗ್ಗಜ ಪಿಯೂಷ್ ಪಾಂಡೆ ಅವರ ದೀರ್ಘಕಾಲದ ಸೃಜನಾತ್ಮಕ ಸಹಯೋಗದ ಅಂತಿಮ ಅಧ್ಯಾಯವಾಗಿರುವುದು ವಿಶೇಷ. ಹಲವು ದಶಕಗಳಿಂದ ಭಾರತೀಯರ ಮನಸ್ಸಿನಲ್ಲಿ ಅಚ್ಚೊತ್ತಿದ ಅನೇಕ ಫೆವಿಕೋಲ್ ಜಾಹೀರಾತುಗಳ ಹಿಂದಿರುವ ಸೃಜನಶೀಲ ಶಕ್ತಿ ಪಿಯೂಷ್ ಪಾಂಡೆ ಅವರದ್ದಾಗಿತ್ತು.

ಈ ಕುರಿತು ಮಾತನಾಡಿದ ಪಿಡಿಲೈಟ್ ಇಂಡಸ್ಟ್ರೀಸ್ ವ್ಯವಸ್ಥಾಪಕ ನಿರ್ದೇಶಕ ಸುಧಾಂಶು ವತ್ಸ್, "ಫೆವಿಕೋಲ್ ಯಾವಾಗಲೂ ಸರಳ ಮಾನವೀಯ ಸತ್ಯಗಳನ್ನು ಜನರ ಮನಸಿಗೆ ಹತ್ತಿರವಾಗುವ ರೀತಿಯಲ್ಲಿ ಹೇಳುತ್ತಾ ಬಂದಿದೆ. 'ಕುರ್ಸಿ ಪೆ ನಜರ್' ಭಾರತೀಯ ಸಮಾಜದ ಪ್ರತಿಯೊಂದು ಕಾರ್ಯಕ್ಷೇತ್ರ ಹಾಗೂ ಮನೆಯಲ್ಲೂ ಕಂಡುಬರುವ ಮಹತ್ವಾಕಾಂಕ್ಷೆಯ ಸಂಕೇತವನ್ನು ಆಧರಿಸಿದೆ. ಸಾಮಾನ್ಯ ಕ್ಷಣಗಳನ್ನು ಅಸಾಮಾನ್ಯ ಕಥೆಗಳನ್ನಾಗಿ ರೂಪಿಸುವ ಅದ್ಭುತ ಸಾಮರ್ಥ್ಯ ಪಿಯೂಷ್ ಪಾಂಡೆ ಅವರಿಗಿತ್ತು.



ಶೃಂಗೇರಿ ವಿಧಾನಸಭಾ ಕ್ಷೇತ್ರದಲ್ಲಿ ಮರು ಮತ ಎಣಿಕೆ ಬಳಿಕ ಶಾಸಕರಾಗಿ ಆಯ್ಕೆಯಾಗಿರುವ ಡಿ.ಎನ್. ಜೀವರಾಜ್ ಅವರಿಗೆ ಸಭಾಧ್ಯಕ್ಷ ಯು.ಟಿ.ಖಾದರ್ ಅವರು ವಿಧಾನಸೌಧದಲ್ಲಿ ಇಂದು ಪ್ರಮಾಣವಚನ ಬೋಧಿಸಿದರು. ವಿಪಕ್ಷ ನಾಯಕ ಆರ್.ಅಶೋಕ್, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಶಾಸಕ ಎಸ್. ಮುನಿರಾಜು ಅವರು ಇದ್ದರು.

# ರೇಂಜ್ ರೋವರ್ ಸಿಬಿಯು ಮಾದರಿ ಪ್ರಕಟ

ಬೆಂಗಳೂರು

ಜಾಗ್ವಾರ್ ಲ್ಯಾಂಡ್ ರೋವರ್ ಇಂಡಿಯಾ ಭಾರತ–ಯು.ಕೆ. ಮುಕ್ತ ವ್ಯಾಪಾರ ಒಪ್ಪಂದ (ಎಫ್.ಟಿ.ಎ.) ಅನುಷ್ಠಾನದ ನಿರೀಕ್ಷೆಯಲ್ಲಿ ಯು.ಕೆ.ಯಿಂದ ಆಮದು ಮಾಡಿಕೊಳ್ಳಲಾಗುವ ತನ್ನ ಪ್ರಮುಖ ರೇಂಜ್ ರೋವರ್ ಸಿಬಿಯು ಮಾದರಿಗಳ ಮರುಬೆಲೆ ನಿಗದಿಯನ್ನು ಪ್ರಕಟಿಸಿದೆ.

ಈ ಮರುಬೆಲೆಯಿಂದ ಪ್ರಮುಖವಾಗಿ ರೇಂಜ್ ರೋವರ್ ಎಸ್.ವಿ. ಹಾಗೂ ರೇಂಜ್ ರೋವರ್ ಸ್ಪೋರ್ಟ್ ಎಸ್.ವಿ. ಮಾದರಿಗಳು ಪ್ರಯೋಜನ ಪಡೆಯಲಿವೆ.

ಕಂಪನಿಯ ಪ್ರಕಟಣೆಯ ಪ್ರಕಾರ, ರೇಂಜ್ ರೋವರ್ ಎಸ್.ವಿ. ಮಾದರಿಯ ಬೆಲೆಯನ್ನು ರೂ.425 ಲಕ್ಷಗಳಿಂದ ರೂ.350 ಲಕ್ಷಗಳಿಗೆ ಮರುನಿಗದಿಪಡಿಸಲಾಗಿದೆ. ಇದೇ ವೇಳೆ ರೇಂಜ್ ರೋವರ್ ಸ್ಪೋರ್ಟ್ ಎಸ್.ವಿ. ಬೆಲೆಯನ್ನು ರೂ.275 ಲಕ್ಷಗಳಿಂದ ರೂ.235 ಲಕ್ಷಗಳಿಗೆ ಇಳಿಕೆ ಮಾಡಲಾಗಿದೆ. ಈ ಮೂಲಕ ಭಾರತೀಯ ಮಾರುಕಟ್ಟೆಯಲ್ಲಿ ಈ ಮಾದರಿಗಳ ಸ್ಪರ್ಧಾತ್ಮಕ ಸ್ಥಾನವನ್ನು ಮತ್ತಷ್ಟು ಬಲಪಡಿಸುವ ಉದ್ದೇಶ ಹೊಂದಲಾಗಿದೆ.




ರೇಂಜ್ ರೋವರ್ ಎಸ್.ವಿ. ಮಾದರಿಯಲ್ಲಿ ಎಸ್.ವಿ. ಅಲ್ಟ್ರಾ ಮೆಟಾಲಿಕ್ ಪೇಂಟ್ ಆಯ್ಕೆಗಳು ಗ್ಲಾಸ್ ಮತ್ತು ಸ್ಯಾಟಿನ್ ಫಿನಿಷ್‌ಗಳಲ್ಲಿ ಇದೀಗ ಮೊದಲ ಬಾರಿಗೆ ಸ್ಟಾಂಡರ್ಡ್ ವೈಶಿಷ್ಟ್ಯವಾಗಿ ಲಭ್ಯವಾಗಲಿವೆ ಎಂದು ಕಂಪನಿ ತಿಳಿಸಿದೆ.

# ಪೇಟಿಎಂ ವಾರ್ಷಿಕ ಫಲಿತಾಂಶ ಪ್ರಕಟ

ಬೆಂಗಳೂರು

ಪೇಟಿಎಂ (ಒನ್ 97 ಕಮ್ಯುನಿಕೇಶನ್ಸ್ ಲಿಮಿಟೆಡ್) ಮಾರ್ಚ್ 2026ಕ್ಕೆ ಅಂತ್ಯವಾದ 2025–26ರ ಹಣಕಾಸು ವರ್ಷದ ಫಲಿತಾಂಶಗಳನ್ನು ಪ್ರಕಟಿಸಿದ್ದು, ಕಂಪನಿ ತನ್ನ ಇತಿಹಾಸದಲ್ಲಿ ಮೊದಲ ಬಾರಿಗೆ ಸಂಪೂರ್ಣ ವಾರ್ಷಿಕ ಲಾಭವನ್ನು ದಾಖಲಿಸಿದೆ.

ಈ ಅವಧಿಯಲ್ಲಿ ಕಂಪನಿಯ ಒಟ್ಟು ಆದಾಯ ರೂ.8,437 ಕೋಟಿ ಆಗಿದ್ದು, ಹಿಂದಿನ ವರ್ಷದ ಹೋಲಿಕೆಯಲ್ಲಿ ಶೇ.22ರಷ್ಟು ಹೆಚ್ಚಳ ಕಂಡಿದೆ. ಕಾರ್ಯಾಚರಣಾ ಕಾರ್ಯಕ್ಷಮತೆ ಉತ್ತಮಗೊಂಡ ಹಿನ್ನೆಲೆಯಲ್ಲಿ ಕಾರ್ಯಾಚರಣಾ ಲಾಭ ರೂ.502 ಕೋಟಿಗೆ ಏರಿಕೆಯಾಗಿದೆ. ಅದೇ ರೀತಿ ಶುದ್ಧ ಲಾಭ ರೂ.552 ಕೋಟಿಗೆ ತಲುಪಿದ್ದು, ಇದು ಕಂಪನಿಗೆ ಮಹತ್ವದ ಮೈಲಿಗಲ್ಲಾಗಿ ಪರಿಗಣಿಸಲಾಗುತ್ತಿದೆ.

ತ್ರೈಮಾಸಿಕ ಮಟ್ಟದಲ್ಲಿ ನೋಡಿದರೆ ಆದಾಯ ರೂ.2,264 ಕೋಟಿಯಾಗಿ ದಾಖಲಾಗಿದ್ದು, ವರ್ಷಾನುಗತವಾಗಿ ಶೇ.18ರಷ್ಟು ಬೆಳವಣಿಗೆ ಕಂಡಿದೆ. ಹೋಲಿಕೆ ಆಧಾರದಲ್ಲಿ ಇದು ಶೇ.26ರಷ್ಟು ವೃದ್ಧಿಯಾಗಿದೆ ಎಂದು ಕಂಪನಿ ತಿಳಿಸಿದೆ. ಈ ಅವಧಿಯಲ್ಲಿ ಕಾರ್ಯಾಚರಣಾ ಲಾಭ ರೂ.132 ಕೋಟಿಯಾಗಿದೆ. ವ್ಯಾಪಾರ ವಿಸ್ತರಣೆ ಮತ್ತು ಡಿಜಿಟಲ್ ಪಾವತಿ ಕ್ಷೇತ್ರದಲ್ಲಿ ಬಲವಾದ ಹಾಜರಾತಿಯಿಂದ ವ್ಯಾಪಾರಿಗಳ ಒಟ್ಟು ವ್ಯವಹಾರ ಮೌಲ್ಯ ರೂ.6.5 ಲಕ್ಷ ಕೋಟಿಗೆ ಏರಿದ್ದು, ಶೇ.27ರಷ್ಟು ಬೆಳವಣಿಗೆ ಕಂಡಿದೆ.

# 'ಬ್ರೇಕ್‌ಫಾಸ್ಟ್ ಡ್ರೈವ್' ಪರಿಚಯ

ಬೆಂಗಳೂರು

ಆಯೋಜಿಸಿದ 'ಬ್ರೇಕ್‌ಫಾಸ್ಟ್ ಡ್ರೈವ್' ಕಾರ್ಯಕ್ರಮವು ಬೆಂಗಳೂರಿನಲ್ಲಿ ಕಾರು ಪ್ರಿಯರು ಹಾಗೂ ಕುಟುಂಬಗಳನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸಿ ವಿಶಿಷ್ಟ ಬೆಳಗಿನ ಅನುಭವವನ್ನು ಮೂಡಿಸಿತು. ಚಂಡೀಗಢ ಮತ್ತು ಕೊಯಮತ್ತೂರಿನಲ್ಲಿ ಯಶಸ್ವಿಯಾಗಿ ನಡೆದ ನಂತರ ಈ ಸಮುದಾಯ ಚಾಲಿತ ಉಪಕ್ರಮ ಇದೀಗ ಬೆಂಗಳೂರಿಗೂ ವಿಸ್ತರಿಸಿದೆ.

ನಗರದ ಎಸ್ಟೀಮ್ ಮಾಲ್‌ನಿಂದ ಪ್ರಾರಂಭವಾದ ಈ ಬೆಳಗಿನ ಸವಾರಿ, ಯಲಹಂಕದಲ್ಲಿರುವ ಸ್ಪಿನ್ನಿ ಪಾರ್ಕ್‌ವರೆಗೆ ಸಾಗಿತು.

ಮೊದಲ ಬಾರಿಗೆ ಕಾರು ಖರೀದಿಸಿದವರಿಂದ ಹಿಡಿದು ದೀರ್ಘಕಾಲದ ಕಾರು ಮಾಲೀಕರವರೆಗೆ ಅನೇಕ ಸ್ಪಿನ್ನಿ ಗ್ರಾಹಕರು




ತಮ್ಮ ಕುಟುಂಬಗಳೊಂದಿಗೆ ಈ ಪ್ರಯಾಣದಲ್ಲಿ ಭಾಗವಹಿಸಿದರು.

ಬೆಳಗಿನ ಜಾವ ಇನ್ನೂ ಸಂಪೂರ್ಣವಾಗಿ ಎಚ್ಚರಗೊಳ್ಳದ ಬೆಂಗಳೂರಿನ ರಸ್ತೆಗಳ ಮೇಲೆ ಸಾಗಿದ ವಾಹನಗಳ ಸರದಿ ಭಾಗವಹಿಸಿದವರಿಗೆ ವಿಶಿಷ್ಟ ಅನುಭವ ನೀಡಿತು. ಸಾಮಾನ್ಯವಾಗಿ ವಾಹನ ದಟ್ಟಣೆಯಿಂದ ಕಿಕ್ಕಿರಿದಿರುವ ನಗರ, ಆ ಮುಂಜಾನೆ ತನ್ನ ನಿಶ್ಯಬ್ದತೆ ಮತ್ತು ನಿರಾಳತೆಯಿಂದ ಹೊಸ ಮುಖವೊಂದನ್ನು ಪರಿಚಯಿಸಿತು.

ಖಾಲಿ ರಸ್ತೆಗಳು, ತಂಪಾದ ಗಾಳಿ, ಮೃದುವಾದ ಸೂರ್ಯಕಿರಣಗಳು ಮತ್ತು ಕಾಫಿಯ ಪರಿಮಳ ಕಾರ್ಯಕ್ರಮದ ವಾತಾವರಣವನ್ನು ಮತ್ತಷ್ಟು ಮನಮುಟ್ಟುವಂತೆ ಮಾಡಿದ್ದವು.

ಈ ಡ್ರೈವ್ ಕೇವಲ ಒಂದು ವಾಹನ ಸವಾರಿ ಮಾತ್ರವಾಗಿರದೆ, ಜನರನ್ನು ಸಂಪರ್ಕಿಸುವ ಸಾಮುದಾಯಿಕ ಅನುಭವವಾಗಿ ರೂಪುಗೊಂಡಿತು. ಸಿಗ್ನಲ್‌ಗಳಲ್ಲಿ ನಡೆದ ಸಣ್ಣ ಮಾತುಕತೆಗಳು, ವಾಹನಗಳ ನಡುವೆ ವಿನಿಮಯವಾದ ನಗುಮುಖಗಳು ಮತ್ತು ಪರಸ್ಪರ ಶುಭಾಶಯಗಳು ಭಾಗವಹಿಸಿದವರ ನಡುವೆ ಒಡನಾಟವನ್ನು ಹೆಚ್ಚಿಸಿತು.

# ಅಪರೂಪದ ಶಸ್ತ್ರಚಿಕಿತ್ಸೆ ಯಶಸ್ವಿ

ಬೆಂಗಳೂರು

ತಿಂಡಿ ಕಾರ್ಖಾನೆಯಲ್ಲಿ ಸಂಭವಿಸಿದ ಭೀಕರ ಕೈಗಾರಿಕಾ ಅಪಘಾತದ ನಂತರ 50 ವರ್ಷದ ಮಹಿಳೆಯ ಸಂಪೂರ್ಣವಾಗಿ ಕತ್ತರಿಸಿದ ಮೇಲಿನ ಅಂಗವನ್ನು ಪ್ರಕ್ರಿಯ ಆಸ್ಪತ್ರೆಯ ತಜ್ಞರು ಯಶಸ್ವಿಯಾಗಿ ಮರು ನೆಡುವ ಮೂಲಕ ಚಿಕಿತ್ಸೆ ನೀಡಿದರು.

ರೋಗಿಯ ದುಪಟ್ಟಾ ಹಿಟ್ಟನ್ನು ಬೆರೆಸುವ ಯಂತ್ರದಲ್ಲಿ ಸಿಲುಕಿಕೊಂಡಾಗ ಆಕೆಗೆ ಗಾಯವಾಯಿತು. ತುರ್ತು ಚಿಕಿತ್ಸೆಗಾಗಿ ಕತ್ತರಿಸಿದ ಅಂಗವನ್ನು ಎಚ್ಚರಿಕೆಯಿಂದ ಸಂರಕ್ಷಿಸಿ ಆಸ್ಪತ್ರೆಗೆ ಸಾಗಿಸಲಾಯಿತು.

ಡಾ. ನೀತು ಜಾಯ್ ನೇತೃತ್ವದ ಒಂಬತ್ತು ಗಂಟೆಗಳ ಮರು ನೆಡುವ ಶಸ್ತ್ರಚಿಕಿತ್ಸೆ, ಅರಿವಳಿಕೆ ಮತ್ತು ಮೂಳೆಚಿಕಿತ್ಸಾ ತಂಡಗಳೊಂದಿಗೆ, ತೀವ್ರ ರಕ್ತದ ನಷ್ಟ ಮತ್ತು ಅಂಗಾಂಶ ಹಾನಿಯ ಹೊರತಾಗಿಯೂ ನಿರ್ಣಾಯಕ ಅವಧಿಯಲ್ಲಿ ರಕ್ತದ ಹರಿವನ್ನು ಯಶಸ್ವಿಯಾಗಿ ಪುನಃಸ್ಥಾಪಿಸಿತು.

ರೋಗಿಯು ಚೆನ್ನಾಗಿ ಚೇತರಿಸಿಕೊಂಡರು ಮತ್ತು ಕಾರ್ಯಸಾಧ್ಯವಾದ ಉಳಿಸಿದ ಅಂಗದೊಂದಿಗೆ ಬಿಡುಗಡೆ ಮಾಡಲಾಯಿತು.



ಪ್ರಕ್ರಿಯ ಆಸ್ಪತ್ರೆಗಳ ವೈದ್ಯಕೀಯ ನಿರ್ದೇಶಕ ಡಾ. ಸೋಮನಾಥ್ ಚಟರ್ಜಿ, ಈ ಪ್ರಕರಣವು ಸಂಘಟಿತ ಆಘಾತ ಆರೈಕೆ ಮತ್ತು ತ್ವರಿತ ವೈದ್ಯಕೀಯ ಹಸ್ತಕ್ಷೇಪದ ಮಹತ್ವವನ್ನು ಎತ್ತಿ ತೋರಿಸಿದೆ ಎಂದು ಹೇಳಿದರು. ಪ್ರಕ್ರಿಯ ಆಸ್ಪತ್ರೆಗಳ ಸಿಇಒ ಡಾ. ಶ್ರೀನಿವಾಸ್ ಚಿರುಕುರಿ, ಸಮಯೋಚಿತ ಶಸ್ತ್ರಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆಯ ನಂತರದ ಆರೈಕೆಯು ಅಂಗವನ್ನು ಉಳಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸಿದೆ ಎಂದು ಹೇಳಿದರು.

08/05/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER



# ‘ಪ್ರತಿ ಮನೆಗೂ ಶುದ್ಧ ನೀರು ತಲುಪಲಿ’

ಕುಣಿಗಲ್

ಗ್ರಾಮೀಣ ಭಾಗದ ಪ್ರತಿಯೊಂದು ಕುಟುಂಬಕ್ಕೂ ಸಕಾಲದಲ್ಲಿ ಶುದ್ಧ ಕುಡಿಯುವ ನೀರು ಒದಗಿಸುವುದು ಅಧಿಕಾರಿಗಳ ಆದ್ಯ ಕರ್ತವ್ಯವಾಗಬೇಕು. ನೀರಿನ ಪೂರೈಕೆಯಲ್ಲಿ ಯಾವುದೇ ವ್ಯತ್ಯಯ ಉಂಟಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಶಾಸಕ ಡಾ. ಎಚ್.ಡಿ. ರಂಗನಾಥ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಕುಡಿಯುವ ನೀರಿನ ಸಮಸ್ಯೆ ಕುರಿತ ‘ಪ್ರಗತಿ ಪರಿಶೀಲನಾ ಸಭೆ’ಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ದೂರು ಬಂದರೆ ಕಠಿಣ ಕ್ರಮ: “ತಾಲ್ಲೂಕಿನ 36 ಗ್ರಾಮ ಪಂಚಾಯಿತಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಆಯಾ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು (ಪಿಡಿಒ) ಎಚ್ಚರ ವಹಿಸಬೇಕು. ನೀರಿನ ಲಭ್ಯತೆ ಮತ್ತು ವಿತರಣೆಯ ಬಗ್ಗೆ ನಿಖರ ಮಾಹಿತಿ ಹೊಂದಿರಬೇಕು. ಸಾರ್ವಜನಿಕರಿಂದ ಕುಡಿಯುವ ನೀರಿಗೆ ಸಂಬಂಧಿಸಿದಂತೆ ದೂರುಗಳು ಬಂದರೆ ಅಂತಹ ಅಧಿಕಾರಿಗಳ ಮೇಲೆ ನಿರ್ದಾಕ್ಷಿಣ್ಯವಾಗಿ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುವುದು,” ಎಂದು ಶಾಸಕರು ಎಚ್ಚರಿಸಿದರು.

ತುರ್ತು ಕ್ರಮಕ್ಕೆ ಸೂಚನೆ: ಬೇಸಿಗೆ ಅಥವಾ ಇತರ ಸಂದರ್ಭಗಳಲ್ಲಿ ನೀರಿನ ಅಭಾವ ಸೃಷ್ಟಿಯಾಗದಂತೆ ತುರ್ತು ಕ್ರಮಗಳನ್ನು ಕೈಗೊಳ್ಳಲು ಸಿದ್ಧರಿರಬೇಕು. ಪ್ರತಿ ಹಳ್ಳಿಯಲ್ಲೂ ಶುದ್ಧ ಕುಡಿಯುವ ನೀರಿನ ಘಟಕಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುವಂತೆ ನೋಡಿಕೊಳ್ಳಬೇಕು. ಜನರ ಮೂಲಭೂತ ಅವಶ್ಯಕತೆಯಾದ ನೀರಿನ ವಿಷಯದಲ್ಲಿ ವಿಳಂಬ ಧೋರಣೆ ತೋರುವುದನ್ನು ಸಹಿಸುವುದಿಲ್ಲ ಎಂದು ಅವರು ಸಭೆಯಲ್ಲಿ ತಿಳಿಸಿದರು.“ತಾಲ್ಲೂಕಿನ 36 ಗ್ರಾಮ ಪಂಚಾಯಿತಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಆಯಾ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು (ಪಿಡಿಒ) ಎಚ್ಚರ ವಹಿಸಬೇಕು. ನೀರಿನ ಲಭ್ಯತೆ ಮತ್ತು ವಿತರಣೆಯ ಬಗ್ಗೆ ನಿಖರ ಮಾಹಿತಿ ಹೊಂದಿರಬೇಕು. ಸಾರ್ವಜನಿಕರಿಂದ ಕುಡಿಯುವ ನೀರಿಗೆ ಸಂಬಂಧಿಸಿದಂತೆ ದೂರುಗಳು ಬಂದರೆ ಅಂತಹ ಅಧಿಕಾರಿಗಳ ಮೇಲೆ ನಿರ್ದಾಕ್ಷಿಣ್ಯವಾಗಿ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುವುದು,” ಎಂದು ಶಾಸಕರು ಎಚ್ಚರಿಸಿದರು.

ಬೇಸಿಗೆ ಅಥವಾ ಇತರ ಸಂದರ್ಭಗಳಲ್ಲಿ ನೀರಿನ ಅಭಾವ ಸಿದ್ಧರಿರಬೇಕು. ಪ್ರತಿ ಹಳ್ಳಿಯಲ್ಲೂ ಶುದ್ಧ ಕುಡಿಯುವ ನೀರಿನ ನೋಡಿಕೊಳ್ಳಬೇಕು. ಜನರ ಮೂಲಭೂತ ಅವಶ್ಯಕತೆಯಾದ ನೀರಿನ ವಿಷಯದಲ್ಲಿ ವಿಳಂಬ ಧೋರಣೆ ತೋರುವುದನ್ನು ಸಹಿಸುವುದಿಲ್ಲ ಎಂದು ಅವರು ಸಭೆಯಲ್ಲಿ ತಿಳಿಸಿದರು. ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ವಸಂತ್ ಕುಮಾರ್, ಗ್ರಾಮೀಣ ಉದ್ಯೋಗ ಸಹಾಯಕ ನಿರ್ದೇಶಕ ಕಾಂತರಾಜು, ತಾಲ್ಲೂಕು ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ತಾಲ್ಲೂಕಿನ ಎಲ್ಲಾ ಗ್ರಾಮ ಪಂಚಾಯಿತಿಗಳ ಪಿಡಿಒಗಳು ಹಾಜರಿದ್ದರು.

# ಗ್ರಾಮಗಳ ಹೆಸರು ಬದಲಾವಣೆಗೆ ಮನವಿ



ಬೂದಿಕೋಟೆ

ತಾಲ್ಲೂಕಿನ ಬೂದಿಕೋಟೆ ಹೋಬಳಿಯ ಚತ್ತಗುಟ್ಟಹಳ್ಳಿ ಹಾಗೂ ದೇವರಗುಟ್ಟಹಳ್ಳಿ ಗ್ರಾಮಗಳನ್ನು ಮಜರಾ ಗ್ರಾಮಗಳಿಂದ ಸ್ವತಂತ್ರ ‘ಕಂದಾಯ ಗ್ರಾಮ’ಗಳನ್ನಾಗಿ ಪರಿವರ್ತಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಉಪವಿಭಾಗಾಧಿಕಾರಿ (AC) ಜಂಬಗಿ ರೇಣುಕಾ ಪ್ರಸಾದ್ ದಿಲೀಪ್ ತಿಳಿಸಿದರು.

ಹೋಬಳಿಯ ಗಡಿ ಭಾಗದ ಕನಮನಹಳ್ಳಿ ಗ್ರಾಮದಲ್ಲಿ ಗ್ರಾಮಸ್ಥರ ಸಮ್ಮುಖದಲ್ಲಿ ಮಹಜರು ಪ್ರಕ್ರಿಯೆ ನಡೆಸಿ ಅವರು ಮಾತನಾಡಿದರು. ಈ ಭಾಗದ ಜನರು ಮಜರಾ ಗ್ರಾಮಗಳಾಗಿರುವುದರಿಂದ ಮೂಲಭೂತ ಸೌಕರ್ಯ ಹಾಗೂ ದಾಖಲೆಗಳ ವಿಚಾರದಲ್ಲಿ ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ದೂರು ನೀಡಿದ್ದರು. ಈ ಹಿನ್ನೆಲೆಯಲ್ಲಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಲಾಗಿದೆ ಎಂದರು.

ಗ್ರಾಮಗಳ ಕಂದಾಯ ಗ್ರಾಮ ರಚನೆಗೆ ಪೂರಕವಾಗಿ ಜಮೀನು ಹಕ್ಕು ಪತ್ರಗಳ ಸ್ಥಿತಿಗತಿ ಹಾಗೂ ಅಗತ್ಯ ದಾಖಲೆಗಳನ್ನು ಕಂದಾಯ ಇಲಾಖೆಯ ಅಧಿಕಾರಿಗಳಿಂದ ಸಂಗ್ರಹಿಸಲಾಯಿತು. ಗ್ರಾಮಸ್ಥರು ತಮ್ಮ ಸಮಸ್ಯೆಗಳನ್ನು ಎಸಿ ಅವರ ಮುಂದೆ ಮಂಡಿಸಿದ್ದು, ಇದಕ್ಕೆ ಸ್ಪಂದಿಸಿದ ಅವರು, “ಕಂದಾಯ ಗ್ರಾಮ ರಚನೆಯ ಪ್ರಕ್ರಿಯೆಯನ್ನು ಶೀಘ್ರವಾಗಿ ಪೂರ್ಣಗೊಳಿಸುವಂತೆ ಸಿಬ್ಬಂದಿಗೆ ಸೂಚನೆ ನೀಡಲಾಗಿದೆ” ಎಂದು ತಿಳಿಸಿದರು. ಮಹಜರು ಸಂದರ್ಭದಲ್ಲಿ ಗ್ರಾಮಸ್ಥರು ಗ್ರಾಮದ ಹೆಸರನ್ನು ಬದಲಾವಣೆ ಮಾಡಬೇಕೆಂದು ಎಸಿ ಅವರಿಗೆ ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಉಪವಿಭಾಗಾಧಿಕಾರಿಗಳು, ಈ ಕುರಿತು ಗ್ರಾಮಸ್ಥರು ಅಧಿಕೃತವಾಗಿ ಮನವಿ ಪತ್ರ ಸಲ್ಲಿಸಿದರೆ ನಿಯಮಾನುಸಾರ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ತಹಶೀಲ್ದಾರ್ ಸುಜಾತ, ಉಪತಹಶೀಲ್ದಾರ್ ಸುರೇಶ್, ಕಂದಾಯ ನಿರೀಕ್ಷಕ ಪವನ್ ಕುಮಾರ್, ಪಿಡಿಒ ಭಾಸ್ಕರ್, ಗ್ರಾ.ಪಂ. ಕಾರ್ಯದರ್ಶಿ ರವಿ, ಗ್ರಾಮ ಆಡಳಿತ ಅಧಿಕಾರಿಗಳಾದ ಶರಣಪ್ಪ ಇದ್ದರು.

# 7ರಿಂದ ಬೆಸ್ಕಾಂ ಮುಂದೆ ಅಹೋರಾತ್ರಿ ಧರಣಿಗೆ ಸಜ್ಜಾದ ರೈತರು



ತಿಪಟೂರು

ಕೃಷಿ ಚಟುವಟಿಕೆಗಳಿಗೆ ಸರ್ಕಾರ ನಿಗದಿಪಡಿಸಿರುವ 7ಗಂಟೆಗಳ ಕಾಲ ಗುಣಮಟ್ಟದ ವಿದ್ಯುತ್ ಪೂರೈಕೆ ಮಾಡದೆ ಬೆಸ್ಕಾಂ ಇಲಾಖೆ ರೈತರ ಬದುಕಿನೊಂದಿಗೆ ಚೆಲ್ಲಾಟವಾಡುತ್ತಿದೆ ಎಂದು ಆರೋಪಿಸಿರುವ ತಾಲ್ಲೂಕಿನ ವಿವಿಧ ರೈತ ಸಂಘಟನೆಗಳು, ಇದೇ 7ರಿಂದ ನಗರದ ಬೆಸ್ಕಾಂ ಕಚೇರಿ ಎದುರು ಅನಿರ್ದಿಷ್ಟಾವಧಿ ಮುಷ್ಕರ ನಡೆಸಲು ನಿರ್ಧರಿಸಿವೆ.

ನಗರದಲ್ಲಿ ನಡೆದ ಜಂಟಿ ಸುದ್ದಿ ಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಪ್ರಾಂತ ರೈತ ಸಂಘದ ಮುಖಂಡ ಚನ್ನಬಸವಣ್ಣ, “ಸರ್ಕಾರದ ಆದೇಶದಂತೆ ಕೃಷಿ ಪಂಪ್‌ಸೆಟ್‌ಗಳಿಗೆ ಹಗಲು 3 ಹಾಗೂ ರಾತ್ರಿ 4 ಗಂಟೆ ಸೇರಿ ಒಟ್ಟು 7ಗಂಟೆ ವಿದ್ಯುತ್ ನೀಡಬೇಕು. ಆದರೆ ಅಧಿಕಾರಿಗಳ ಬೇಜವಾಬ್ದಾರಿಯಿಂದ ಕೇವಲ 1 ರಿಂದ 2ಗಂಟೆ ಮಾತ್ರ ವಿದ್ಯುತ್ ಸಿಗುತ್ತಿದೆ. ಇದರಿಂದ ಕೈಗೆ ಬಂದ ಬೆಳೆಗಳು ಕಣ್ಣೆದುರೇ ಒಣಗುತ್ತಿವೆ,” ಎಂದು ಆಕ್ರೋಶ ವ್ಯಕ್ತಪಡಿಸಿದರು.

ವಿಫಲವಾದ 72 ಗಂಟೆಗಳ ಗಡುವು: ವಿದ್ಯುತ್ ಪರಿವರ್ತಕಗಳು (ಟ್ರಾನ್ಸ್‌ಫಾರ್ಮರ್) ಕೆಟ್ಟು ಹೋದಾಗ 72 ಗಂಟೆಯೊಳಗೆ ಬದಲಿಸಿಕೊಡಬೇಕೆಂಬ ನಿಯಮವನ್ನು ಬೆಸ್ಕಾಂ ಗಾಳಿಗೆ ತೂರಿದೆ. ರೈತರೇ ಹಣ ಹಾಕಿಕೊಂಡು ರಿಪೇರಿ ಮಾಡಿಸಿಕೊಳ್ಳುವ ಸ್ಥಿತಿ ನಿರ್ಮಾಣವಾಗಿದೆ. ಇಲಾಖೆಯ ಈ ನಿರ್ಲಕ್ಷ್ಯ ಧೋರಣೆ ಮುಂದುವರಿದರೆ ಅಧಿಕಾರಿಗಳು ತಕ್ಕ ಶಾಸ್ತಿ ಅನುಭವಿಸಬೇಕಾಗುತ್ತದೆ ಎಂದು ಅವರು ಎಚ್ಚರಿಸಿದರು.

ಪ್ರಿಪೇಡ್ ಮೀಟರ್‌ಗೆ ರೆಡ್ ಸಿಗ್ನಲ್: ಇದೇ ವೇಳೆ ಮಾತನಾಡಿದ ರೈತ ಸಂಘದ ತಾಲ್ಲೂಕು ಅಧ್ಯಕ್ಷ ಬಸ್ತಿಹಳ್ಳಿ ರಾಜಣ್ಣ, “ರೈತರಿಗೆ ಮಾರಕವಾಗಿರುವ ಪ್ರಿಪೇಡ್ ಮೀಟರ್‌ಗಳನ್ನು ಅಳವಡಿಸಲು ಅಧಿಕಾರಿಗಳು ಮುಂದಾಗಬಾರದು. ಒಂದು ವೇಳೆ ಸರ್ಕಾರ ಹಠಕ್ಕೆ ಬಿದ್ದರೆ ರಾಜ್ಯವ್ಯಾಪಿ ಪ್ರತಿಭಟನೆ ನಡೆಸಲಾಗುವುದು. ಶಾಸಕರ ಅಧ್ಯಕ್ಷತೆಯಲ್ಲಿ ನಡೆಯಬೇಕಾದ ಗ್ರಾಹಕರ ಸಂವಾದ ಸಭೆಗಳು ಕೇವಲ ನಾಮಕಾವಸ್ಥೆಯಾಗಿವೆ,” ಎಂದು ದೂರಿದರು.

ಪ್ರಮುಖ ಬೇಡಿಕೆಗಳು:

ನಿರಂತರ 7 ಗಂಟೆಗಳ ಕಾಲ ಗುಣಮಟ್ಟದ ವಿದ್ಯುತ್ ಸರಬರಾಜು ಮಾಡಬೇಕು.

ಕೆಟ್ಟ ಟ್ರಾನ್ಸ್‌ಫಾರ್ಮರ್‌ಗಳನ್ನು ನಿಗದಿತ ಅವಧಿಯಲ್ಲಿ ಇಲಾಖೆಯೇ ಬದಲಿಸಬೇಕು.

ಪ್ರಿಪೇಡ್ ಮೀಟರ್ ಅಳವಡಿಕೆ ಯೋಜನೆಯನ್ನು ಕೈಬಿಡಬೇಕು.

ರೈತ ಸಂಪರ್ಕ ಸಭೆಗಳನ್ನು ನಡೆಸಿ ರೈತರ ಸಮಸ್ಯೆಗಳಿಗೆ ನೇರ ಸ್ಪಂದನೆ ಸಿಗಬೇಕು.

ಸುದ್ದಿಗೋಷ್ಠಿಯಲ್ಲಿ ಸೌಹಾರ್ದ ಸಂಘದ ಅಲ್ಲಾಬಕಾಷ್, ರೇಣುಕಮೂರ್ತಿ, ಶಿವಪ್ರಕಾಶ್, ಮಲ್ಲಿಕಾರ್ಜುನ್, ಸುಂದರೇಶ್, ಶ್ರೀನಿವಾಸ್, ನಾಗರಾಜು ಸೇರಿದಂತೆ ಹಲವು ಪ್ರಗತಿಪರ ಸಂಘಟನೆಗಳ ಮುಖಂಡರು ಸೇರಿದಂತೆ ಹಲವರು ಹಾಜರಿದ್ದರು.

# ಕಾಂಗ್ರೆಸ್ ದುರಾಡಳಿತಕ್ಕೆ ಜನ ಪಾಠ ಕಲಿಸಲಿದ್ದಾರೆ: ಅನಿಲ್‌ಕುಮಾರ್



ಕೊರಟಗೆರೆ

ಪ್ರಧಾನಿ ನರೇಂದ್ರ ಮೋದಿ ಅವರ ದಕ್ಷ ಆಡಳಿತ ಹಾಗೂ ಜನಪರ ಯೋಜನೆಗಳಿಂದಾಗಿ ದೇಶದಾದ್ಯಂತ ಬಿಜೆಪಿ ಅಲೆ ಬೀಸುತ್ತಿದೆ. ಪಂಚರಾಜ್ಯಗಳ ಚುನಾವಣಾ ಫಲಿತಾಂಶದ ಮುಂದುವರಿದ ಭಾಗವಾಗಿ ಮುಂದಿನ ದಿನಗಳಲ್ಲಿ ಕರ್ನಾಟಕದಲ್ಲೂ ಬಿಜೆಪಿ ಸರ್ಕಾರ ರಚನೆಯಾಗುವುದು ಖಚಿತ ಎಂದು ಮಾಜಿ ಐಎಎಸ್ ಅಧಿಕಾರಿ ಹಾಗೂ ಬಿಜೆಪಿ ಮುಖಂಡ ಬಿ.ಎಚ್. ಅನಿಲ್‌ಕುಮಾರ್ ವಿಶ್ವಾಸ ವ್ಯಕ್ತಪಡಿಸಿದರು.

ಪಟ್ಟಣದ ಮುಖ್ಯ ಬಸ್ ನಿಲ್ದಾಣದ ಆವರಣದಲ್ಲಿ ತಾಲ್ಲೂಕು ಬಿಜೆಪಿ ಮಂಡಲ ವತಿಯಿಂದ ಆಯೋಜಿಸಲಾಗಿದ್ದ ಪಂಚರಾಜ್ಯಗಳ ಚುನಾವಣಾ ಫಲಿತಾಂಶದ ‘ವಿಜಯೋತ್ಸವ’ದಲ್ಲಿ ಭಾಗವಹಿಸಿ ಮಾತನಾಡಿದರು.

ಮೋದಿ ಅಲೆಗೆ ಧೂಳೀಪಟವಾದ ಭದ್ರಕೋಟೆಗಳು: “ಸುಮಾರು 30 ವರ್ಷಗಳಿಂದ ಭದ್ರಕೋಟೆಯಾಗಿದ್ದ ಪಶ್ಚಿಮ ಬಂಗಾಳದಂತಹ ರಾಜ್ಯಗಳಲ್ಲೇ ಇಂದು ಕಮಲ ಅರಳುತ್ತಿದೆ. ಅಸ್ಸಾಂ ಮತ್ತು ಪುದುಚೇರಿಯಲ್ಲೂ ಬಿಜೆಪಿ ಭರ್ಜರಿ ಜಯ ದಾಖಲಿಸಿ ಸರ್ಕಾರ ರಚಿಸುತ್ತಿದೆ. ಮೋದಿಯವರ ಕಾರ್ಯವೈಖರಿಯನ್ನು ಮೆಚ್ಚಿ ದೇಶದ ಜನ ಬಿಜೆಪಿಯನ್ನು ಬೆಂಬಲಿಸುತ್ತಿದ್ದಾರೆ. ಇದೇ ಗಾಳಿ ಕರ್ನಾಟಕದಲ್ಲೂ ಬೀಸಲಿದ್ದು, ಇಲ್ಲಿನ ಕಾಂಗ್ರೆಸ್ ಸರ್ಕಾರದ ದುರಾಡಳಿತಕ್ಕೆ ಜನರು ತಕ್ಕ ಪಾಠ ಕಲಿಸಲಿದ್ದಾರೆ,” ಎಂದು ಅವರು ಭವಿಷ್ಯ ನುಡಿದರು.

ಬಿಜೆಪಿ ತಾಲ್ಲೂಕು ಮಂಡಲ ಅಧ್ಯಕ್ಷ ರುದ್ರೇಶ್ ಮಾತನಾಡಿ, “ದೇಶದ ಈಗಾಗಲೇ 19 ರಾಜ್ಯಗಳಲ್ಲಿ ಬಿಜೆಪಿ ಅಧಿಕಾರದಲ್ಲಿದೆ. ಈಗ ಪಂಚರಾಜ್ಯಗಳ ಚುನಾವಣೆಯಲ್ಲಿ ಮೋದಿಯವರ ಮಂತ್ರ ಕೆಲಸ ಮಾಡಿದ್ದು, ದಕ್ಷಿಣ ಭಾರತದಲ್ಲೂ ಬಿಜೆಪಿ ತನ್ನ ಪ್ರಾಬಲ್ಯವನ್ನು ವಿಸ್ತರಿಸಿಕೊಳ್ಳುತ್ತಿದೆ,” ಎಂದರು.

ಮಾಜಿ ಅಧ್ಯಕ್ಷ ಡಾ. ಕೆ.ಎಲ್. ದರ್ಶನ್ ಮಾತನಾಡಿ, ಬಿಜೆಪಿ ಗೆಲ್ಲುವುದಿಲ್ಲ ಎನ್ನುವ ಕ್ಷೇತ್ರಗಳಲ್ಲೂ ಮತದಾರರು ಮೋದಿಯವರ ಮೇಲೆ ವಿಶ್ವಾಸವಿಟ್ಟು ಜಯ ತಂದುಕೊಟ್ಟಿದ್ದಾರೆ ಎಂದು ಹರ್ಷ ವ್ಯಕ್ತಪಡಿಸಿದರು.

ಈ ಕಾರ್ಯಕ್ರಮದಲ್ಲಿ ಬಿಜೆಪಿ ಮಂಡಲದ ಪ್ರಧಾನ ಕಾರ್ಯದರ್ಶಿ ದಾಸಲುಕುಂಟೆ ರಾಘು, ಮುಖಂಡರಾದ ಸ್ವಾಮಿ, ಗೋವಿಂದರಾಜು, ಮಂಜುನಾಥ್, ಪ್ರದೀಪ್, ರೂಪಶ್ರೀ, ದಯಾಮಣಿ, ರಂಗರಾಜು, ಮೂರ್ತಿ, ಚೇತನ್, ಅರುಣ್, ದಯಾನಂದ್, ಆನಂದ್, ರಂಜಿತ್, ನಟರಾಜ್, ನಂಜುಂಡಪ್ಪ ಸೇರಿದಂತೆ ನೂರಾರು ಕಾರ್ಯಕರ್ತರು ಉಪಸ್ಥಿತರಿದ್ದರು.

# ‘ಗೆಲುವಿನ ಗಾಳಿ ರಾಜ್ಯಕ್ಕೂ ಬೀಸಲಿದೆ’



ಬಳ್ಳಾರಿ

ಪಶ್ಚಿಮ ಬಂಗಾಳ, ಪಾಂಡಿಚೇರಿ, ಅಸ್ಸಾಂನಲ್ಲಿ ಬಿಜೆಪಿ ಅಭೂತಪೂರ್ವ ಗೆಲುವು ಸಾಧಿಸಿದ ಹಿನ್ನೆಲೆಯಲ್ಲಿ ಇಲ್ಲಿನ ಬಿಜೆಪಿ ಕಾರ್ಯಕರ್ತರು ನಗರದ ಹೃದಯ ಭಾಗ ರಾಯಲ್ ವೃತ್ತದಲ್ಲಿ ಪಟಾಕಿ ಸಿಡಿಸಿ, ಸಿಹಿ ಹಂಚಿ ಸೋಮವಾರ ವಿಜಯೋತ್ಸವ ಆಚರಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ಮೋಕ ಅವರು ಮಾತನಾಡಿ, ಪಂಚರಾಜ್ಯಗಳ ಚುನಾವಣೆಯಲ್ಲಿ ಅಸ್ಸಾಂ, ಪಾಂಡಿಚೇರಿ, ವಿಶೇಷವಾಗಿ ಪಶ್ಚಿಮ ಬಂಗಾಳ ನಲ್ಲಿ ಬಿಜೆಪಿ ಅಭೂತಪೂರ್ವ ಗೆಲುವು ಸಾಧಿಸಿದೆ. ಈ ಗೆಲುವಿನ ಗಾಳಿ ರಾಜ್ಯಕ್ಕೂ ಬೀಸಲಿದೆ. ಇದು ದೇಶದ ಕಾರ್ಯಕರ್ತರ ಗೆಲುವಾಗಿದೆ. ಈ ಫಲಿತಾಂಶ ಗಮನಿಸಿದರೆ, ಇಡೀ ದೇಶ ಬಿಜೆಪಿ ಪರವಾಗಿದೆ, ಈ ಶಕ್ತಿ ರಾಜ್ಯ ಹಾಗೂ ಜಿಲ್ಲೆಯಲ್ಲಿ ಅಪ್ಪಳಿಸಲಿದೆ ಎಂದರು.

ಮಾಜಿ ಸಂಸದ ಸಣ್ಣ ಫಕೀರಪ್ಪ, ಬಿಜೆಪಿ ರಾಜ್ಯ ಕಾರ್ಯದರ್ಶಿ ಕೆ.ಎಸ್.ದಿವಾಕರ್, ಬುಡಾ ಮಾಜಿ ಅಧ್ಯಕ್ಷ ಮಾರುತಿ ಪ್ರಸಾದ್ ಸರ್ವಶೆಟ್ಟಿ, ಪಾಲಿಕೆ ಸದಸ್ಯರಾದ ಸುರೇಖಾ ಮಲ್ಲನಗೌಡ, ಕೆ.ಹನುಮಂತಪ್ಪ, ಗುಡಿಗಂಟೆ ಹನುಮಂತಪ್ಪ, ಬಿಜೆಪಿ ಮಹಿಳಾ ಘಟಕ ಜಿಲ್ಲಾಧ್ಯಕ್ಷೆ ಹಂಪಿ ರಮಣ, ಡಾ.ಅರುಣಾ ಕಾಮಿನೇನಿ ಸೇರಿದಂತೆ ಅನೇಕ ಗಣ್ಯರು, ನೂರಾರು ಕಾರ್ಯಕರ್ತರು ಪರಸ್ಪರ ಸಿಹಿ ಹಂಚಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಧುರೀಣರಾದ ಕೆ.ರಾಮಲಿಂಗಪ್ಪ, ಯುವ ಮುಖಂಡರಾದ ಅಡವಿಸ್ವಾಮಿ, ಓಂ ಪ್ರಕಾಶ್, ಮಲ್ಲೇಶ್ ಕುಮಾರ್, ಎಚ್. ಓಬಳೇಶ್, ಹನುಮೇಶ ಉಪ್ಪಾರ, ಹಲಕುಂದಿ ವೀರನಗೌಡ, ಶಂಕ್ರಪ್ಪ, ರಾಘವೇಂದ್ರ ಎಸ್.ಚಲುವಾದಿ, ಹನುಮಂತಪ್ಪ ಕೋಳೂರು, ಎರಂಗಳಿ ತಿಮ್ಮಾರೆಡ್ಡಿ, ಶರಣು ಆರ್.ಸೋಮನಗೌಡ, ಮಹಿಳಾ ಮುಖಂಡರಾದ ರಬಿಯಾ, ಡಾ.ರೇಣುಕಾ ಸೇರಿದಂತೆ ವಿವಿಧ ಗಣ್ಯರು, ನೂರಾರು ಕಾರ್ಯಕರ್ತರು ಇದ್ದರು.

# ನಗರೀಕರಣದ ಅಬ್ಬರಕ್ಕೆ ಪ್ರಕೃತಿ ಬಲಿ: ಶಿವಕುಮಾರ್ ಕಳವಳ



ಕೆಜಿಎಫ್

ಪ್ರಕೃತಿಯು ಸಕಲ ಜೀವರಾಶಿಗಳನ್ನು ತನ್ನ ಮಡಿಲಲ್ಲಿ ಹೊತ್ತು ಸಲಹುತ್ತಿದೆ. ಆದರೆ ಇಂದು ಮನುಷ್ಯನ ಅತಿಯಾದ ಸ್ವಾರ್ಥ, ನಗರೀಕರಣ ಮತ್ತು ಅಭಿವೃದ್ಧಿಯ ಹೆಸರಿನಲ್ಲಿ ಪ್ರಕೃತಿಯ ಮಡಿಲು ಬರಿದಾಗುತ್ತಿದೆ. ದಿನೇ ದಿನೇ ಏರುತ್ತಿರುವ ಜಾಗತಿಕ ತಾಪಮಾನವು ಮಾನವ ಸಂಕುಲಕ್ಕೆ ಕಳವಳಕಾರಿ ವಿಷಯವಾಗಿದೆ ಎಂದು 3ನೇ ಅಪರ ಜಿಲ್ಲಾ ಸತ್ರ ನ್ಯಾಯಾಧೀಶರಾದ ಶಿವಕುಮಾರ್ ಅಭಿಪ್ರಾಯಪಟ್ಟರು.

ತಾಲ್ಲೂಕಿನ ಟಿ.ಗೊಲ್ಲಹಳ್ಳಿಯಲ್ಲಿ ‘ಗುಡ್ ಡೀಡ್ಸ್ ಡೇ’ ಅಂಗವಾಗಿ ಬೆಳಕು ಟ್ರಸ್ಟ್ ತಂಬರ್ಲಹಳ್ಳಿ ಹಾಗೂ ಟಿ.ಗೊಲ್ಲಹಳ್ಳಿ ಗ್ರಾಮ ಪಂಚಾಯಿತಿ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಕೆರೆ ಅಂಗಳದಲ್ಲಿ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪರಿಸರ ಉಳಿದರೆ ಮಾತ್ರ ಭವಿಷ್ಯ: ಹಸಿರೇ ಉಸಿರು ಎಂಬ ಸತ್ಯವನ್ನು ಅರಿತು ಪ್ರತಿಯೊಬ್ಬರೂ ಸಸಿಗಳನ್ನು ನೆಟ್ಟು ಪೋಷಿಸಬೇಕು. ಇಂದು ಅರಣ್ಯ ನಾಶ ಹಾಗೂ ಮಾಲಿನ್ಯದಿಂದಾಗಿ ಅನೇಕ ಜೀವ ಸಂಕುಲಗಳು ಅಳಿವಿನಂಚಿಗೆ ತಲುಪಿವೆ. ಭವಿಷ್ಯದ ದೃಷ್ಟಿಯಿಂದ ನಾವು ಪರಿಸರ ಮಾತೆಯ ರಕ್ಷಣೆ ಮಾಡುವುದು ಅನಿವಾರ್ಯವಾಗಿದೆ ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಸಿವಿಲ್ ನ್ಯಾಯಾಧೀಶೆ ಶಮಿದಾ ಅವರು ಮಾತನಾಡಿ, “ಕೆಜಿಎಫ್ ಪೊಲೀಸ್ ಜಿಲ್ಲಾ ವ್ಯಾಪ್ತಿಯಲ್ಲಿ ಅಪರಾಧ ಪ್ರಕರಣಗಳ ಸಂಖ್ಯೆ ಹೆಚ್ಚಾಗುತ್ತಿದೆ. ಸಣ್ಣಪುಟ್ಟ ಭೂಮಿ ವಿಚಾರಕ್ಕಾಗಿ ನ್ಯಾಯಾಲಯದ ಮೆಟ್ಟಿಲೇರುವ ಬದಲು, ಸಾರ್ವಜನಿಕರು ಉದ್ವೇಗಕ್ಕೆ ಒಳಗಾಗದೆ ಶಾಂತಿಯುತವಾಗಿ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಬೇಕು,” ಎಂದು ಕಿವಿಮಾತು ಹೇಳಿದರು.

ವಕೀಲರ ಸಂಘದ ಅಧ್ಯಕ್ಷ ಎಸ್.ಎನ್. ರಾಜಗೋಪಾಲಗೌಡ ಮಾತನಾಡಿ, ಜಿಲ್ಲೆಯ 3600 ಕೆರೆಗಳಲ್ಲಿ ಹೂಳು ತುಂಬಿದ್ದು, ಅಂತರ್ಜಲ ಮಟ್ಟ ಕುಸಿಯುತ್ತಿದೆ. ಜಿಲ್ಲಾಡಳಿತವು ಕೆರೆಗಳ ಪುನಶ್ಚೇತನಕ್ಕೆ ಆದ್ಯತೆ ನೀಡಬೇಕು. ಈ ನಿಟ್ಟಿನಲ್ಲಿ ಬೆಳಕು ಸಂಸ್ಥೆಯು ಒಂದು ಲಕ್ಷ ಗಿಡಗಳನ್ನು ನೆಡುವ ಮೂಲಕ ಪರಿಸರಕ್ಕೆ ಬೆಳಕಾಗುತ್ತಿರುವುದು ಶ್ಲಾಘನೀಯ ಎಂದರು.

ಅಪರ ಹಿರಿಯ ಸಿವಿಲ್ ನ್ಯಾಯಾಧೀಶ ಮುಜಫರ್ ಎ ಮಂಜರಿ, ಅಪರ ಹಿರಿಯ ನ್ಯಾಯಾಧೀಶೆ ಜಯಲಕ್ಷ್ಮಿ ಸಮಾಜಮುಖಿ ಕಾರ್ಯಗಳ ಬಗ್ಗೆ ಮಾತನಾಡಿದರು. ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಜೆ.ಜೆ. ನಾಗರಾಜ್, ಲೋಕೇಶ್, ಆನಂದ್, ವೃತ್ತ ನಿರೀಕ್ಷಕ ರಂಗಶಾಮಯ್ಯ, ಪಿಡಿಒ ಶ್ರೀನಿವಾಸಮೂರ್ತಿ ಹಾಗೂ ಬೆಳಕು ಸಂಸ್ಥೆಯ ರಾಧಾಮಣಿ ಉಪಸ್ಥಿತರಿದ್ದರು.

# ‘ರಾಜಕಾರಣಿಗಳಿಗೆ ಕನ್ನಡ ಸಾಹಿತ್ಯ, ಸಂಸ್ಕೃತಿ ಬೇಕಾಗಿಲ್ಲ’



ತುಮಕೂರು

ಹಿಂದೆ ರಾಜಾಶ್ರಯದಲ್ಲಿ ಸಾಹಿತ್ಯ ರಚನೆ ಆಗುತ್ತಿತ್ತು. ರಾಜಮಹಾರಾಜರು ಸಾಹಿತ್ಯ, ಸಾಹಿತಿಗಳನ್ನು ಪ್ರೋತ್ಸಾಹಿಸುತ್ತಿದ್ದರು. ಈಗ ಅಂತಹ ಪ್ರೋತ್ಸಾಹ ಸಿಗುತ್ತಿಲ್ಲ. ಸರ್ಕಾರ ಪುಸ್ತಕಗಳನ್ನು ಖರೀದಿಸಿ ನಾಲ್ಕು ವರ್ಷಗಳಾಗಿವೆ. ಯಾವ ಸರ್ಕಾರಗಳೂ ಸಾಹಿತ್ಯವನ್ನು ಪ್ರೋತ್ಸಾಹಿಸುತ್ತಿಲ್ಲ ಈಗಿನ ರಾಜಕಾರಣಿಗಳಿಗೆ ಸಾಹಿತ್ಯ, ಸಂಸ್ಕೃತಿ ಬೇಕಾಗಿಲ್ಲ ಎಂದು ಸಾಹಿತಿ ಡಾ. ಕರೀಗೌಡ ಬೀಚನಹಳ್ಳಿ ವಿಷಾದಿಸಿದರು.

ನಗರದ ಕನ್ನಡ ಭವನದಲ್ಲಿ ಮಂಗಳವಾರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನಿಂದ ನಡೆದ ಸಂಸ್ಥಾಪನಾ ದಿನಾಚರಣೆ ಹಾಗೂ ವಿವಿಧ ದತ್ತಿ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಶಾಲಾಕಾಲೇಜು ಮಕ್ಕಳು ಪುಸ್ತಕ ಓದಬೇಕು. ಪುಸ್ತಕಗಳಲ್ಲಿ ಸಿಗುವ ಜ್ಞಾನ ಮೊಬೈಲ್‌ಗಳಲ್ಲಿ ಸಿಗುವುದಿಲ್ಲ, ಪುಸ್ತಕಗಳಲ್ಲಿ ಬಹುಮುಖಿ ಜ್ಞಾನ ದೊರೆಯುತ್ತದೆ ಎಂದರು.

ಕನ್ನಡ ಭಾಷೆ ಸಾಹಿತ್ಯ, ಸಂಸ್ಕೃತಿ ಬೆಳೆಸಲು ಮೈಸೂರು ಮಹಾರಾಜರು 112 ವರ್ಷಗಳ ಹಿಂದ ಕನ್ನಡ ಸಾಹಿತ್ಯ ಪರಿಷತ್ತು ಸ್ಥಾಪನೆಯಾಗಲು ಕಾರಣರಾದರು. ಅಂದಿನಿಂದ ಇಂದಿನವರೆಗೆ ಪರಿಷತ್ತು ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿ, ಪುಸ್ತಕ ಸಂಸ್ಕೃತಿ ಬೆಳೆಸುವ ಚಟುವಟಿಕೆ ನಡೆಸಿಕೊಂಡು ಬರುತ್ತಿದೆ. ಸರ್ಕಾರ ಹಾಗೂ ದಾನಿಗಳು ಪರಿಷತ್ತಿನ ಕಾರ್ಯಚಟುವಟಿಕೆಗಳಿಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಸ್. ಸಿದ್ಧಲಿಂಗಪ್ಪ ಮಾತನಾಡಿ, ಸಾಹಿತ್ಯ ಪರಿಷತ್ತಿನ ಚಟುವಟಿಕೆಗಳು ನಿಲ್ಲಬಾರದು, ನಿರಂತರವಾಗಿ ಮುನ್ನಡೆಯಬೇಕು ಎಂದರು. ಜಿಲ್ಲಾ ಕಸಾಪ ಚಟುವಟಿಕೆಗಳಿಗೆ ಅನೇಕ ದಾನಿಗಳು ಸಹಾಯಾಸ್ತ ನೀಡುತ್ತಾ ಬಂದಿದ್ದಾರೆ. ಹಲವು ಮಹನೀಯರು ದತ್ತಿನಿಧಿ ಇಟ್ಟು ಪ್ರೋತ್ಸಾಹಿಸುತ್ತಿದ್ದಾರೆ. ಪರಿಷತ್ತಿಗೆ ಸಹಾಯ ಮಾಡುವವರ ಸಂಖ್ಯೆ ಮತ್ತಷ್ಟು ಹೆಚ್ಚಲಿ ಎಂದು ಹೇಳಿದರು. ಈ ವೇಳೆ ದೇವಪ್ರಕಾಶ್ ಮಾತೃಶ್ರೀ ಭಾಗೀರಥಮ್ಮ ದತ್ತಿ ಪ್ರಶಸ್ತಿಯನ್ನು ಸುಶೀಲ ಸದಾಶಿವಯ್ಯ ಅವರಿಗೆ ಪ್ರವಾಸ ಸಾಹಿತ್ಯಕ್ಕಾಗಿ, ಮಕ್ಕಳ ಸಾಹಿತ್ಯದ ಶಾಂಪುರ ಭಾಗೀರಥಮ್ಮ ನೆನಪಿನ ಪ್ರಶಸ್ತಿಯನ್ನು ಪ.ನಾ. ಹಳ್ಳಿ ಹರೀಶ್‌ಕುಮಾರ್ ಅವರಿಗೆ, ದೇವಪ್ರಕಾಶ್ ಹಾಸ್ಯ ಸಾಹಿತ್ಯ ಪ್ರಶಸ್ತಿಯನ್ನು ತುರುವೇಕೆರೆ ಮಂಜೇಶ್ ಅವರಿಗೆ ಹಾಗೂ ದೇವಪ್ರಕಾಶ್ ಮಾಧ್ಯಮ ಪ್ರಶಸ್ತಿಯನ್ನು ಹಿರಿಯ ಪತ್ರಿಕಾ ಛಾಯಾಗ್ರಾಹಕರಾದ ಟಿ.ಆರ್. ರೇಣುಕಾಪ್ರಸಾದ್ ಹಾಗೂ ಟಿ.ಹೆಚ್. ಸುರೇಶ್ ಅವರಿಗೆ ಪ್ರದಾನ ಮಾಡಲಾಯಿತು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ನಿಕಟಪೂರ್ವ ಅಧ್ಯಕ್ಷೆ ಬಾ.ಹ. ರಮಾಕುಮಾರಿ, ಕೈಗಾರಿಕೋದ್ಯಮಿ ಹೆಚ್.ಜಿ ಚಂದ್ರಶೇಖರ್, ಸರ್ವೋದಯ ಶಿಕ್ಷಣ ಸಂಸ್ಥೆ ಜಂಟಿ ಕಾರ್ಯದರ್ಶಿ ಕೆ.ವಿ. ಸುಬ್ಬರಾವ್, ಇತಿಹಾಸ ಸಂಶೋಧಕ ಡಾ. ಡಿ.ಎನ್. ಯೋಗೀಶ್ವರಪ್ಪ, ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ಕಂಟಲಗೆರೆ ಸಣ್ಣಹೊನ್ನಯ್ಯ, ಕೋಶಾಧ್ಯಕ್ಷ ಎಂ.ಹೆಚ್. ನಾಗರಾಜು ಭಾಗವಹಿಸಿದ್ದರು.

# ಹನ್ನೊಂದು ಬಾಲ ಕಾರ್ಮಿಕರ ರಕ್ಷಣೆ

ದೇವನಹಳ್ಳಿ

ಇಲ್ಲಿನ ಹೊಸಕೋಟೆ ತಾಲ್ಲೂಕಿನ ಸೂಲಿಬೆಲೆ ಹೋಬಳಿ ವ್ಯಾಪ್ತಿಯಲ್ಲಿ ಖಾಸಗಿ ಕಂಪನಿಗೆ ಸೇರಿದ ಗೋಡೌನ್ ಒಂದರಲ್ಲಿ ರಾತ್ರಿ ಪಾಳಿಯಲ್ಲಿ ಬಾಲ ಹಾಗೂ ಕಿಶೋರ ಕಾರ್ಮಿಕರು ದುಡಿಮೆ ಮಾಡುತ್ತಿದ್ದಾರೆ ಎಂಬ ಖಚಿತ ಮಾಹಿತಿ ಮೇರೆಗೆ ಮೇ 4 ರಂದು ಕಾರ್ಮಿಕ ಇಲಾಖೆ ಜಂಟಿ ಕಾರ್ಯಾಚರಣೆ ನಡೆಸಿ 11 ಮಕ್ಕಳ ರಕ್ಷಣೆ ಮಾಡಲಾಗಿದೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ಹರ್ಷವರ್ಧನ್ ತಿಳಿಸಿದ್ದಾರೆ.

ಕಾರ್ಮಿಕ ಇಲಾಖೆ ಮತ್ತು ಜಿಲ್ಲಾ ಬಾಲಕಾರ್ಮಿಕ ಯೋಜನೆ, ಹೊಸಕೋಟೆ ತಾಲ್ಲೂಕಿನ ಕಾರ್ಮಿಕ ನಿರೀಕ್ಷಕರು ಹಾಗೂ ಜಿಲ್ಲಾ ಬಾಲ ಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ರವರು ಜಂಟಿ ತಪಾಸಣೆ ಕೈಗೊಂಡು ರಕ್ಷಿಸಲಾಗಿದೆ.

ರಕ್ಷಿಸಿದ ಬಾಲ ಮತ್ತು ಕಿಶೋರ ಕಾರ್ಮಿಕನನ್ನು ಮಕ್ಕಳ ಪುನರ್ವಸತಿಗಾಗಿ ಮಕ್ಕಳ ಕಲ್ಯಾಣ ಸಮಿತಿಯ ಮೌಖಿಕ ಆದೇಶದ ಮೇರೆಗೆ ದೇವನಹಳ್ಳಿ ತಾಲ್ಲೂಕಿನ ಸರ್ಕಾರಿ ಬಾಲಕರ ಬಾಲಮಂದಿರಕ್ಕೆ ದಾಖಲಿಸಲಾಗಿದೆ, ಮಾಲೀಕರ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಲು ಕ್ರಮ ವಹಿಸಲಾಗಿದೆ.

ಬಾಲಕಾರ್ಮಿಕರನ್ನು ದುಡಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗಿದ್ದು 18 ವರ್ಷದೊಳಗಿನ ಮಕ್ಕಳನ್ನು ಅಪಾಯಕಾರಿ ಕ್ಷೇತ್ರದಲ್ಲಿ ದುಡಿಸಿದಲ್ಲಿ ಅಂತಹವರಿಗೆ ಕನಿಷ್ಠ 6 ತಿಂಗಳಿಗಿಂತ ಕಡಿಮೆ ಇಲ್ಲದಂತೆ ಮತ್ತು ಗರಿಷ್ಠ 2 ವರ್ಷದವರೆಗೂ ಜೈಲು ಶಿಕ್ಷೆ ಹಾಗೂ 50,000 ಸಾವಿರದವರೆಗು ದಂಡ ವಿಧಿಸಲಾಗುತ್ತದೆ. 18 ವರ್ಷದೊಳಗಿನ ಯಾವುದೇ ಮಕ್ಕಳನ್ನು ಕೆಲಸಕ್ಕೆ ನೇಮಿಸಿ ಕೊಂಡಿರುವುದು ಕಂಡುಬಂದಲ್ಲಿ ತಕ್ಷಣವೇ ಮಕ್ಕಳ ಸಹಾಯವಾಣಿ 1098 ಮತ್ತು ಪೋಲೀಸ್ ಇಲಾಖೆಯ ಸಹಾಯವಾಣಿ ಸಂಖ್ಯೆ 112 ಕರೆ ಮಾಡಿ ಮಾಹಿತಿ ನೀಡಿ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ತಿಳಿಸಿದ್ದಾರೆ.

ಕಾರ್ಯಾಚರಣೆಯಲ್ಲಿ ಬಾಲಕಾರ್ಮಿಕ ಯೋಜನೆ ಸೊಸೈಟಿಯ ಯೋಜನಾ ನಿರ್ದೇಶಕರಾದ ಗಣೇಶಮೂರ್ತಿ ಎ. ಎಸ್, ಹೊಸಕೋಟೆ ತಾಲ್ಲೂಕಿನ ಕಾರ್ಮಿಕ ನಿರೀಕ್ಷಕ ಯತೀಶ್ ಕುಮಾರ್, ಇತರೆ ಸಿಬ್ಬಂದಿ ಇದ್ದರು.

# ಮಳೆ ಹಾನಿ ಪ್ರದೇಶಕ್ಕೆ ಜಿಲ್ಲಾಧಿಕಾರಿ ಭೇಟಿ



ತಿಪಟೂರು

ತಾಲೂಕಿನಲ್ಲಿ ಮಂಗಳವಾರ ಸಂಜೆ ಮತ್ತು ರಾತ್ರಿ ಸುರಿದ ಬಾರಿ ಮಳೆ ಹಾಗೂ ಗಾಳಿಗೆ ತೀವ್ರ ಹಾನಿಯಾಗಿದ್ದು ಅವರಿಗೆ ಜಿಲ್ಲಾ ಉಸ್ತವಾರಿ ಹಾಗೂ ಗೃಹಸಚಿವರ ಆದೇಶದಂತೆ ಶೀಘ್ರವೇ ಎನ್.ಡಿ.ಆರ್ ಪರಿಹಾರ ನಿಧಿಯಿಂದ ಪರಿಹಾರ ದೊರಕಿಸಲಾಗುವುದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದರು.

ಮಂಗಳವಾರ ತಾಲ್ಲೂಕಿನ ಕಿಬ್ಬನಹಳ್ಳಿ ಹೋಬಳಿಯಲ್ಲಿ ಮಳೆಯಿಂದ ಹಾನಿಗೊಳಗಾದ ಪ್ರದೇಶಕ್ಕೆ ಭೇಟಿ ನೀಡಿ ಮಾತನಾಡಿದ ಅವರು ಜಿಲ್ಲೆಯಲ್ಲಿ 2.8 ಸೆಂ.ಮೀ ಮಳೆಯಾಗಿದ್ದು, ಇಲ್ಲಿ ಸುಮಾರು 4 ಸೆಂ.ಮೀ ಮಳೆಯಾಗಿದ್ದು ಇದರ ಜೊತೆಗೆ ಭೀಕರವಾಗಿ ಗಾಳಿ ಬೀಸಿದ ಪರಿಣಾಮ ಇಷ್ಟೆಲ್ಲಾ ಅನಾಹುತವಾಗಿದೆ. ಈಗಾಗಲೇ ನಮ್ಮ ಸಿಬ್ಬಂದಿಗಳು ಅಂದರೆ ಕೃಷಿ, ತೋಟಗಾರಿಕೆ, ಕಂದಾಯ ಇಲಾಖೆ ಹಾನಿಯಾದ ಪ್ರದೇಶಕ್ಕೆ ತೆರಳಿ ಮಾಹಿತಿ ಸಂಗ್ರಹಿಸುತ್ತಿದ್ದಾರೆ. ಎನ್.ಡಿ.ಆರ್ ನಿಂದ ಪರಿಹಾರ ದೊರಕಿಸುವ ಪ್ರಯತ್ನಮಾಡುತ್ತೇವೆ. ಯಾವ ರೈತರ ಒಟ್ಟು ಆಸ್ತಿಯಲ್ಲಿ ಶೇಕಡ 33% ಹಾನಿಯಾಗಿರುವವರಿಗೆ ಪರಿಹಾರ ಬರುತ್ತದೆ. ಹೆಚ್ಚಿನ ಮಾಹಿತಿಗೆ ಸ್ಥಳೀಯ ಇಲಾಖೆಗಳನ್ನು ಸಂಪರ್ಕಿಸಿ ಮಾಹಿತಿ ನೀಡಿ ಇಲ್ಲ ಕರೆಮಾಡಿದರೆ ಅವರೇ ಬರುತ್ತಾರೆ ಎಂದು ತಿಳಿಸಿದರು ಇದೇ ಸಂದರ್ಭದಲ್ಲಿ ಕೃಷಿಹೊಂಡಕ್ಕೆ ಬೇಲಿ ಇಲ್ಲದ್ದನ್ನು ಗಮನಿಸಿ ಸೂಕ್ತ ಬೇಲಿಹಾಕಿ ಎಂದು ರೈತರಿಗೆ ಎಚ್ಚರಿಸಿದರು.

ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಹಾಲುಗೋಣಕ್ಕೂ ಬೇಟಿ ನೀಡಿದರು, ಈ ಸಂದರ್ಭದಲ್ಲಿ ತಹಸೀದ್ದಾರ್ ಮೋಹನ್‌ಕುಮಾರ್ ತೋಟಗಾರಿಕಾ ಸಹಾಯಕ ನಿರ್ದೇಶಕ ಚಂದ್ರಶೇಖರ್, ಚಿಕ್ಕನಾಯಕನಹಳ್ಳಿ ತಹಸೀಲ್ದಾರ್ ಮಮತ ಮತ್ತಿತ ಅಧಿಕಾರಿಗಳು ಭಾಗವಹಿಸಿದ್ದರು.

# ಕಟ್ಟಡ ಕಾರ್ಮಿಕರಿಗೆ

## ಮಧ್ಯಾಹ್ನದ ವಿಶ್ರಾಂತಿ ಕಡ್ಡಾಯ

ಕೋಲಾರ

ಜಿಲ್ಲೆಯಲ್ಲಿ ಬಿಸಿಲಿನ ತಾಪಮಾನ ಅತೀ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಕಟ್ಟಡ ಕಾರ್ಮಿಕರಿಗೆ ಮಧ್ಯಾಹ್ನ 1 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ವಿಶ್ರಾಂತಿ ನೀಡುವುದು ಗುತ್ತಿದಾರರ, ಮಾಲೀಕರ ಜವಾಬ್ದಾರಿಯಾಗಿದೆ ಎಂದು ಕಾರ್ಮಿಕ ಅಧಿಕಾರಿ ತಿಳಿಸಿದ್ದಾರೆ.

ಕಟ್ಟಡ ಕಾಮಗಾರಿ ಸ್ಥಳಗಳಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಂಭವ ಇರುವುದರಿಂದ, ಕಾರ್ಮಿಕರ ಆರೋಗ್ಯದ ಹಿತದೃಷ್ಟಿ ಹಿನ್ನೆಯಲ್ಲಿ ಮಧ್ಯಾಹ್ನದ ವೇಳೆ ವಿಶ್ರಾಂತಿಗೆ ಅವಕಾಶ ನೀಡುವಂತೆ ಹಾಗೂ ಕಾರ್ಮಿಕರ ಆರೋಗ್ಯವನ್ನು ರಕ್ಷಿಸಿಕೊಳ್ಳಲು ಕೆಲವು ಮಾರ್ಗಸೂಚಿಗಳನ್ನು ಅನುಸರಿಸಲು ಸೂಚಿಸಿದ್ದಾರೆ.

ಕಾರ್ಮಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯ ವ್ಯವಸ್ಥೆ ಮತ್ತು ಪ್ರತಿ ಮೂರು ತಿಂಗಳಿಗೊಮ್ಮೆ ಆರೋಗ್ಯ ತಪಾಸಣೆಯನ್ನು ನೀಡುವುದು ಗುತ್ತಿಗೆದಾರರ, ಮಾಲೀಕರ ಜವಾಬ್ದಾರಿಯಾಗಿದ್ದು, ಈ ಬಗ್ಗೆ ಸೂಕ್ತ ಕ್ರಮವಹಿಸಬೇಕು. ಈ ಕುರಿತು ಯಾವುದೇ ಅಹಿತಕರ ಘಟನೆಗಳು ನಡೆದಲ್ಲಿ ಸಂಬಂಧಿಸಿದ ಗುತ್ತಿಗೆದಾರರು, ಮಾಲೀಕರುಗಳೇ ನೇರ ಹೊಣೆಗಾರರಾಗಿರುತ್ತಾರೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಸಚಿವ ಜಮೀರ್ ಅಹಮದ್ ಖಾನ್ ಅವರು ಕೇರಳದ ಮಲಪ್ಪುರಂನಲ್ಲಿ ಇಂಡಿಯನ್ ಯೂನಿಯನ್ ಮುಸ್ಲಿಂ ಲೀಗ್ ಅಧ್ಯಕ್ಷರಾದ ಪಾಣಕ್ಕಾಡ್ ಸಾದಿಕ್ ಅಲಿ ಶಿಹಾಬ್ ತಂಗಲ್, ಪಿ.ಕೆ.ಕುನ್ಹಾಲಿಕುಟ್ಟಿ ಹಾಗೂ ಮುಸ್ಲಿಂ ಲೀಗ್ ಶಾಸಕರೊಂದಿಗೆ ಸಮಾಲೋಚನೆ ನಡೆಸಿದರು. ಮೌಲಾನಾ ಶಾಫಿ ಸಾದಿ, ನೌಫಲ್, ವಖ್ಫ್ ಬೋರ್ಡ್ ಮಾಜಿ ಅಧ್ಯಕ್ಷ ಅನ್ವರ್ ಬಾಷಾ, ಮುಖಂಡರಾದ ದೀಪಕ್ ಚಿಂಚೋರೆ ಉಪಸ್ಥಿತರಿದ್ದರು.

# ಪ್ಯಾಲಿಯೇಟಿವ್ ಕೇರ್ ಹೊಸ ಘಟಕಕ್ಕೆ ಚಾಲನೆ

ಬೆಂಗಳೂರು

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ದಿನೇಶ್ ಗುಂಡೂರಾವ್ ಅವರು ಸರನಂ ಇಂಡಿಯಾ ಸಂಸ್ಥೆಯ ಸಹಯೋಗದೊಂದಿಗೆ ಮಲ್ಲೇಶ್ವರಂನ ಕೆ ಸಿ ಜನರಲ್ ಆಸ್ಪತ್ರೆಯಲ್ಲಿ ಪ್ಯಾಲಿಯೇಟಿವ್ ಕೇರ್ ಘಟಕವನ್ನು ಉದ್ಘಾಟಿಸಿದರು. ಈ ವೇಳೆ ರಾಜ್ಯಾದ್ಯಂತ ಇಂತಹ ಕೇಂದ್ರಗಳನ್ನು ವಿಸ್ತರಿಸುವ ಬಗ್ಗೆ ಸರ್ಕಾರ ಚಿಂತನೆ ನಡೆಸುತ್ತಿದೆ ಎಂದು ತಿಳಿಸಿದರು.

ಪ್ಯಾಲಿಯೇಟಿವ್ ಕೇರ್ ಎಂದರೆ ಚಿಕಿತ್ಸೆ ನೀಡುವ ಕೇಂದ್ರವಲ್ಲ, ಚಿಕಿತ್ಸೆಗೆ ಸ್ಪಂದಿಸದ ಹಂತದಲ್ಲಿರುವ ರೋಗಿಗಳ ದೈಹಿಕ ನೋವು ಹಾಗೂ ಮಾನಸಿಕ ಒತ್ತಡವನ್ನು ಕಡಿಮೆ ಮಾಡುವ ಸೇವೆಯಾಗಿದ್ದು, ರೋಗಿಗಳು



ಮತ್ತು ಅವರ ಕುಟುಂಬದವರಿಗೆ ಇದು ಮಹತ್ವದ ನೆರವಾಗಲಿದೆ. ವಿಶೇಷವಾಗಿ ಕ್ಯಾನ್ಸರ್, ಮೂತ್ರಪಿಂಡ ವೈಫಲ್ಯ ಸೇರಿದಂತೆ ಇತರ ತೀವ್ರ ಕಾಯಿಲೆಗಳಿಂದ ಬಳಲುತ್ತಿರುವ ಅಂತಿಮ ಹಂತದ ರೋಗಿಗಳಿಗೆ ಇದು ಉಪಯುಕ್ತವಾಗಿದೆ.

ಕೆ.ಸಿ.ಜನರಲ್ ಆಸ್ಪತ್ರೆಯಲ್ಲಿ ಪ್ರಾಥಮಿಕವಾಗಿ ಐದು ಹಾಸಿಗೆಗಳ ವಿಶೇಷ ವಾರ್ಡ್ ನಿರ್ಮಿಸಲಾಗಿದ್ದು, ತೀವ್ರ ನೋವು, ಉಸಿರಾಟ ತೊಂದರೆ, ನರ ಸಂಬಂಧಿತ ಕಾಯಿಲೆಗಳು ಹಾಗೂ ಮಾನಸಿಕ ಅಸ್ವಸ್ಥತೆಯಿಂದ ಬಳಲುವ ರೋಗಿಗಳಿಗೆ ಸಮರ್ಪಿತ ಆರೈಕೆ ಒದಗಿಸಲಾಗುತ್ತದೆ. ಜೊತೆಗೆ ರೋಗಿಗಳ ಕುಟುಂಬದವರಿಗೆ ಅಗತ್ಯವಾದ ತರಬೇತಿಯನ್ನೂ ನೀಡಲಾಗುತ್ತದೆ.

ಈ ಘಟಕದಲ್ಲಿ ಹೊರರೋಗಿ ವಿಭಾಗ, ದಿನಕಾಲ ಆರೈಕೆ ಸೇವೆಗಳು, ಸುಸಜ್ಜಿತ ಒಳರೋಗಿ ವಿಭಾಗ ಮತ್ತು ಆಸ್ಪತ್ರೆಯಿಂದ ಐದು ರಿಂದ ಎಂಟು ಕಿಲೋಮೀಟರ್ ವ್ಯಾಪ್ತಿಯಲ್ಲಿ ಮನೆಗೆ ತೆರಳಿ ಆರೈಕೆ ನೀಡುವ ಮೊಬೈಲ್ ಘಟಕವೂ ಇರಲಿದೆ.

ಮಾನವೀಯತೆ ಆಧಾರಿತ ಈ ಸೇವೆಯನ್ನು ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಬೇಕು ಎಂದು ಸಚಿವರು ಮನವಿ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಆಸ್ಪತ್ರೆಯ ಹಿರಿಯ ವೈದ್ಯಾಧಿಕಾರಿಗಳು ಹಾಗೂ ಸರನಂ ಇಂಡಿಯಾ ಸಂಸ್ಥೆಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಶೃಂಗೇರಿ ಮರುಎಣಿಕೆ ಮತಗಳನ್ನು ತಿದ್ದಲಾಗಿದೆ: ಡಿಸಿಎಂ

ಬೆಂಗಳೂರು

"ಶೃಂಗೇರಿ ಕ್ಷೇತ್ರದ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗೆ ಬಿದ್ದಿರುವ ಅಂಚೆ ಮತಗಳನ್ನು ತಿದ್ದುವ ಮೂಲಕ ಮರುಎಣಿಕೆಯಲ್ಲಿ ಅಸಿಂಧುಗೊಳಿಸಲಾಗಿದೆ. ಇಡೀ ದೇಶದಲ್ಲಿ ಇಂತಹ ಅಪರಾಧ ನಡೆದಿಲ್ಲ. ಇದರ ವಿರುದ್ಧ ಕಾನೂನು ಹೋರಾಟ ಮಾಡುತ್ತೇವೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ಸಿಎಂ ಗೃಹಕಚೇರಿ ಕೃಷ್ಣಾದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಮಂಗಳವಾರ ಪ್ರತಿಕ್ರಿಯೆ ನೀಡಿದರು.

ಶೃಂಗೇರಿ ಕ್ಷೇತ್ರದ ಮರುಎಣಿಕೆಯ ಬಗ್ಗೆ ಕೇಳಿದಾಗ, "ಚುನಾವಣೆ ಮತ ಎಣಿಕೆ ಸಮಯದಲ್ಲಿ ಪ್ರತಿ ಅಂಚೆ ಮತವನ್ನು ತೆರೆದು ಎರಡೂ ಪಕ್ಷಗಳ ಏಜೆಂಟರು ಹಾಗೂ ಅಧಿಕಾರಿಗಳಿಗೆ ತೋರಿಸಿ ಅದನ್ನು ಮಾನ್ಯ ಮಾಡಿ ಎಣಿಕೆ ಮಾಡಲಾಗಿರುತ್ತದೆ. ಈ ರೀತಿ ಮತ ಎಣಿಕೆ ಮಾಡಿದ ಬಳಿಕ ಬಿಜೆಪಿ ಅಭ್ಯರ್ಥಿ ಅಧಿಕಾರಿಗಳನ್ನು ದುರ್ಬಳಕೆ ಮಾಡಿಕೊಂಡು ಅಂಚೆ ಮತಗಳನ್ನು ತಿದ್ದಲಾಗಿದೆ. ಹೀಗಾಗಿಯೇ ಅವರು



ನಿರ್ದಿಷ್ಟ ಮತಗಳ ಬಂಡಲ್ ಅನ್ನೇ ಮರು ಎಣಿಕೆ ಮಾಡಿ ಎಂದು ಪಟ್ಟು ಹಿಡಿದಿದ್ದರು. ಅಧಿಕಾರಿಗಳು ಹಾಗೂ ಬಿಜೆಪಿ ಅಭ್ಯರ್ಥಿ ಈ ಅಕ್ರಮದಲ್ಲಿ ಭಾಗಿಯಾಗಿದ್ದು, ಗಂಭೀರವಾದ ತನಿಖೆ ನಡೆಯಬೇಕಿದೆ. ಚುನಾವಣಾ ಆಯೋಗವು ಈ ವಿಚಾರದಲ್ಲಿ ನ್ಯಾಯ ಒದಗಿಸಬೇಕಿದೆ.

ಇದು ದೇಶದಲ್ಲೇ ಅತಿ ದೊಡ್ಡ ಷಡ್ಯಂತ್ರವಾಗಿದೆ.

ಕರ್ನಾಟಕದಲ್ಲಿ ಬಿಜೆಪಿ ಇಂತಹ ಕೆಲಸದಲ್ಲಿ ಭಾಗಿಯಾಗಿದ್ದು, ನಾವು ಕಾನೂನಾತ್ಮಕ ಹೋರಾಟ ಮಾಡುತ್ತೇವೆ. ರಾಜಕೀಯ ಹೇಗೆ ಮಾಡಬೇಕು ಎಂದು ನಮಗೆ ಗೊತ್ತಿದೆ" ಎಂದು ಕಿಡಿಕಾರಿದರು.

# 'ಪ್ರಜಾಪ್ರಭುತ್ವ ಅಪಾಯದಲ್ಲಿದೆ'

ಬೆಂಗಳೂರು

"ಬಿಜೆಪಿಯ ಕೇಂದ್ರ ಸರ್ಕಾರ ಚುನಾವಣೆಗಳಲ್ಲಿ ತನ್ನ ಅಧಿಕಾರದ ಮೂಲಕ ರಾಜಕೀಯ ಯಂತ್ರಗಳನ್ನು ದುರ್ಬಳಕ್ಕೆ ಮಾಡಿಕೊಳ್ಳುತ್ತಿದ್ದು, ಈ ದುರ್ಬಳಕೆ ಪರಮಾವಧಿ ತಲುಪಿದೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ವಿಧಾನಸೌಧದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಮಂಗಳವಾರ ಪ್ರತಿಕ್ರಿಯೆ ನೀಡಿದರು.

ಅಸ್ಸಾಂ ಹಾಗೂ ಪಶ್ಚಿಮ ಬಂಗಾಳದಲ್ಲಿ ಮತಕಳ್ಳತನವಾಗಿದೆ ಎಂದು ರಾಹುಲ್ ಗಾಂಧಿ ಅವರ ಹೇಳಿಕೆ ಬಗ್ಗೆ ಕೇಳಿದಾಗ, "ರಾಹುಲ್ ಗಾಂಧಿ ಅವರ ಹೇಳಿಕೆಯನ್ನು ನಾನು ಬೆಂಬಲಿಸುತ್ತೇನೆ" ಎಂದರು.

ಬಿಜೆಪಿಯವರು ಕೇರಳ ಹಾಗೂ ಇತರೆ ರಾಜ್ಯಗಳನ್ನು ಪ್ರಶ್ನೆ ಮಾಡುತ್ತಿವೆ ಎಂದು ಕೇಳಿದಾಗ, "ಏನೆಲ್ಲಾ ನಡೆಯುತ್ತಿದೆ ಎಂದು ಮೊದಲಿನಿಂದಲು ನೋಡುತ್ತಿದ್ದೇವೆ. ಪಶ್ಚಿಮ ಬಂಗಾಳದಲ್ಲಿ 2.50 ಲಕ್ಷ ಕೇಂದ್ರ ಸಶಸ್ತ್ರ ಪಡೆ ಸಿಬ್ಬಂದಿ ನಿಯೋಜಿಸಿ ಭಯದ ವಾತಾವರಣ ಸೃಷ್ಟಿಸಲಾಗಿತ್ತು. ಅಸ್ಸಾಂ ಹಾಗೂ ಪಶ್ಚಿಮ ಬಂಗಾಳದಲ್ಲಿ ಮತಕಳ್ಳತನವಾಗಿದೆ ಎಂದು ರಾಹುಲ್ ಗಾಂಧಿ ಅವರ ಹೇಳಿಕೆ ಬಗ್ಗೆ ಕೇಳಿದಾಗ, "ರಾಹುಲ್ ಗಾಂಧಿ ಅವರ ಹೇಳಿಕೆಯನ್ನು ನಾನು ಬೆಂಬಲಿಸುತ್ತೇನೆ" ಎಂದರು.

ಬಿಜೆಪಿಯವರು ಕೇರಳ ಹಾಗೂ ಇತರೆ ರಾಜ್ಯಗಳನ್ನು ಪ್ರಶ್ನೆ ಮಾಡುತ್ತಿವೆ ಎಂದು ಕೇಳಿದಾಗ, "ಏನೆಲ್ಲಾ ನಡೆಯುತ್ತಿದೆ ಎಂದು ಮೊದಲಿನಿಂದಲು ನೋಡುತ್ತಿದ್ದೇವೆ. ಲಕ್ಷ ಕೇಂದ್ರ ಸಶಸ್ತ್ರ ಪಡೆ ಸಿಬ್ಬಂದಿ ನಿಯೋಜಿಸಿ ಭಯದ ವಾತಾವರಣ ಸೃಷ್ಟಿಸಲಾಗಿತ್ತು. ಕ್ಷೇತ್ರ ಮರುವಿಂಗಡಣೆಯಲ್ಲಿ ಅಲ್ಪಸಂಖ್ಯಾತರನ್ನು ಒಂದು ಕಡೆಗೆ ಹಾಕಲಾಗಿತ್ತು. ಇದರಿಂದ ದೇಶದ ರಾಜಕೀಯ ಭವಿಷ್ಯದ ಮೇಲೆ ಪರಿಣಾಮ ಬೀರಿದ್ದು, ಪ್ರಜಾಪ್ರಭುತ್ವ ವ್ಯವಸ್ಥೆ ಅಪಾಯದಲ್ಲಿದೆ" ಎಂದರು.

ನಾನು ಸೋತಿಲ್ಲ, ಹೀಗಾಗಿ ರಾಜೀನಾಮೆ ನೀಡುವುದಿಲ್ಲ ಎಂಬ ಮಮತಾ ಬ್ಯಾನರ್ಜಿ ಅವರ ಹೇಳಿಕೆ ಬಗ್ಗೆ ಕೇಳಿದಾಗ, "ಪ್ರಜಾಪ್ರಭುತ್ವದಲ್ಲಿ ನಾವು ಹೋರಾಟ ಮಾಡಬೇಕು" ಎಂದು ತಿಳಿಸಿದರು.



ಶಿವಾಜಿನಗರದ ಬೌರಿಂಗ್ ಆಸ್ಪತ್ರೆ ಕಾಂಪೌಂಡ್ ಗೋಡೆ ಕುಸಿತ ಪ್ರಕರಣ ದಲ್ಲಿ ಮೃತಪಟ್ಟ ಕೇರಳದ ಕೊಚ್ಚಿನ್ ನಿವಾಸಿಗಳ ಮನೆಗೆ ಭೇಟಿ ನೀಡಿದ್ದ ಸಚಿವ ಜಮೀರ್ ಅಹಮದ್ ಖಾನ್ ಅವರು ವೈಯಕ್ತಿಕ ವಾಗಿ ಸ್ಮಿತಾ ಹಾಗೂ ಲತಾ ಕುಟುಂಬಕ್ಕೆ ತಲಾ ಐದು ಲಕ್ಷ ರೂ. ಹಾಗೂ ಗಾಯಾಳುಗಳಾದ ಸಿಜಿ, ಮಾಯಾ, ಪ್ರೀತಿ ಕುಟುಂಬಕ್ಕೆ ತಲಾ ಒಂದು ಲಕ್ಷ ರೂ. ನೆರವಿನ ಚೆಕ್ ನೀಡಿದರು.

# ಜೀವನಶೈಲಿ ಕಾಯಿಲೆಗೆ ಹೋಮಿಯೋಪತಿ ಸಮಗ್ರ ಪರಿಹಾರ: ಗೆಹ್ಲೋಟ್

ಬೆಂಗಳೂರು

"ಭಾರತದಲ್ಲಿ ಹೋಮಿಯೋಪತಿ ಒಂದು ಶಕ್ತಿಶಾಲಿ ಮತ್ತು ಜನಪ್ರಿಯ ವೈದ್ಯಕೀಯ ಪದ್ಧತಿಯಾಗಿ ಸ್ಥಾಪಿಸಿಕೊಳ್ಳುತ್ತಿದೆ. ದೇಶಾದ್ಯಂತ ಲಕ್ಷಾಂತರ ಜನರು ಈ ಪದ್ಧತಿಯಿಂದ ಪ್ರಯೋಜನ ಪಡೆಯುತ್ತಿದ್ದಾರೆ. ಭಾರತ ಸರ್ಕಾರದ ಆಯುಷ್ ಸಚಿವಾಲಯವು ಈ ದಿಕ್ಕಿನಲ್ಲಿ ಗಮನಾರ್ಹ ಪ್ರಗತಿಯನ್ನು ಸಾಧಿಸುತ್ತಿದೆ" ಎಂದು ಕರ್ನಾಟಕದ ಗೌರವಾನ್ವಿತ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಹೇಳಿದರು.

ಹೋಮಿಯೋಪತಿ ಫೌಂಡೇಶನ್ ಮತ್ತು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯ ಸಹಯೋಗದಲ್ಲಿ ಮಂಗಳವಾರ ಆಯೋಜಿಸಿದ್ದ ವಿಶ್ವ ಹೋಮಿಯೋಪತಿ ದಿನಾಚರಣೆಯಲ್ಲಿ ಅವರು ಮಾತನಾಡಿದರು.

"ಕರ್ನಾಟಕ ರಾಜ್ಯದಲ್ಲಿ, ಉತ್ತಮ ಗುಣಮಟ್ಟದ ವೈದ್ಯಕೀಯ ಶಿಕ್ಷಣ, ಸಮರ್ಪಿತ ವೈದ್ಯರು ಮತ್ತು ಸಂಶೋಧನಾ–ಆಧಾರಿತ ವಿಧಾನವು ಹೋಮಿಯೋಪತಿಯ ಬೆಳವಣಿಗೆಗೆ ಕಾರಣಅವಾಗಿದೆ" ಎಂದರು.

"ಮಹಾನ್ ವೈದ್ಯ ಡಾ. ಸ್ಯಾಮ್ಯುಯೆಲ್ ಹ್ಯಾನೆಮನ್ ಅವರ ಜನ್ಮ ವಾರ್ಷಿಕೋತ್ಸವದ ಅಂಗವಾಗಿ ವಿಶ್ವ ಹೋಮಿಯೋಪತಿ ದಿನವನ್ನು ಪ್ರತಿ ವರ್ಷ ಏಪ್ರಿಲ್ 10 ರಂದು ಆಚರಿಸಲಾಗುತ್ತದೆ. ಅವರು ಮಾನವೀಯತೆಗೆ ರೋಗಗಳ ಚಿಕಿತ್ಸೆಗೆ ಸೀಮಿತವಾಗಿರದೆ ಇಡೀ ವ್ಯಕ್ತಿ, ಅವನ ದೇಹ, ಮನಸ್ಸು ಮತ್ತು ಆತ್ಮದ ಸಮತೋಲನಕ್ಕೆ ಪ್ರಾಮುಖ್ಯತೆಯನ್ನು ನೀಡುವ ವೈದ್ಯಕೀಯ ವ್ಯವಸ್ಥೆಯನ್ನು ನೀಡಿದರು. ಹೋಮಿಯೋಪತಿಯ ಮೂಲಭೂತ




ತತ್ವವೆಂದರೆ "ಚಿಕಿತ್ಸೆಯ ಹಾಗೆ ರೋಗಗಳಿಗೂ ಪರಿಹಾರಗಳು ಪ್ರಕೃತಿಯಲ್ಲೇ ಇವೆ ಎಂಬುದನ್ನು ಕಲಿಸುತ್ತದೆ" ಎಂದು ಹೇಳಿದರು.

"ಸರಿಯಾದ ಪ್ರಮಾಣದಲ್ಲಿ ನೀಡಲಾಗುವ ಔಷಧಿಗಳು ದೇಹದ ನೈಸರ್ಗಿಕ ರೋಗನಿರೋಧಕ ಶಕ್ತಿಯನ್ನು ಜಾಗೃತಗೊಳಿಸುತ್ತವೆ ಮತ್ತು ಅದು ತನ್ನನ್ನು ತಾನೇ ಗುಣಪಡಿಸಿಕೊಳ್ಳಲು ಉತ್ತೇಜಿಸುತ್ತವೆ. ಇಂದಿಗೂ, ವೈದ್ಯಕೀಯ ವಿಜ್ಞಾನವು ಬಹಳ ಮುಂದುವರಿದಿದ್ದರೂ, ಜೀವನಶೈಲಿ ಕಾಯಿಲೆಗಳು, ಮಾನಸಿಕ ಒತ್ತಡ ಮತ್ತು ದೀರ್ಘಕಾಲದ ಕಾಯಿಲೆಗಳು ಹೆಚ್ಚುತ್ತಿವೆ. ಅಂತಹ ಸಮಯದಲ್ಲಿ, ಹೋಮಿಯೋಪತಿಯ ಸಮಗ್ರ ವಿಧಾನವು ಸಮತೋಲಿತ ಮತ್ತು ಶಾಶ್ವತ ಆರೋಗ್ಯದ ಕಡೆಗೆ ನಮ್ಮನ್ನು ಕರೆದೊಯ್ಯುತ್ತದೆ" ಎಂದು ತಿಳಿಸಿದರು. ಜಯನಗರ ಶಾಸಕ ಸಿ.ಕೆ. ರಾಮಮೂರ್ತಿ ಮಾತನಾಡಿ, ಹೋಮಿಯೋಪತಿ ಪದ್ಧತಿಯ ಮೇಲೆ ಜನರ ವಿಶ್ವಾಸ ಉಳಿದಿದೆ. ಅದನ್ನು ಬೆಳೆಸಿಕೊಳ್ಳುವುದು ವೈದ್ಯರ ಹೊಣೆಗಾರಿಕೆ. ಅನೇಕ ಸಂದರ್ಭಗಳಲ್ಲಿ ವೈದ್ಯರ ಮಾತುಗಳೇ ಔಷಧಿಯಂತೆ ಕೆಲಸ ಮಾಡುತ್ತವೆ ಆದ್ದರಿಂದ ರೋಗಿಗಳೊಂದಿಗೆ ಸ್ನೇಹ, ಸಹಾನುಭೂತಿ ಮತ್ತು ಕರುಣೆಯಿಂದ ವರ್ತಿಸಬೇಕು ಎಂದು ಹೇಳಿದರು.

ಕರ್ನಾಟಕ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮೊಹಮ್ಮದ್ ಮೊಹಸಿನ್ ಮಾತನಾಡಿದರು. ಕುಲಸಚಿವರಾದ ಅರ್ಜುನ್ ಒಡೆಯರ್, ಮೌಲ್ಯಮಾಪನ ಕುಲಸಚಿವರಾದ ಡಾ. ರಿಯಾಜ್ ಭಾಷ ಎಸ್. ಹಣಕಾಸು ಅಧಿಕಾರಿ ಬಿ.ಕೆ. ಗಂಗಾಧರ ಉಪಸ್ತಿತರಿದ್ದರು. ಕಾರ್ಯಕ್ರಮದಲ್ಲಿ ಅಧ್ಯಾಪಕರು, ವಿದ್ಯಾರ್ಥಿಗಳು ಹಾಗೂ ವೈದ್ಯರು ಭಾಗವಹಿಸಿದ್ದರು.

# 'ಪ್ರಮಾಣವಚನ ಬೋಧಿಸಲು ತಡ ಮಾಡಿದರೆ ಸ್ಪೀಕರ್ ವಿರುದ್ಧ ಹೋರಾಟ'

ಬೆಂಗಳೂರು

ಶೃಂಗೇರಿ ಶಾಸಕ ಡಿ.ಎನ್.ಜೀವರಾಜ್ ಅವರಿಗೆ ಸ್ಪೀಕರ್ ಯು.ಟಿ.ಖಾದರ್ ಪ್ರಮಾಣವಚನ ಬೋಧಿಸಲು ತಡ ಮಾಡುತ್ತಿದ್ದಾರೆ. ಆದ್ದರಿಂದ ರಾಜ್ಯಪಾಲರೇ ನೇರವಾಗಿ ಪ್ರಮಾಣವಚನ ಬೋಧಿಸಲು ಕೋರಿದ್ದೇವೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಹೇಳಿದರು.

ರಾಜ್ಯಪಾಲರನ್ನು ಭೇಟಿ ಮಾಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶೃಂಗೇರಿ ವಿಧಾನಸಭಾ ಕ್ಷೇತ್ರದ ಮತ ಮರು ಎಣಿಕೆಯಲ್ಲಿ ಬಿಜೆಪಿಯ ಡಿ.ಎನ್.ಜೀವರಾಜ್ ಶಾಸಕರು ಎಂಬ ಫಲಿತಾಂಶ ಬಂದಿದೆ. ಚುನಾವಣಾ ಆಯೋಗದಿಂದ ಎಲ್ಲ ಶಾಸಕರಿಗೆ ಪ್ರಮಾಣ ಪತ್ರ ನೀಡುವಂತೆ ಇವರಿಗೂ ಪ್ರಮಾಣಪತ್ರ ಸಿಕ್ಕಿದೆ.

ರಾಜ್ಯ ಸರ್ಕಾರದ ರಾಜ್ಯಪತ್ರದ ಆದೇಶವೂ ಬಂದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಎಲ್ಲ ಶಾಸಕರು ಇದೇ ರೀತಿ ಶಾಸಕರು ಎನಿಸಿಕೊಳ್ಳುತ್ತಾರೆ. ಈ ಕುರಿತು ಸಭಾಧ್ಯಕ್ಷ ಯು.ಟಿ.ಖಾದರ್ ಅವರಿಗೆ ಫೋನ್ ಕರೆ ಮಾಡಿ ಮಾತಾಡಲು ಯತ್ನಿಸಿದರೆ ಬೇಕೆಂದೇ ಕರೆ ಸ್ವೀಕರಿಸಲಿಲ್ಲ. ಈಗ ಭೇಟಿ ಮಾಡಿದರೆ ನನಗೆ ಕಾನೂನಿನ ಬೋಧನೆ ಮಾಡುತ್ತಿದ್ದಾರೆ. ಸ್ಪೀಕರ್ ಕೂಡ ಇದೇ ರೀತಿ ಶಾಸಕರಾಗಿ ಆಯ್ಕೆಯಾಗಿದ್ದಾರೆ.

ಹಾಗೆ ಆಯ್ಕೆಯಾಗುವಾಗ ಅವರೇನೂ ಕೋರ್ಟ್‌ಗೆ ಹೋಗಿರಲಿಲ್ಲ. ಯಾವುದೇ ಶಾಸಕರ ವಿರುದ್ಧ ಕೋರ್ಟ್ ಗೆ ಹೋಗಲು 45 ದಿನಗಳ ಕಾಲಾವಕಾಶವಿದ್ದರೂ ಪ್ರಮಾಣವಚನಕ್ಕೆ ಅದು ಅಡ್ಡಿಯಾಗುವುದಿಲ್ಲ. ಆದರೆ ಸ್ಪೀಕರ್ ಯು.ಟಿ.ಖಾದರ್ ಮಾತ್ರ ಪ್ರಮಾಣವಚನಕ್ಕೆ ಅವಕಾಶ ಮಾಡಿಕೊಡದೆ ಹೊಸ ಸಂಪ್ರದಾಯ ಆರಂಭಿಸಿದ್ದಾರೆ ಎಂದು ದೂರಿದರು.

ಜೀವರಾಜ್ ಅವರ ವಿರುದ್ಧದ ದೂರಿಗೆ



ಸಂಬಂಧಿಸಿದಂತೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಛೀಮಾರಿ ಹಾಕಿದೆ. ಕಾಂಗ್ರೆಸ್ ನವರೇ ದೊಡ್ಡ ಡಕಾಯಿತಿ ಮಾಡುತ್ತಾರೆ. ಮತ ಎಣಿಕೆ ವೇಳೆ ಚುನಾವಣಾಧಿಕಾರಿಗೆ ಸಿದ್ದರಾಮಯ್ಯ ಅಥವಾ ಡಿ.ಕೆ.ಶಿವಕುಮಾರ್ ಕರೆ ಮಾಡಿ ಒತ್ತಡ ಹೇರಿದ್ದಾರೆಯೇ ಎಂದು ಸಿಬಿಐ ತನಿಖೆ ಆಗಬೇಕಿದೆ. ಫಲಿತಾಂಶವನ್ನು ಕೋರ್ಟ್‌ಗೆ ಸಲ್ಲಿಸಿ ಎಂದು ಎಲ್ಲೂ ಹೇಳಿಲ್ಲ.

ಫಲಿತಾಂಶವನ್ನು ಕೂಡಲೇ ಪ್ರಕಟಿಸಿ ಎಂಬ ಸೂಚನೆ ಇದೆ. ಇಲ್ಲಿ ಸ್ಪೀಕರ್ ಭೇಟಿಯಾಗಿ ಕೇಳಿದರೆ, ನಾಳೆ ಬಾ ನೋಡೋಣ, ಕಾನೂನು ಸಲಹೆ ಪಡೆಯಬೇಕಿದೆ ಎನ್ನುತ್ತಾರೆ. ಹಾಗಿದ್ದರೆ 224 ಶಾಸಕರ ಬಗ್ಗೆಯೂ ಕಾನೂನು ಸಲಹೆ ಪಡೆಯಬೇಕಿತ್ತು ಎಂದರು.

ಸಂವಿಧಾನದ ವಿಧಿ 188 ಪ್ರಕಾರ, ಪ್ರಮಾಣವಚನವನ್ನು ರಾಜ್ಯಪಾಲರು ಬೋಧಿಸುತ್ತಾರೆ. ಸ್ಪೀಕರ್ ಇಲ್ಲವಾದರೆ ಬೇರೆಯವರ ಹೆಸರು ಸೂಚಿಸುವ ಅಧಿಕಾರ ರಾಜ್ಯಪಾಲರಿಗಿದೆ. ಆದ್ದರಿಂದ ಸ್ಪೀಕರ್ ಬದಲು ನೀವೇ ಪ್ರಮಾಣವಚನ ಬೋಧಿಸಿ ಎಂದು ರಾಜ್ಯಪಾಲರಿಗೆ ಮನವಿ ಮಾಡಿದ್ದೇವೆ. ಪಶ್ಚಿಮ ಬಂಗಾಳದಲ್ಲಿ ಮಮತಾ ಬ್ಯಾನರ್ಜಿ ಸರ್ಕಾರ ಹೀಗೆ ಮಾಡಿದಾಗ ಇಬ್ಬರು ಬಿಜೆಪಿ ಶಾಸಕರು ರಾಜ್ಯಪಾಲರಿಗೆ ಕೋರಿದ್ದರು. ಅದೇ ರೀತಿ ನಾವು ಕೂಡ ಕೋರಿದ್ದೇವೆ. ಈ ಪ್ರಕ್ರಿಯೆ ನಡೆಯದೇ ಇದ್ದಲ್ಲಿ ಸ್ಪೀಕರ್ ವಿರುದ್ಧ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರ ಕೈ ಕೆಳಗಿನ ಅಧಿಕಾರಿಗಳು ಪೇಮೆಂಟ್ ಗಿರಾಕಿಗಳು ಅಂದಮೇಲೆ ಅವರೇ ಟ್ಯಾಂಪರ್ ಮಾಡಲು ಹೇಗೆ ಸಾಧ್ಯ? ಜೀವರಾಜ್ ಸೋತು ಎಂಟು ವರ್ಷವಾಗಿರುವಾಗ ಅವರ ಮಾತನ್ನು ಅಧಿಕಾರಿಗಳು ಕೇಳಲು ಸಾಧ್ಯವೇ? ಅಧಿಕಾರಿಗಳು ಮುಖ್ಯಮಂತ್ರಿಯ ಮಾತನ್ನು ಕೇಳುತ್ತಾರೆ.

ಶೃಂಗೇರಿ ಕ್ಷೇತ್ರ ವೋಟ್ ಚೋರಿಗೆ ಉದಾಹರಣೆಯಾಗಿದ್ದು, ಇಡೀ ಸರ್ಕಾರ ವಜಾ ಮಾಡಬೇಕಿದೆ. ಎಲ್ಲ ಕಡೆ ಮತಗಳ್ಳತನ ಆಗುತ್ತಿದೆ ಎಂದರೆ ಸರ್ಕಾರದ ಎಲ್ಲ ಅಧಿಕಾರಿಗಳು ಡಕಾಯಿತರು ಎನ್ನಬೇಕಾಗುತ್ತದೆ. ಎಲ್ಲ ಕಡೆ ಸಿಸಿಟಿವಿ ಕ್ಯಾಮರಾ ಇರುವಾಗ ಕಳ್ಳತನವಾಗಲು ಸಾಧ್ಯವಿಲ್ಲ ಎಂದರು.

# ಕೇಂದ್ರ ಸಂಪುಟ ಅನುಮೋದನೆ

ಬೆಂಗಳೂರು

ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಇದರ ಅಂಗೀಕಾರವು ನ್ಯಾಯಾಧೀಶರ ಸಂಖ್ಯೆಯನ್ನು 37ಕ್ಕೆ ಹೆಚ್ಚಿಸುತ್ತದೆ. ಈ ಸರ್ಕಾರದ ನಿರ್ಧಾರವು ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಇರುವ ಪ್ರಕರಣಗಳ ವಿಲೇವಾರಿಗೆ ಅನುಕೂಲವಾಗಲಿದೆ. ಸುಪ್ರೀಂ ಕೋರ್ಟ್ ಪ್ರಸ್ತುತ ದೊಡ್ಡ ಪ್ರಮಾಣದ ಪ್ರಕರಣಗಳನ್ನು ಎದುರಿಸುತ್ತಿದೆ. ಇದು ನ್ಯಾಯಾಂಗ ಪ್ರಕ್ರಿಯೆಯಲ್ಲಿ ವಿಳಂಬಕ್ಕೆ ಕಾರಣವಾಗುತ್ತದೆ.

ನ್ಯಾಯಾಧೀಶರ ಸಂಖ್ಯೆ ಕಾಯ್ದೆ, 1956 ಅನ್ನು ಮೂಲತಃ ಮುಖ್ಯ ನ್ಯಾಯಾಧೀಶರನ್ನು ಹೊರತುಪಡಿಸಿ 10 ನ್ಯಾಯಾಧೀಶರಿಗೆ ಒದಗಿಸಲಾಗಿತ್ತು ಎಂಬುದು ಗಮನಾರ್ಹ. 1960ರಲ್ಲಿ ಇದನ್ನು 13ಕ್ಕೆ ಹೆಚ್ಚಿಸಲಾಯಿತು, ನಂತರ 17ಕ್ಕೆ ಹೆಚ್ಚಿಸಲಾಯಿತು. 1986ರಲ್ಲಿ ನ್ಯಾಯಾಧೀಶರ ಸಂಖ್ಯೆಯನ್ನು 25ಕ್ಕೆ ಹೆಚ್ಚಿಸಲಾಯಿತು. 2009ರಲ್ಲಿ ಅದನ್ನು 30ಕ್ಕೆ ಹೆಚ್ಚಿಸಲಾಯಿತು. ನ್ಯಾಯಾಂಗವನ್ನು ಬಲಪಡಿಸುವ ನಿಟ್ಟಿನಲ್ಲಿ ಸಚಿವ ಸಂಪುಟದ ನಿರ್ಧಾರವು ಮಹತ್ವದ ಹೆಜ್ಜೆಯನ್ನು ಸೂಚಿಸುತ್ತದೆ.

ಸುಪ್ರೀಂ ಕೋರ್ಟ್‌ನಲ್ಲಿರುವ ಒಟ್ಟು ನ್ಯಾಯಾಧೀಶರ ಸಂಖ್ಯೆಯನ್ನು ಭಾರತೀಯ ಸಂವಿಧಾನದಲ್ಲಿ ನಿಗದಿಪಡಿಸಲಾಗಿಲ್ಲ ಎಂಬುದು ಗಮನಾರ್ಹ. ಸಂವಿಧಾನದ 124(1) ನೇ ವಿಧಿಯ ಅಡಿಯಲ್ಲಿ, ಮುಖ್ಯ ನ್ಯಾಯಾಧೀಶರನ್ನು ಹೊರತುಪಡಿಸಿ ನ್ಯಾಯಾಧೀಶರ ಸಂಖ್ಯೆಯನ್ನು ಸಂಸತ್ತು ನಿರ್ಧರಿಸುತ್ತದೆ. ಕಾಲಕಾಲಕ್ಕೆ ಹೆಚ್ಚುತ್ತಿರುವ ಪ್ರಕರಣಗಳ ಸಂಖ್ಯೆಯನ್ನು ಗಮನದಲ್ಲಿಟ್ಟುಕೊಂಡು, ಇದನ್ನು ಹಲವಾರು ಬಾರಿ ಬದಲಾಯಿಸಲಾಗಿದೆ.

# 'ಬೆಂಗಳೂರನ್ನು ವಿಶ್ವದರ್ಜೆ ಪ್ರಗತಿಯ ಹಬ್ ಆಗಿ ಪರಿವರ್ತಿಸಲು ಒಡಂಬಡಿಕೆ'




ಬೆಂಗಳೂರು

ವಿಶ್ವದರ್ಜೆಯ ಪ್ರಗತಿಯ ಹಬ್ ಆಗಿ ಪರಿವರ್ತಿಸಲು ರಾಜ್ಯ ಸರ್ಕಾರ ಮುಂದಾಗಿದ್ದು, ಇದಕ್ಕೆ ಅಗತ್ಯವಿರುವ ಆರ್ಥಿಕ ಮಾಸ್ಟರ್ ಪ್ಲಾನ್ ರೂಪಿಸಲು ಸುಸ್ಥಿರ ಉದ್ಯೋಗ ಮತ್ತು ಅಭಿವೃದ್ಧಿ ದತ್ತಿ ಸಂಸ್ಥೆಯೊಂದಿಗೆ ಉದ್ದೇಶ ಪತ್ರಕ್ಕೆ ಸಹಿ ಹಾಕಲಾಗಿದೆ.

ವಿಧಾನಸೌಧದಲ್ಲಿ ನಗರಾಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿ ನಾಥ್ ಹಾಗೂ ಖಖಇಲು ಯ ನಿರ್ದೇಶಕ ಡಾ. ಶಿರೀಶ್ ಸಂಖೆರವರು ಡಿಸಿಎಂ ಡಿ.ಕೆ. ಶಿವಕುಮಾರ್ ಅವರ ಸಮ್ಮುಖದಲ್ಲಿ ಪರಸ್ಪರ ಸಹಿ ಹಾಕಿ ಪತ್ರ ವಿನಿಮಯ ಮಾಡಿಕೊಂಡರು. ಈ ಸಂದರ್ಭದಲ್ಲಿ ಡಿಸಿಎಂ ಡಿ ಕೆ ಶಿವಕುಮಾರ್ ಅವರು ಒಡಂಬಡಿಕೆ ಉದ್ದೇಶದ ಬಗ್ಗೆ ವಿವರಿಸಿ, ಸಲಹೆ ಸೂಚನೆ ನೀಡಿದರು.

"ಬೆಂಗಳೂರಿನಲ್ಲಿ ವಿಶ್ವದರ್ಜೆ ಪ್ರಗತಿ ಹಬ್ ಮಾಡಲು ಕಳೆದ ಮೂರು ವರ್ಷಗಳಿಂದ ಪ್ರಯತ್ನ ಮಾಡುತ್ತಲೇ ಇದ್ದೇವೆ. ಕಳೆದ ಮೂರು ವರ್ಷಗಳಲ್ಲಿ ಬೆಂಗಳೂರು ಹಾಗೂ ಸುತ್ತಮುತ್ತಲ ಪ್ರದೇಶದಲ್ಲಿ ದಾಖಲೆ ಪ್ರಮಾಣದಲ್ಲಿ ಆರ್ಥಿಕ ಶಕ್ತಿ ನೀಡಿದ್ದೇವೆ. ಬೆಂಗಳೂರು ಮೆಟ್ರೋಪಾಲಿಟನ್ ಪ್ರದೇಶದಲ್ಲಿ ತಲಾದಾಯ 8.850 ಡಾಲರ್ ನಷ್ಟಿದೆ ಇದೆ. ರಾಜ್ಯದ ಸರಾಸರಿಗಿಂತ ದುಪ್ಪಟ್ಟಿದೆ. 8 ಸಾವಿರ ಚದರ ಕಿ.ಮೀಗಿಂತ ಹೆಚ್ಚು ಪ್ರದೇಶದಲ್ಲಿ ಬೆಂಗಳೂರು ನಗರ, ಗ್ರಾಮಾಂತರ ಹಾಗೂ ದಕ್ಷಿಣ ಜಿಲ್ಲೆಗಳು ಹರಡಿದ್ದು, 1.6 ಬಿಲಿಯನ್ ಜನ ಇಲ್ಲಿದ್ದಾರೆ. ಭಾರತದ ಸಾಫ್ಟೇರ್ ರಫ್ತಿನಲ್ಲಿ 42% ಕೊಡುಗೆ ಬೆಂಗಳೂರು ನೀಡುತ್ತಿದೆ. ಬೆಂಗಳೂರು ನಗರಕ್ಕೆ 500 ವರ್ಷಗಳು ಪೂರ್ಣಗೊಳ್ಳುತ್ತಿದ್ದು, ಈ ಸಂದರ್ಭದಲ್ಲಿ 2032ರಿಂದ 2037ರ ಅವಧಿಯಲ್ಲಿ ಕೈಗೊಳ್ಳಬೇಕಾದ ಆರ್ಥಿಕ ಮಾಸ್ಟರ್ ಪ್ಲಾನ್ ಅನ್ನು ರೂಪಿಸಲು ಚಿಂತನೆ ನಡೆಸಿದ್ದೇವೆ. ಹೀಗಾಗಿ ಬೆಂಗಳೂರಿಗೆ ಹೊಸ ರೂಪ, ಶಕ್ತಿ ನೀಡಬೇಕು ಎಂದು ತೀರ್ಮಾನಿಸಿದ್ದೇವೆ" ಎಂದು ತಿಳಿಸಿದರು.

"ಎಲ್ಲಿ ಉದ್ಯೋಗ ಸೃಷ್ಟಿಸಬೇಕು, ಎಲ್ಲಿ ಪ್ರವಾಸೋದ್ಯಮಕ್ಕೆ ಆದ್ಯತೆ ನೀಡಬೇಕು, ಎಲ್ಲಿ ವಸತಿ ಯೋಜನೆಗಳನ್ನು ತರಬೇಕು, ಸಂಚಾರ ದಟ್ಟಣೆ ನಿವಾರಣೆಗೆ ಸಂಬಂಧಿಸಿದಂತೆ ನಕ್ಷೆ ರೂಪಿಸಲಾಗುವುದು. ದಶದ ಇತರೆ ನಗರಗಳಾದ ಮುಂಬೈ, ದೆಹಲಿ, ಕೋಲ್ಕತ್ತಾಗಳಲ್ಲಿ ಇಲ್ಲಿಗಿಂತ ಹೆಚ್ಚು ಸಂಚಾರ ದಟ್ಟಣೆ ನೋಡಿದ್ದೇನೆ ಎಂದರು.

# ಉತ್ತಮ ಆರೋಗ್ಯಕ್ಕಾಗಿ ಪ್ರಕೃತಿ, ಪರಿಸರ ಸಂರಕ್ಷಣೆ ಅತ್ಯಗತ್ಯ: ಈಶ್ವರಖಂಡ್ರೆ

ಜಮಖಂಡಿ

ಮಾಲಿನ್ಯದಿಂದ ರೋಗ ರುಜಿನ ಹೆಚ್ಚಳವಾಗುತ್ತಿದ್ದು, ಉತ್ತಮ ಆರೋಗ್ಯಕ್ಕಾಗಿ ಪ್ರತಿಯೊಬ್ಬರೂ ಪ್ರಕೃತಿ, ಪರಿಸರ ಸಂರಕ್ಷಣೆಗೆ ಮುಂದಾಗಬೇಕು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಕರೆ ನೀಡಿದ್ದಾರೆ.

ನಗರದಲ್ಲಿಂದು ಜಿರಲಿ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಇಂದು ಕಾಡು, ಹಸಿರು ಹೊದಿಕೆ ಕ್ಷೀಣಿಸುತ್ತಿದ್ದು, ಆಹಾರ, ನೀರು, ವಾಯುವಿನಲ್ಲಿ ಮಾಲಿನ್ಯ ಹೆಚ್ಚಾಗುತ್ತಿದೆ. ಆಧುನಿಕ ಯುಗದಲ್ಲಿ ನಾವು ಒತ್ತಡದಲ್ಲಿ ಬದುಕುತ್ತಿದ್ದು, ಇವೆಲ್ಲವೂ ಕಾಯಿಲೆಯ ಮೂಲವಾಗಿದೆ, ಹೀಗಾಗಿ ಪ್ರಕೃತಿ ಪರಿಸರ ಉಳಿದಾಗ ಮಾತ್ರ ಮನುಷ್ಯ ನೆಮ್ಮದಿಯ ಬದುಕು ನಡೆಸಲು ಸಾಧ್ಯ ಎಂದರು.

ವೈದ್ಯಕೀಯ ಸೇವೆ ಇಂದು ದುಬಾರಿಯಾಗಿದೆ. ಲಕ್ಷಾಂತರ ರೂಪಾಯಿ



ವೆಚ್ಚ ಆಗುತ್ತಿದೆ. ಬಡ, ಮಧ್ಯಮವರ್ಗದವರಿಗೆ ಕೈಗೆಟಕುವ ದರದಲ್ಲಿ ಉತ್ತಮ ಗುಣಮಟ್ಟದ ಆರೋಗ್ಯ ಸೇವೆಯನ್ನು ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಗಳು ನೀಡಬೇಕು ಎಂದರು.

ಆಯುರ್ವೇದ ಜಗತ್ತಿನ ಪ್ರಾಚೀನ ವೈದ್ಯಪದ್ಧತಿಯಾಗಿದ್ದು, ಇದು ಭಾರತೀಯ ಋಷಿಮುನಿಗಳ ಕೊಡುಗೆಯಾಗಿದೆ. ನಮ್ಮ ಋಷಿಗಳಿಗೆ ಔಷಧೀಯ ಗಿಡಮೂಲಿಕೆಗಳ ಬಗ್ಗೆ ಅಪಾರ ಜ್ಞಾನ ಇತ್ತು. ಯಾವುದೇ ಅಡ್ಡ ಪರಿಣಾಮ ಇಲ್ಲದ ಆಯುರ್ವೇದದ ಬಗ್ಗೆ ಇತ್ತೀಚಿನ ದಿನಗಳಲ್ಲಿ ಜನರ ಒಲವು ಹೆಚ್ಚಾಗುತ್ತಿದೆ ಎಂದು ಹೇಳಿದರು.

ಭಾರತೀಯ ಸಂಸ್ಕೃತಿಯಲ್ಲಿ ರೋಗ ಗುಣಪಡಿಸುವ ಜೀವ ಉಳಿಸುವ ವೈದ್ಯರನ್ನು ದೇವರೆಂದು ಕಾಣುತ್ತಾರೆ. ವೈದ್ಯೋ ನಾರಾಯಣೋ ಹರಿಃ ಎನ್ನುತ್ತಾರೆ. ವೈದ್ಯರು ಕೂಡ ಸೇವಾ ಮನೋಭಾವದಿಂದ ಬಡ ಮತ್ತು ಮಧ್ಯಮವರ್ಗದ ರೋಗಿಗಳ ಪಾಲಿನ ಆಶಾಕಿರಣ ಆಗಬೇಕು ಎಂದರು.

ಜಮಖಂಡಿಗೂ ತಮಗೂ ಅವಿನಾಭಾವ ಸಂಬಂಧ ಇದೆ ಎಂದ ಖಂಡ್ರೆ, ಸಿದ್ದು ನ್ಯಾಮಗೌಡರು ಶಾಸಕರಾಗಿದ್ದಾಗ, ಹಲವು ಬಾರಿ ಜಮಖಂಡಿಗೆ ಬಂದಿದ್ದೆ. ಪ್ರದೇಶ ಕಾಂಗ್ರೆಸ್ ಸಮಿತಿಯ ಕಾರ್ಯಾಧ್ಯಕ್ಷನಾಗಿ ಉಪ ಚುನಾವಣೆಯ ಸಂದರ್ಭದಲ್ಲಿ ಉಸ್ತುವಾರಿಯಾಗಿ ಬಂದು, ಜಮಖಂಡಿಯ ಹಳ್ಳಿ ಹಳ್ಳಿಗಳಲ್ಲಿ ಪ್ರಚಾರ ಮಾಡಿದ್ದು, ಆಗ ಇಲ್ಲಿನ ಜನತೆ ತೋರಿದ ಪ್ರೀತಿ, ವಾತ್ಸಲ್ಯ, ವಿಶ್ವಾಸ, ಅಭಿಮಾನಕ್ಕೆ ತಾವು ಆಭಾರಿಯಾಗಿರುವುದಾಗಿ ಹೇಳಿದರು.

ಬಿಜೆಪಿ ಕಾರ್ಯಕಾಲದಲ್ಲಿ ಪ್ರವಾಹದಿಂದ ಸಂಕಷ್ಟ ಎದುರಾದ ಸಂದರ್ಭದಲ್ಲಿಯೂ ಇಲ್ಲಿಗೆ ಆಗಮಿಸಿ, ಜನರ ನೋವಿನಲ್ಲಿ ಭಾಗಿಯಾಗಿದ್ದೆ ಎಂದ ಅವರು, ಜನ, ಜಾನುವಾರ ಮೃತಪಟ್ಟ ಬಗ್ಗೆ ಅಧ್ಯಯನ ನಡೆಸಿ, ಪರಿಹಾರಕ್ಕಾಗಿ ಸರ್ಕಾರಕ್ಕೆ ವರದಿ ಸಲ್ಲಿಸಿದ್ದಾಗಿ ಅವರು ತಿಳಿಸಿದರು.

ಇಂದಿನ ಯುವಪೀಳಿಗೆ ನಮ್ಮ ಸಮಾಜದ ಆಧಾರಸ್ತಂಭವಾಗಿದ್ದು, ಅಧ್ಯಯನವೊಂದರ ಪ್ರಕಾರ ಶಂ.30ರಷ್ಟು ಯುವಜನರು ಮದ್ಯ, ಮಾದಕದ್ರವ್ಯ ವ್ಯಸನಿಗಳಾಗಿ ತಮ್ಮ ಆರೋಗ್ಯ ಹಾಳು ಮಾಡಿಕೊಳ್ಳುತ್ತಿದ್ದಾರೆ. ಇವರಿಗೆ ಮಾತೆಯರು, ಸೋದರಿಯರು, ಮಠಮಾನ್ಯಗಳು ಮಾರ್ಗದರ್ಶನ ನೀಡಿ, ಸರಿದಾರಿಗೆ ತರಬೇಕು ಎಂದರು.

ಈಶ್ವರ ಇಲ್ಲಿನ ಉದ್ಯಾನವನ ಇನ್ನೂ ಹೆಚ್ಚಿನ ಅಭಿವೃದ್ಧಿ ಆಗಬೇಕು. ಮಹಿಳೆಯರು, ಮಕ್ಕಳು, ವೃದ್ಧರು ಎಲ್ಲರಿಗೂ ಅನುಕೂಲಕರ ವಾತಾವರಣ ಇರಬೇಕು. ಇದಕ್ಕೆ ಅರಣ್ಯ ಸಚಿವನಾಗಿ ಅಗತ್ಯವಾದ ಅನುದಾನ ನೀಡುವುದಾಗಿ ಅರಣ್ಯ ಸಚಿವ ಈಶ್ವರ ಖಂಡ್ರೆ ಭರವಸೆ ನೀಡಿದರು.

## ಜಮೀರ್ ಮನೆಯಲ್ಲಿ ಕಳ್ಳತನ: ಕಳ್ಳರ ಬಂಧನ

ಬೆಂಗಳೂರು

ಸಚಿವ ಜಮೀರ್ ಅಹ್ಮದ್ ಮನೆಗೆ ಕನ್ನ ಹಾಕಿ ಕೋಟಿ ಮೌಲ್ಯದ ಚಿನ್ನಾಭರಣ ಕದ್ದಿದ್ದ ಕಳ್ಳರನ್ನು ಬಂಧಿಸುವಲ್ಲಿ ಶಿವಾಜಿನಗರ ಪೊಲೀಸರು ಯಶಸ್ವಿಯಾಗಿದ್ದಾರೆ.

ಅಮೀರ್ ಅಹ್ಮದ್, ಅವೀನ್ ಬಂಧಿತ ಆರೋಪಿಗಳು. ಸಚಿವ ಜಮೀರ್ ಮನೆಯಲ್ಲಿ ಕಳೆದ ಮೂರು ವರ್ಷದಿಂದ ಹಂತ ಹಂತವಾಗಿ ಕೋಟಿ ಮೌಲ್ಯದ ಚಿನ್ನಾಭರಣ ಎಗರಿಸಿದ್ದರು. ಜಮೀರ್ ಆರೋಗ್ಯ ವಿಚಾರಿಸುವ ಸಲುವಾಗಿ ಪದೇ ಪದೇ ಮನೆಗೆ ಬರುತ್ತಿದ್ದ ಅಮೀರ್ 2023ರಿಂದ ನಿರಂತರವಾಗಿ 1 ಕೆಜಿ 200 ಗ್ರಾಂ ಚಿನ್ನಾಭರಣ ಎಗರಿಸಿದ್ದಾನೆ.

ಟ್ರಾವೆಲ್ಸ್ ಬ್ಯುಸಿನೆಸ್‌ನಲ್ಲಿ ಲಾಸ್ ಆಗಿದ್ದಕ್ಕೆ ಈ ಕೃತ್ಯ ಎಸಗಿದ್ದಾರೆ ಎಂದು ತಿಳಿದು ಬಂದಿದೆ. ಆ ಹಣ ರಿಯಲ್ ಎಸ್ಟೇಟ್‌ನಲ್ಲಿ ಹೂಡಿಕೆ ಮಾಡಿ ಲಾಭಕ್ಕೆ ಪ್ಲ್ಯಾನ್ ಮಾಡಿದ್ದರು. ಆದರೆ ಕಾಲ್ ಮಾಡಿದಾಗ ರಿಸೀವ್ ಮಾಡದಿದ್ದಾಗ ಇಬ್ಬರ ಮೇಲೆ ಅನುಮಾನ ವ್ಯಕ್ತವಾಗಿದ್ದು, ಬಳಿಕ ಪೊಲೀಸರು ವಿಚಾರಣೆ ನಡೆಸಿದಾಗ ಕೃತ್ಯ ಬಯಲಿಗೆ ಬಂದಿದೆ. ಸದ್ಯ ಜಮೀರ್ ಅಹ್ಮದ್ ತಾಯಿ ನೀಡಿದ ದೂರಿನ ಮೇರೆಗೆ ಶಿವಾಜಿನಗರ ಪೊಲೀಸರು ತನಿಖೆ ನಡೆಸಿ ಇಬ್ಬರನ್ನು ಬಂಧಿಸಿದ್ದಾರೆ.

08/05/2026

ಭಾರತ ಸಾರಥಿ

BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# 1.85 ಲಕ್ಷ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಣೆ: ಪರಂ

ತುಮಕೂರು

ರಾಜ್ಯ ಸರ್ಕಾರಕ್ಕೆ ಮೂರು ವರ್ಷ ತುಂಬುತ್ತಿರುವ ಹಿನ್ನೆಲೆಯಲ್ಲಿ ಮೇ 20ರಂದು ತುಮಕೂರಿನಲ್ಲಿ ಆಯೋಜಿಸಿರುವ ಬೃಹತ್ ಸಮಾವೇಶವು ಸಂಪೂರ್ಣವಾಗಿ ಸರ್ಕಾರಿ ಹಾಗೂ ಪಕ್ಷಾತೀತ ಕಾರ್ಯಕ್ರಮವಾಗಿದೆ ಎಂದು ಗೃಹ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ್ ಸ್ಪಷ್ಟಪಡಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಂಗಳವಾರ ನಡೆದ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ತುಮಕೂರು ಜಿಲ್ಲೆಯಲ್ಲಿ ಅಭೂತಪೂರ್ವ ಅಭಿವೃದ್ಧಿ ಕಾರ್ಯಗಳು ನಡೆದಿರುವ ಕಾರಣ ಈ ಸಮಾವೇಶವನ್ನು ಇಲ್ಲಿಯೇ ಹಮ್ಮಿಕೊಳ್ಳಲಾಗಿದೆ ಎಂದರು.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉದ್ಘಾಟಿಸಲಿರುವ ಈ ಕಾರ್ಯಕ್ರಮದಲ್ಲಿ ಕಂದಾಯ ಇಲಾಖೆಯ ವತಿಯಿಂದ 1.85 ಲಕ್ಷ ಫಲಾನುಭವಿಗಳಿಗೆ ಕಂದಾಯ ಗ್ರಾಮಗಳ ಹಕ್ಕುಪತ್ರ, ಪೌತಿಖಾತೆ ಸೇರಿದಂತೆ ವಿವಿಧ ಸವಲತ್ತುಗಳನ್ನು ವಿತರಿಸಲಾಗುವುದು. ಇದರೊಂದಿಗೆ ವಿವಿಧ ಇಲಾಖೆಗಳ ಯೋಜನೆಗಳಡಿ ಸುಮಾರು 80 ಸಾವಿರಕ್ಕೂ ಹೆಚ್ಚು ಮಂದಿಗೆ ಸವಲತ್ತುಗಳು ತಲುಪಲಿವೆ ಎಂದು ಸಚಿವರು ಮಾಹಿತಿ ನೀಡಿದರು.

ಸರ್ಕಾರದ ಗ್ಯಾರಂಟಿ ಯೋಜನೆಗಳು ಹಾಗೂ ಜಿಲ್ಲಾ ಮಟ್ಟದ ಸಾಧನೆಗಳನ್ನು ಬಿಂಬಿಸುವ ಬೃಹತ್ ವಸ್ತುಪ್ರದರ್ಶನವನ್ನು ಸಮಾವೇಶದಲ್ಲಿ ಏರ್ಪಡಿಸಲಾಗುತ್ತಿದೆ. ಇದೇ ವೇದಿಕೆಯಲ್ಲಿ ಜಿಲ್ಲೆಯ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಿಲಾನ್ಯಾಸ ಹಾಗೂ ಲೋಕಾರ್ಪಣೆ ಕಾರ್ಯಕ್ರಮಗಳು ನೆರವೇರಲಿವೆ.

ಸಮಾವೇಶಕ್ಕೆ ಜಿಲ್ಲೆಯಾದ್ಯಂತ 2 ಲಕ್ಷಕ್ಕೂ ಹೆಚ್ಚು ಫಲಾನುಭವಿಗಳು ಆಗಮಿಸುವ ನಿರೀಕ್ಷೆಯಿದ್ದು, ಅವರಿಗೆ ಯಾವುದೇ ತೊಂದರೆಯಾಗದಂತೆ ಸಾರಿಗೆ ಹಾಗೂ ಊಟದ ವ್ಯವಸ್ಥೆ ಕಲ್ಪಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಶಿಷ್ಟಾಚಾರದಂತೆ ಎಲ್ಲಾ ಜನಪ್ರತಿನಿಧಿಗಳನ್ನು ಆಹ್ವಾನಿಸಲಾಗಿದ್ದು, ಎಲ್ಲರೂ ಪಕ್ಷಭೇದ ಮರೆತು ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಪರಮೇಶ್ವರ್ ಮನವಿ ಮಾಡಿದರು.

ಕೆಎಸ್‌ಆರ್‌ಟಿಸಿ ಅಧ್ಯಕ್ಷ ಎಸ್.ಆರ್. ಶ್ರೀನಿವಾಸ್, ಶಾಸಕರಾದ ಕೆ. ಷಡಾಕ್ಷರಿ, ಸಿ.ಬಿ. ಸುರೇಶ್ ಬಾಬು, ಬಿ. ಸುರೇಶ್‌ಗೌಡ, ಜಿ.ಬಿ. ಜ್ಯೋತಿಗಣೇಶ್, ಬಿಎಂಟಿಸಿ ಉಪಾಧ್ಯಕ್ಷ ನಿಕೇತ್ ರಾಜ್, ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಎಸ್ಪಿ ಕೆ.ವಿ. ಅಶೋಕ್ ಹಾಗೂ ಜಿ.ಪಂ. ಸಿಇಒ ಬಿ.ವಿ. ಅಶ್ವಿಜ ಉಪಸ್ಥಿತರಿದ್ದರು.

# ಬಡವರ ಅಕ್ಕಿಗೆ ಕನ್ನ: ಓರ್ವನ ಬಂಧನ



ದೊಡ್ಡಬಳ್ಳಾಪುರ

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ 'ಅನ್ನಭಾಗ್ಯ' ಯೋಜನೆಯಡಿ ಬಡವರಿಗೆ ವಿತರಿಸಬೇಕಾದ ಪಡಿತರ ಅಕ್ಕಿಯನ್ನು ಅಕ್ರಮವಾಗಿ ದಾಸ್ತಾನು ಮಾಡಿದ್ದ ಬೃಹತ್ ದಂಧೆಯನ್ನು ಆಹಾರ ಇಲಾಖೆ ಹಾಗೂ ಪೊಲೀಸ್ ಅಧಿಕಾರಿಗಳು ಜಂಟಿ ಕಾರ್ಯಾಚರಣೆಯ ಮೂಲಕ ಭೇದಿಸಿದ್ದಾರೆ. ನಗರದ ಪ್ರಿಯದರ್ಶಿನಿ ಬಡಾವಣೆಯ ಗೋಡೌನ್ ಒಂದರ ಮೇಲೆ ದಾಳಿ ನಡೆಸಿ ಬರೋಬ್ಬರಿ 21.5 ಟನ್ ಅಕ್ಕಿಯನ್ನು ವಶಪಡಿಸಿಕೊಳ್ಳಲಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಗೋಡೌನ್ ಮಾಲೀಕ ತೂಬಗೆರೆ ಹರೀಶ್ ಎಂಬಾತನನ್ನು ಗ್ರಾಮಾಂತರ ಪೊಲೀಸರು ವಶಕ್ಕೆ ಪಡೆದಿದ್ದು, ತನಿಖೆ ಮುಂದುವರಿಸಿದ್ದಾರೆ. ನಗರದ ಹೊರವಲಯದ ಪ್ರಿಯದರ್ಶಿನಿ ಬಡಾವಣೆಯಲ್ಲಿ ಅಕ್ರಮವಾಗಿ ಪಡಿತರ ಅಕ್ಕಿ ಸಂಗ್ರಹಿಸಿರುವ ಬಗ್ಗೆ ಖಚಿತ ಮಾಹಿತಿ ಪಡೆದ ತಹಶೀಲ್ದಾರ್ ಮಲ್ಲಪ್ಪ ಹಾಗೂ ಇನ್ಸ್‌ಪೆಕ್ಟರ್ ಸಾದಿಕ್ ಪಾಷಾ ನೇತೃತ್ವದ ತಂಡ ನಿನ್ನೆ ಸಂಜೆ ದಾಳಿ ನಡೆಸಿತು. ಈ ವೇಳೆ ಆರೋಪಿ ಹರೀಶ್ ನಿರೀಕ್ಷೆಗೂ ಮೀರಿ ಮೂರು ಪ್ರತ್ಯೇಕ ಸ್ಥಳಗಳಲ್ಲಿ ಅಕ್ಕಿಯನ್ನು ಬಚ್ಚಿಟ್ಟಿರುವುದು ಬೆಳಕಿಗೆ ಬಂದಿದೆ. ದಾಳಿಯಲ್ಲಿ 21.5 ಟನ್ ಅಕ್ಕಿ ಹಾಗೂ ಅಲ್ಪ ಪ್ರಮಾಣದ ರಾಗಿಯನ್ನು ಜಪ್ತಿ ಮಾಡಲಾಗಿದೆ. ರಾಜ್ಯದ ಆಹಾರ ಸಚಿವರ ಉಸ್ತುವಾರಿ ಜಿಲ್ಲೆಯಲ್ಲೇ ಇಷ್ಟೊಂದು ಬೃಹತ್ ಪ್ರಮಾಣದ ಪಡಿತರ ಅಕ್ಕಿ ಅಡ್ಡದಾರಿ ಹಿಡಿದಿರುವುದು ಸಾರ್ವಜನಿಕರಲ್ಲಿ ತೀವ್ರ ಆಶ್ಚರ್ಯ ಮೂಡಿಸಿದೆ. "ಸಚಿವರ ಜಿಲ್ಲೆಯಲ್ಲೇ ಹೀಗಾದರೆ, ರಾಜ್ಯದ ಉಳಿದ ಭಾಗಗಳ ಪರಿಸ್ಥಿತಿ ಏನು?" ಎಂಬ ಚರ್ಚೆಗಳು ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿವೆ. ಯಶಸ್ವಿ ಕಾರ್ಯಾಚರಣೆಯಲ್ಲಿ ಚತಾಲ್ಲೂಕು ಆಹಾರ ನಿರೀಕ್ಷಕ ಅನಂತ ಕುಮಾರ್, ಪೊಲೀಸ್ ಠಾಣೆಯ ಪಿಎಸ್‌ಐ ಚಂದ್ರಕಲಾ, ಎಎಸ್‌ಐ ರಂಗಸ್ವಾಮಿ ಹಾಗೂ ಸಿಬ್ಬಂದಿ ಶ್ರೀನಿವಾಸ್ ಪಾಲ್ಗೊಂಡಿದ್ದರು. ಅಕ್ರಮ ದಂಧೆಗಳ ಬಗ್ಗೆ ಮಾಹಿತಿ ನೀಡುತ್ತಿರುವ ಜಾಗೃತ ನಾಗರಿಕರ ಕಾರ್ಯವನ್ನು ಅಧಿಕಾರಿಗಳು ಶ್ಲಾಘಿಸಿದ್ದಾರೆ.

# ಸಂಚಾರ ಮಾರ್ಗ ಬದಲಾವಣೆ

ತುಮಕೂರು

ನಗರದ ಹೃದಯಭಾಗದ ರಾಷ್ಟ್ರೀಯ ಹೆದ್ದಾರಿ–73 (ಬಿ.ಹೆಚ್. ರಸ್ತೆ) ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾಮಗಾರಿಗಳು ಭರದಿಂದ ಸಾಗುತ್ತಿವೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರ ಸುರಕ್ಷತೆ ಮತ್ತು ಸುಗಮ ಸಂಚಾರದ ಹಿತದೃಷ್ಟಿಯಿಂದ ಭಾರಿ ಹಾಗೂ ಮಧ್ಯಮ ಸರಕು ಸಾಗಾಣಿಕೆ ವಾಹನಗಳ ಸಂಚಾರ ಮಾರ್ಗವನ್ನು ಬದಲಾವಣೆ ಮಾಡಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಶೋಕ್ ಕೆ.ವಿ. ಆದೇಶ ಹೊರಡಿಸಿದ್ದಾರೆ.

ನಗರದ ಶೆಲ್ ಪೆಟ್ರೋಲ್ ಬಂಕ್‌ನಿಂದ ಬಟವಾಡಿವರೆಗೆ ರಸ್ತೆ ಕಾಮಗಾರಿ ಪ್ರಗತಿಯಲ್ಲಿದೆ. ಕಾಮಗಾರಿ ನಡೆಯುವ ಸ್ಥಳಗಳಲ್ಲಿ ಅಪಘಾತಗಳನ್ನು ತಡೆಗಟ್ಟಲು ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ಈ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಾಗಿದೆ. ಈ ಆದೇಶವು ಮೇ 1 ರಿಂದ ಜಾರಿಗೆ ಬಂದಿದ್ದು, ಕಾಮಗಾರಿ ಪೂರ್ಣಗೊಳ್ಳುವವರೆಗೆ ಅನ್ವಯವಾಗಲಿದೆ.

ವಾಹನ ಸವಾರರಿಗೆ ನಿಗದಿಪಡಿಸಿದ ಪರ್ಯಾಯ ಮಾರ್ಗಗಳು ಹೀಗಿವೆ:

ಕುಣಿಗಲ್‌ನಿಂದ ಮಧುಗಿರಿ, ಶಿರಾ ಕಡೆಗೆ: ಕುಣಿಗಲ್ ಜಂಕ್ಷನ್ ಮೂಲಕ ಬರುವ ಭಾರಿ ವಾಹನಗಳು ಗುಬ್ಬಿ ರಿಂಗ್ ರಸ್ತೆ ಜಂಕ್ಷನ್, ದಿಬ್ಬೂರು ಸರ್ಕಲ್ ಹಾಗೂ ಶಿರಾ ಗೇಟ್ 80 ಅಡಿ ರಸ್ತೆಯ ಮೂಲಕ ಸಾಗಬೇಕು.

ತಿಪಟೂರಿನಿಂದ ಮಧುಗಿರಿ, ಶಿರಾ ಕಡೆಗೆ: ತಿಪಟೂರು ಕಡೆಯಿಂದ ಬರುವ ವಾಹನಗಳು ಗುಬ್ಬಿ ರಿಂಗ್ ರಸ್ತೆ ಜಂಕ್ಷನ್, ದಿಬ್ಬೂರು ಸರ್ಕಲ್ ಮೂಲಕ ಶಿರಾ ಗೇಟ್ ತಲುಪಿ ಮುಂದೆ ಸಾಗಬೇಕು.

ಶಿರಾ ಮತ್ತು ಮಧುಗಿರಿ ಕಡೆಯಿಂದ ಬರುವ ಸರಕು ವಾಹನಗಳು ಶಿರಾ ಗೇಟ್ 80 ಅಡಿ ರಸ್ತೆ, ದಿಬ್ಬೂರು ಸರ್ಕಲ್ ಮೂಲಕ ಗುಬ್ಬಿ ರಿಂಗ್ ರಸ್ತೆ ಜಂಕ್ಷನ್ ತಲುಪಬೇಕು.

ಈ ಮಾರ್ಗದಲ್ಲಿ ಚಲಿಸುವ ವಾಹನಗಳು ಗುಬ್ಬಿ ರಿಂಗ್ ರಸ್ತೆ ಜಂಕ್ಷನ್, ಕುಣಿಗಲ್ ಜಂಕ್ಷನ್ ನಂತರ ಜಾಸ್ ಟೋಲ್ (NH 48) ರಸ್ತೆಯನ್ನು ಬಳಸಬೇಕು.

ನಗರದ ಪ್ರಮುಖ ಬಸ್ ನಿಲ್ದಾಣದಿಂದ ಬೆಂಗಳೂರು ಕಡೆಗೆ ಹೊರಡುವ ಕೆಎಸ್‌ಆರ್‌ಟಿಸಿ ಬಸ್‌ಗಳು ಅಶೋಕ ರಸ್ತೆ, ಕೋಡಿ ಸರ್ಕಲ್, ಕೋತಿ ತೋಪು ಹಾಗೂ ಹನುಮಂತಪುರ ರಸ್ತೆಯ ಮೂಲಕ ಸಂಚರಿಸಲು ಸೂಚಿಸಲಾಗಿದೆ.

"ಸಾರ್ವಜನಿಕರು ಹಾಗೂ ವಾಹನ ಚಾಲಕರು ಪೊಲೀಸ್ ಇಲಾಖೆಯ ಈ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ನಿಯಮ ಉಲ್ಲಂಘಿಸುವ ವಾಹನಗಳ ವಿರುದ್ಧ ಕಾನೂನು ರೀತ್ಯಾ ಕಠಿಣ ಕ್ರಮ ಕೈಗೊಳ್ಳಲಾಗುವುದು" ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಪತ್ರಿಕಾ ಪ್ರಕಟಣೆಯಲ್ಲಿ ಎಚ್ಚರಿಸಿದ್ದಾರೆ.

# 'ನಿಷ್ಠಾವಂತರನ್ನು ಕಡೆಗಣಿಸಬೇಡಿ, ಪಕ್ಷ ವಿರೋಧಿಗಳಿಗೆ ಮನ್ನಣೆ ನೀಡಬೇಡಿ'

ದೊಡ್ಡಬಳ್ಳಾಪುರ

ಜೆಡಿಎಸ್ ಪಕ್ಷದ 25ನೇ ವರ್ಷದ 'ಬೆಳ್ಳಿಹಬ್ಬ'ದ ಸಂಭ್ರಮದ ಸಮಾಲೋಚನಾ ಸಭೆಯಲ್ಲಿ ತಾಲ್ಲೂಕು ಜೆಡಿಎಸ್‌ನ ಒಳಗಿನ ಭಿನ್ನಾಭಿಪ್ರಾಯಗಳು ಬಹಿರಂಗಗೊಂಡಿವೆ. "ಪಕ್ಷಕ್ಕಾಗಿ ನಿಷ್ಠೆಯಿಂದ ದುಡಿಯುವವರನ್ನು ಕಡೆಗಣಿಸಿ, ಪಕ್ಷ ವಿರೋಧಿ ಚಟುವಟಿಕೆ ನಡೆಸುವವರಿಗೆ ಜಿಲ್ಲಾಧ್ಯಕ್ಷರು ಮನ್ನಣೆ ನೀಡುತ್ತಿರುವುದು ಸರಿಯಲ್ಲ" ಎಂದು ರಾಜ್ಯ ಜೆಡಿಎಸ್ ಪ್ರಮುಖರಾದ ಹುಸ್ಕೂರ್ ಆನಂದ್ ಅಸಮಾಧಾನ ವ್ಯಕ್ತಪಡಿಸಿದರು.

ದೊಡ್ಡಬೆಳವಂಗಲದ ಖಾಸಗಿ ಕಲ್ಯಾಣ ಮಂಟಪದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ತಾಲ್ಲೂಕಿನಲ್ಲಿ ಪಕ್ಷ ಸಂಘಟನೆ ಸುಗಮವಾಗಿ ನಡೆಯಬೇಕಾದರೆ ಎಲ್ಲರನ್ನೂ ಒಟ್ಟಾಗಿ ತೆಗೆದುಕೊಂಡು ಹೋಗುವ ದೊಡ್ಡತನವನ್ನು ಜಿಲ್ಲಾ ನಾಯಕರು ತೋರಬೇಕು ಎಂದು ಒತ್ತಾಯಿಸಿದರು.

"ದೇವೇಗೌಡರ ತತ್ವ ಸಿದ್ಧಾಂತ ನಂಬಿ, ಯಾವುದೇ ಆಮಿಷಕ್ಕೆ ಬಲಿಯಾಗದೆ 30–35 ವರ್ಷಗಳಿಂದ ಪಕ್ಷ ಕಟ್ಟಿದ ಸಾವಿರಾರು ಕಾರ್ಯಕರ್ತರು ತಾಲ್ಲೂಕಿನಲ್ಲಿದ್ದಾರೆ. ಅಂತಹವರನ್ನು ಗುರುತಿಸಿ ಸ್ಥಾನಮಾನ ನೀಡಿದರೆ ಪಕ್ಷ ಪ್ರಬಲವಾಗಲಿದೆ. ಬಮೂಲ್ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿ ವಿರುದ್ಧ ಕೆಲಸ ಮಾಡಿದವರಿಗೆ ಇಂದು ಅಧಿಕಾರ ನೀಡಿರುವುದು ನಿಷ್ಠಾವಂತರಿಗೆ ನೋವುಂಟು ಮಾಡಿದೆ" ಎಂದು ವಕೀಲ ಸತೀಶ್ ಸೇರಿದಂತೆ ಹಲವು ಮುಖಂಡರು ಸಭೆಯಲ್ಲಿ ಆಕ್ರೋಶ ವ್ಯಕ್ತಪಡಿಸಿದರು.



ತಾಲ್ಲೂಕಿನ ಪಕ್ಷ ಸಂಘಟನೆಯಲ್ಲಿರುವ ಲೋಪದೋಷಗಳ ಬಗ್ಗೆ ಈಗಾಗಲೇ ಯುವ ನಾಯಕ ನಿಖಿಲ್ ಕುಮಾರಸ್ವಾಮಿ ಅವರ ಗಮನಕ್ಕೆ ತರಲಾಗಿದೆ. ಬೆಳ್ಳಿಹಬ್ಬದ ಕಾರ್ಯಕ್ರಮದ ನಂತರ ಎಲ್ಲವನ್ನೂ ಸರಿಪಡಿಸುವ ಭರವಸೆಯನ್ನು ಅವರು ನೀಡಿದ್ದಾರೆ ಎಂದು ಹುಸ್ಕೂರ್ ಆನಂದ್ ಮಾಹಿತಿ ನೀಡಿದರು.

ಮೇ 8ರಂದು ನಡೆಯಲಿರುವ ರಾಜ್ಯ ಮಟ್ಟದ ಬೆಳ್ಳಿಹಬ್ಬದ ಕಾರ್ಯಕ್ರಮದಲ್ಲಿ ತಾಲ್ಲೂಕಿನಿಂದ ಸಾವಿರಾರು ಸಂಖ್ಯೆಯಲ್ಲಿ ನಿಷ್ಠಾವಂತ ಕಾರ್ಯಕರ್ತರು ಭಾಗವಹಿಸುವ ಮೂಲಕ ಜೆಡಿಎಸ್ ಶಕ್ತಿ ಪ್ರದರ್ಶನ ಮಾಡಲಿದ್ದಾರೆ. ಭಿನ್ನಾಭಿಪ್ರಾಯಗಳಿದ್ದರೂ ಪಕ್ಷದ ಹಿತದೃಷ್ಟಿಯಿಂದ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ಯುವ ಜೆಡಿಎಸ್ ಮುಖಂಡ ಶ್ರೀನಿವಾಸ್ ಗೌಡ, ನಿರ್ಮಾಪಕ ಪುಟ್ಟರಾಜುಗೌಡ, ಸ್ಥಳೀಯ ಮುಖಂಡರಾದ ಹನುಮಂತರಾಜು, ಚನ್ನೇಗೌಡ, ರಾಜಣ್ಣ, ಸುರೇಶ್, ಮೂರ್ತಿ, ನಾರಾಯಣ ಸ್ವಾಮಿ ಸೇರಿದಂತೆ ದೊಡ್ಡಬೆಳವಂಗಲ ಹೋಬಳಿಯ ನೂರಾರು ಪ್ರಮುಖ ಕಾರ್ಯಕರ್ತರು ಉಪಸ್ಥಿತರಿದ್ದರು.

# ಪಂಚ ರಾಜ್ಯಗಳ ಚುನಾವಣಾ ಫಲಿತಾಂಶಕ್ಕೆ ಕಮಲ ಪಡೆ ಹರ್ಷ



ಬಾಗೇಪಲ್ಲಿ

ಐದು ರಾಜ್ಯಗಳ ವಿಧಾನಸಭಾ ಚುನಾವಣೆಯ ಪೈಕಿ ಮೂರು ರಾಜ್ಯಗಳಲ್ಲಿ ಬಿಜೆಪಿ ಅಭೂತಪೂರ್ವ ಜಯಗಳಿಸಿದ ಹಿನ್ನೆಲೆಯಲ್ಲಿ, ಬಾಗೇಪಲ್ಲಿ ತಾಲ್ಲೂಕು ಬಿಜೆಪಿ ಘಟಕದ ವತಿಯಿಂದ ಪಟ್ಟಣದ ಡಾ. ಎಚ್.ಎನ್. ವೃತ್ತದಲ್ಲಿ ಭರ್ಜರಿ ವಿಜಯೋತ್ಸವ ಆಚರಿಸಲಾಯಿತು.

ಬಿಜೆಪಿ ಮಂಡಲಾಧ್ಯಕ್ಷ ಪ್ರತಾಪ್ ಅವರ ನೇತೃತ್ವದಲ್ಲಿ ಜಮಾಯಿಸಿದ ಕಾರ್ಯಕರ್ತರು, ಪ್ರಧಾನಿ ನರೇಂದ್ರ ಮೋದಿ ಹಾಗೂ ಬಿಜೆಪಿ ಪರ ಘೋಷಣೆಗಳನ್ನು ಕೂಗುತ್ತಾ ಪಟಾಕಿ ಸಿಡಿಸಿ, ಸಾರ್ವಜನಿಕರಿಗೆ ಸಿಹಿ ವಿತರಿಸಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಂಡಲಾಧ್ಯಕ್ಷ ಪ್ರತಾಪ್, "ಪಶ್ಚಿಮ ಬಂಗಾಳ, ಪುದುಚೇರಿ ಮತ್ತು ಅಸ್ಸಾಂ ರಾಜ್ಯಗಳ ಫಲಿತಾಂಶ ಹೊರಬಿದ್ದಿದೆ. ಪಶ್ಚಿಮ ಬಂಗಾಳದ ಗೂಂಡಾ ಸರ್ಕಾರಕ್ಕೆ ಅಂತ್ಯ ಹಾಡುವ ಕಾಲ ಬಂದಿದೆ. ಪ್ರಧಾನಿ ನರೇಂದ್ರ ಮೋದಿ ಹಾಗೂ ಅಮಿತ್ ಶಾ ಅವರ ನಾಯಕತ್ವದಲ್ಲಿ ದೇಶಾದ್ಯಂತ ಜನಪರ ಸರ್ಕಾರಗಳು ಅಧಿಕಾರಕ್ಕೆ ಬರುತ್ತಿವೆ. ಇದರ ಪ್ರಭಾವ ಕರ್ನಾಟಕದ ಮೇಲೆಯೂ ಆಗಲಿದ್ದು, ಮುಂದಿನ ದಿನಗಳಲ್ಲಿ ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದಲ್ಲಿ ಮುನಿರಾಜು ಅವರು ಜಯಗಳಿಸುವುದು ಖಚಿತ," ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಪಕ್ಷದ ಮುಖಂಡರಾದ ವೆಂಕಟೇಶ್, ಗಂಗಿರೆಡ್ಡಿ ಹಾಗೂ ಮಂಜುಳಾ ಅವರು ಮಾತನಾಡಿ, ಕೇಂದ್ರ ಸರ್ಕಾರದ ಯೋಜನೆಗಳು ಹಾಗೂ ಪಕ್ಷದ ಸಂಘಟನೆಯೇ ಈ ಗೆಲುವಿಗೆ ಕಾರಣ ಎಂದು ಅಭಿಪ್ರಾಯಪಟ್ಟರು. ವಿಜಯೋತ್ಸವದಲ್ಲಿ ಮುಖಂಡರಾದ ರೂಪಾ, ಗಂಗುಲಮ್ಮ, ಶಿವಪ್ಪ, ಕೆಟಿವಿ ಸೇರಿದಂತೆ ನೂರಾರು ಕಾರ್ಯಕರ್ತರು ಪಾಲ್ಗೊಂಡು ಸಂಭ್ರಮ ಹಂಚಿಕೊಂಡರು. ಐದು ರಾಜ್ಯಗಳ ವಿಧಾನಸಭಾ ಚುನಾವಣೆಯ ಪೈಕಿ ಮೂರು ರಾಜ್ಯಗಳಲ್ಲಿ ಬಿಜೆಪಿ ಅಭೂತಪೂರ್ವ ಜಯಗಳಿಸಿದ ಹಿನ್ನೆಲೆಯಲ್ಲಿ, ಬಾಗೇಪಲ್ಲಿ ತಾಲ್ಲೂಕು ಬಿಜೆಪಿ ಘಟಕದ ವತಿಯಿಂದ ಪಟ್ಟಣದ ಡಾ. ಎಚ್.ಎನ್. ವೃತ್ತದಲ್ಲಿ ಭರ್ಜರಿ ವಿಜಯೋತ್ಸವ ಆಚರಿಸಲಾಯಿತು.

ವಿಜಯೋತ್ಸವದಲ್ಲಿ ಮುಖಂಡರಾದ ರೂಪಾ, ಗಂಗುಲಮ್ಮ, ಶಿವಪ್ಪ, ಕೆಟಿವಿ ಸೇರಿದಂತೆ ನೂರಾರು ಕಾರ್ಯಕರ್ತರು ಪಾಲ್ಗೊಂಡು ಸಂಭ್ರಮ ಹಂಚಿಕೊಂಡರು. ಐದು ರಾಜ್ಯಗಳ ವಿಧಾನಸಭಾ ಚುನಾವಣೆಯ ಪೈಕಿ ಮೂರು ರಾಜ್ಯಗಳಲ್ಲಿ ಬಿಜೆಪಿ ಅಭೂತಪೂರ್ವ ಜಯಗಳಿಸಿದ ಹಿನ್ನೆಲೆಯಲ್ಲಿ, ಬಾಗೇಪಲ್ಲಿ ತಾಲ್ಲೂಕು ಬಿಜೆಪಿ ಘಟಕದ ವತಿಯಿಂದ ಪಟ್ಟಣದ ಡಾ. ಎಚ್. ಎನ್. ವೃತ್ತದಲ್ಲಿ ಭರ್ಜರಿ ವಿಜಯೋತ್ಸವ ಆಚರಿಸಲಾಯಿತು.

ಬಿಜೆಪಿ ಮಂಡಲಾಧ್ಯಕ್ಷ ಪ್ರತಾಪ್ ಅವರ ನೇತೃತ್ವದಲ್ಲಿ ಜಮಾಯಿಸಿದ ಕಾರ್ಯಕರ್ತರು, ಪ್ರಧಾನಿ ನರೇಂದ್ರ ಮೋದಿ ಹಾಗೂ ಬಿಜೆಪಿ ಪರ ಘೋಷಣೆಗಳನ್ನು ಕೂಗುತ್ತಾ ಪಟಾಕಿ ಸಿಡಿಸಿ, ಸಾರ್ವಜನಿಕರಿಗೆ ಸಿಹಿ ವಿತರಿಸಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಂಡಲಾಧ್ಯಕ್ಷ ಪ್ರತಾಪ್, "ಪಶ್ಚಿಮ ಬಂಗಾಳ, ಪುದುಚೇರಿ ಮತ್ತು ಅಸ್ಸಾಂ ರಾಜ್ಯಗಳ ಫಲಿತಾಂಶ ಹೊರಬಿದ್ದಿದೆ. ಪಶ್ಚಿಮ ಬಂಗಾಳದ ಗೂಂಡಾ ಸರ್ಕಾರಕ್ಕೆ ಅಂತ್ಯ ಹಾಡುವ ಕಾಲ ಬಂದಿದೆ. ಪ್ರಧಾನಿ ನರೇಂದ್ರ ಮೋದಿ ಹಾಗೂ ಅಮಿತ್ ಶಾ ಅವರ ನಾಯಕತ್ವದಲ್ಲಿ ದೇಶಾದ್ಯಂತ ಜನಪರ ಸರ್ಕಾರಗಳು ಅಧಿಕಾರಕ್ಕೆ ಬರುತ್ತಿವೆ. ಇದರ ಪ್ರಭಾವ ಕರ್ನಾಟಕದ ಮೇಲೆಯೂ ಆಗಲಿದ್ದು, ಮುಂದಿನ ದಿನಗಳಲ್ಲಿ ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದಲ್ಲಿ ಮುನಿರಾಜು ಅವರು ಜಯಗಳಿಸುವುದು ಖಚಿತ," ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಪಕ್ಷದ ಮುಖಂಡರಾದ ವೆಂಕಟೇಶ್, ಗಂಗಿರೆಡ್ಡಿ ಹಾಗೂ ಮಂಜುಳಾ ಅವರು ಮಾತನಾಡಿ, ಕೇಂದ್ರ ಸರ್ಕಾರದ ಯೋಜನೆಗಳು ಹಾಗೂ ಪಕ್ಷದ ಸಂಘಟನೆಯೇ ಈ ಗೆಲುವಿಗೆ ಕಾರಣ ಎಂದು ಅಭಿಪ್ರಾಯಪಟ್ಟರು.

ವಿಜಯೋತ್ಸವದಲ್ಲಿ ಮುಖಂಡರಾದ ರೂಪಾ, ಗಂಗುಲಮ್ಮ, ಶಿವಪ್ಪ, ಕೆಟಿವಿ ಸೇರಿದಂತೆ ನೂರಾರು ಕಾರ್ಯಕರ್ತರು ಪಾಲ್ಗೊಂಡು ಸಂಭ್ರಮ ಹಂಚಿಕೊಂಡರು.

# ರೇಷ್ಮೆಗೂಡು ಖರೀದಿಸಲು, ಕೆಎಸ್‌ಎಂಬಿ ಮಧ್ಯಪ್ರವೇಶ ಮಾಡಲು ಒತ್ತಾಯ

ವಿಜಯಪುರ

ಬೇಸಿಗೆಯ ಬಿಸಿಲಿನ ತಾಪಮಾನ ಏರಿಕೆಯ ನಡುವೆಯೂ, ಹೆಚ್ಚಿನ ಪ್ರಮಾಣದಲ್ಲಿ ರೇಷ್ಮೆಗೂಡು ಉತ್ಪಾದನೆ ಮಾಡುತ್ತಿರುವ ರೈತರು, ಮಾರುಕಟ್ಟೆಗೆ ತಂದಾಗ, ಗೂಡು ಖರೀದಿಗಾಗಿ ಕರ್ನಾಟಕ ರೇಷ್ಮೆ ಮಾರುಕಟ್ಟೆ ಮಂಡಳಿಯವರು ನೇರವಾಗಿ ಬಂದು ಖರೀದಿಸುವ ಮೂಲಕ ರೈತರಿಗೆ ಚೈತನ್ಯ ನೀಡಬೇಕಿದೆ.



ಮಾರುಕಟ್ಟೆಗೆ ಬರುತ್ತಿರುವ ಗೂಡಿನ ಆವಕ ಪ್ರಮಾಣ ಹೆಚ್ಚಾಗಿರುವ ಹಿನ್ನೆಲೆಯಲ್ಲಿ, ನೂಲು ಬಿಚ್ಚಾಣಿಕೆದಾರರು, ಸರಿಯಾಗಿ ಬೆಲೆ ಕೊಡುತ್ತಿಲ್ಲ. ರೇಷ್ಮೆನೂಲಿನ ದರ ಕಡಿಮೆಯಾಗದಿದ್ದರೂ, ಮಾರುಕಟ್ಟೆಯಲ್ಲಿ ರೈತರಿಗೆ ಉತ್ತಮ ಬೆಲೆ ಕೊಡುತ್ತಿಲ್ಲ. ಒಂದು ಕೆ.ಜಿ.ಗೂಡಿನ ಬೆಲೆ ಏಕಾಏಕಿ 200 ರೂಪಾಯಿ ಕಡಿಮೆಯಾಗಿದ್ದು, 100 ಕೆ.ಜಿ.ಗೂಡು ಬೆಳೆಯುವ ರೈತನಿಗೆ ಒಂದು ಬೆಳೆಗೆ 20 ಸಾವಿರ ಕಡಿಮೆಯಾಗುತ್ತಿದ್ದು, ಕರ್ನಾಟಕ ರೇಷ್ಮೆ ಮಾರುಕಟ್ಟೆ ಮಂಡಳಿಯವರು ಮಧ್ಯಪ್ರವೇಶ ಮಾಡಿ, ರೈತರಿಂದ ಗೂಡು ಖರೀದಿಸಿದರೆ ಮಾತ್ರವೇ ರೈತರಿಗೆ ನ್ಯಾಯ ಸಿಗಲು ಸಾಧ್ಯ.

> 20 ದಿನಗಳು ಕಷ್ಟಪಟ್ಟು ಗೂಡು ಬೆಳೆದರೂ, ಕೆ.ಜಿ.ಗೆ 200 ರೂಪಾಯಿ ನಷ್ಟವಾಗುತ್ತಿದೆ. ಇನ್ನು ಕಷ್ಟಪಟ್ಟು ಬೆಳೆಯುವುದು ಯಾಕೆ? ಸರಕಾರ ಮಧ್ಯಪ್ರವೇಶ ಮಾಡದಿದ್ದರೆ ಉದ್ಯಮದಿಂದ ಹೊರಹೋಗಬೇಕಾದಂತಹ ಅನಿವಾರ್ಯತೆ ಎದುರಾಗಿದೆ.
>
> - ಚಂದ್ರಶೇಖರ್ ರೇಷ್ಮೆ ಬೆಳೆಗಾರ

ಕರ್ನಾಟಕ ರೇಷ್ಮೆ ಮಾರುಕಟ್ಟೆ ಮಂಡಳಿಯು, ಮಾರುಕಟ್ಟೆಗಳಲ್ಲಿ ರೈತರಿಗೆ ಸೂಕ್ತವಾದ ಬೆಲೆ ಸಿಗದೇ ಇದ್ದಾಗ, ಮಧ್ಯ ಪ್ರವೇಶ ಮಾಡಿ, ರೈತರಿಂದ ನೇರವಾಗಿ ಗೂಡು ಖರೀದಿಸಬೇಕು ಎನ್ನುವ ಉದ್ದೇಶದಿಂದಲೇ ಈ ಮಂಡಳಿಗಳನ್ನು ಸ್ಥಾಪನೆ ಮಾಡಿದ್ದರೂ ಸಹಾ, ಮಂಡಳಿಯು ಇದುವರೆಗೂ ಗೂಡು ಖರೀದಿಗೆ ಮುಂದಾಗಿಲ್ಲದ ಕಾರಣ, ನೂಲು ಬಿಚ್ಚಾಣಿಕೆದಾರರಿಗೆ ಪೈಪೋಟಿ ಇಲ್ಲದ ಕಾರಣ, ಅವರು ನೀಡಿದ ಬೆಲೆಗೆ ರೈತರು, ಗೂಡು ಮಾರಾಟ ಮಾಡಿ ಹೋಗಬೇಕಾದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಸರಕಾರಕ್ಕೆ ಬರುವ ಆದಾಯವು ಕುಂಠಿತವಾಗುತ್ತಿದೆ.

ರೇಷ್ಮೆಗೂಡು ಬೆಳೆಯುತ್ತಿರುವ ರೈತರಿಗೆ, ಹುಳು ಮನೆ ಸ್ವಚ್ಛತೆ, ಹುಳುವಿನ ಖರೀದಿ, ಪೇಪರ್, ಔಷಧಿಗಳು, ಚಂದ್ರಿಕೆ, ಗೂಡು ಬಿಡಿಸುವ ಕೂಲಿ, ಗೂಡು ಸ್ವಚ್ಛಗೊಳಿಸುವ ಕೂಲಿ, ಮಾರುಕಟ್ಟೆಗೆ ಸಾಗಾಣಿಕೆ ಮಾಡಿಕೊಂಡು ಬರುವುದು, ಹಿಪ್ಪುನೇರಳೆ ಸೊಪ್ಪು, ಎಲ್ಲಾ ಸೇರಿ ಒಂದು ಕೆ.ಜಿ.ಗೂಡು ಬೆಳೆಯುವುದಕ್ಕೆ 550 ರೂಪಾಯಿ ಖರ್ಚು ಬರುತ್ತಿದೆ. ಮಾರುಕಟ್ಟೆಯಲ್ಲಿ ಈಗ ರೈತರಿಗೆ ಸಿಗುತ್ತಿರುವ ಬೆಲೆಯೂ ದುಡಿಮೆ ಬಂಡವಾಳಕ್ಕೆ ಸಮವಾಗುತ್ತಿದೆಯೇ ಹೊರತು, 20 ದಿನಗಳ ಕಾಲ, ರೇಷ್ಮೆಹುಳು ಸಾಕಾಣಿಕೆಯಲ್ಲಿ ರೈತರು ಪಡುತ್ತಿರುವ ಶ್ರಮಕ್ಕೆ ಬೆಲೆ ಸಿಗದಂತಾಗಿದೆ. ಕೆ.ಜಿ.ಗೂಡಿಗೆ ಕನಿಷ್ಠ 600 ರೂಪಾಯಿ ಬೆಲೆ ಸಿಕ್ಕಿದರೆ, 100 ಕೆ.ಜಿ.ಗೂಡು ಬೆಳೆಯುವ ರೈತನಿಗೆ ಕನಿಷ್ಟ ತಿಂಗಳಿಗೆ 10 ಸಾವಿರ ಲಾಭ ಸಿಗಲಿದೆ. ಆದರೂ ಅವರ ಶ್ರಮಕ್ಕೆ ತಕ್ಕಷ್ಟು ಪ್ರತಿಫಲ ಸಿಗುವುದಿಲ್ಲ.

ರೈತರು, ಬೆಳೆದ ಗೂಡನ್ನು ಹೆಚ್ಚು ದಿನಗಳ ಕಾಲ, ಮನೆಗಳಲ್ಲಿ ಇಟ್ಟುಕೊಳ್ಳುವುದಕ್ಕೂ ಸಾಧ್ಯವಾಗುವುದಿಲ್ಲ. 6–7 ದಿನಕ್ಕೆ ಮಾರುಕಟ್ಟೆಗೆ ತರಲೇಬೇಕು. ಆದರೆ, ನೂಲು ಬಿಚ್ಚಾಣಿಕೆದಾರರು, ಒಮ್ಮೆ ನೂಲು ಬಿಚ್ಚಾಣಿಕೆ ಮಾಡಿದರೆ, ಅದನ್ನು ಯಾವಾಗ ಬೇಕಾದರೂ ಮಾರಾಟ ಮಾಡುವುದಕ್ಕೆ ಅವರಿಗೆ ಅವಕಾಶವಿರುತ್ತದೆ. ಆದ್ದರಿಂದ ಕರ್ನಾಟಕ ರೇಷ್ಮೆ ಮಾರಾಟ ಮಂಡಳಿಯು ಮಧ್ಯಪ್ರವೇಶ ಮಾಡಬೇಕಿದೆ.

ಪ್ರಸ್ತುತ ರೇಷ್ಮೆಗೂಡು ಮಾರುಕಟ್ಟೆಗಳಲ್ಲಿ ಮಿಶ್ರತಳಿಯ ರೇಷ್ಮೆಗೂಡಿನ ಬೆಲೆ ಕೆ.ಜಿ.ಗೆ 526 ರೂಪಾಯಿಗೆ ಮಾರಾಟವಾಗುತ್ತಿದೆ. ದ್ವಿತಳಿ ಗೂಡು 650 ರಿಂದ 700 ರೂಪಾಯಿವರೆಗೂ ಮಾರಾಟವಾಗುತ್ತಿದೆ.

# 7ರಂದು ಉಚಿತ ಆರೋಗ್ಯ ತಪಾಸಣಾ ಶಿಬಿರ

ವಿಜಯಪುರ

ಹೋಬಳಿಯ ಹಾರೋಹಳ್ಳಿ ಗ್ರಾ.ಪಂ. ವ್ಯಾಪ್ತಿಯ ದೊಡ್ಡಮುದ್ದೇನಹಳ್ಳಿ ಗ್ರಾಮದ ಸರಕಾರಿ ಪ್ರಾಥಮಿಕ ಶಾಲೆಯ ಆವರಣದಲ್ಲಿ, ಇದೇ 7ರಂದು ಬೆಳಿಗ್ಗೆ 10 ಗಂಟೆಯಿಂದ 3ಗಂಟೆಯವರೆಗೆ ಉಚಿತ ಆರೋಗ್ಯ ತಪಾಸಣೆ ಮತ್ತು ರಕ್ತದಾನ ಶಿಬಿರ ಆಯೋಜನೆ ಮಾಡಲಾಗಿದೆ.

ಸತ್ಯ ಎಜುಕೇರ್ ಕಾಂಪಿಟೆನ್ಸಿ ಟ್ರಸ್ಟ್, ಮತ್ತು ಆಕಾಶ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಮಲ್ಲಿಗೆ ಚಿಲ್ಡ್ರನ್ಸ್ ಕ್ಲಿನಿಕ್ ಅಂಡ್ ಡಯಾಗ್ನೋಸ್ಟಿಕ್ ಸೆಂಟರ್ ವಿಜಯಪುರ, ಇವರ ಸಹಯೋಗದಲ್ಲಿ, ಕಣ್ಣಿನ ತಜ್ಞರು, ಸಾಮಾನ್ಯ ರೋಗ ತಜ್ಞರು, ಸ್ತ್ರೀ ರೋಗ ತಜ್ಞರು, ಮೂಳೆ ತಜ್ಞರು, ಸೇರಿದಂತೆ ವಿವಿಧ ತಜ್ಞರು ಶಿಬಿರದಲ್ಲಿ ಭಾಗವಹಿಸಲಿದ್ದಾರೆ.

# ಕುಡಿಯುವ ನೀರು ಪೂರೈಕೆ ಸ್ಥಗಿತ

ತುಮಕೂರು

ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಹೇಮಾವತಿ ಕುಡಿವ ನೀರನ್ನು ಸರಬರಾಜು ಮಾಡುವ ಜಲಸಂಗ್ರಹಗಾರದ ತುರ್ತು ದುರಸ್ತಿ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಈ ಹಿನ್ನೆಲೆ ನಗರದ ವಿವಿಧ ವಾರ್ಡ್‌ಗಳಲ್ಲಿ ಇದೇ 5 ರಿಂದ 8ರವರೆಗೆ ಒಟ್ಟು 4 ದಿನಗಳ ಕಾಲ ನೀರು ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಪಾಲಿಕೆ ಅಧಿಕಾರಿಗಳು ತಿಳಿಸಿದ್ದಾರೆ.

ಯಾವೆಲ್ಲಾ ವಾರ್ಡ್‌ಗಳಲ್ಲಿ ವ್ಯತ್ಯಯ?

ದುರಸ್ತಿ ಕಾರ್ಯದ ಅವಧಿಯಲ್ಲಿ ವಾರ್ಡ್ ಸಂಖ್ಯೆ 6, 10, 11, 12, 13, 14, 15, 17, 18, 24, 28, 29, 30 ಮತ್ತು 31ರಲ್ಲಿ ಹೇಮಾವತಿ ಕುಡಿಯುವ ನೀರು ಸರಬರಾಜು ಇರುವುದಿಲ್ಲ. ಕಾಮಗಾರಿಯನ್ನು ಸುಗಮವಾಗಿ ನಡೆಸಲು ವಾಟರ್ ಶೆಟ್‌ಡೌನ್ ಮಾಡುವುದು ಅನಿವಾರ್ಯವಾಗಿದ್ದು, ಸಾರ್ವಜನಿಕರು ಲಭ್ಯವಿರುವ ನೀರನ್ನು ಮಿತವಾಗಿ ಬಳಸಿ ಸಹಕರಿಸಬೇಕು ಎಂದು ಪಾಲಿಕೆಯ ಕಾರ್ಯಪಾಲಕ ಅಭಿಯಂತರರು ಕೋರಿದ್ದಾರೆ.

# ಕೆರೆಗಳನ್ನು ತ್ವರಿತವಾಗಿ ಗುರುತಿಸಿ, ಅಧಿಸೂಚನೆ ಹೊರಡಿಸಲು ಸೂಚನೆ



ತುಮಕೂರು

ಇಲ್ಲಿನ ಶಿರಾ ತಾಲ್ಲೂಕಿನಲ್ಲಿ ನಡೆಯುತ್ತಿರುವ ರಾಷ್ಟ್ರೀಯ ಹೆದ್ದಾರಿ ಮತ್ತು ರೈಲ್ವೆ ಕಾಮಗಾರಿಗಳಿಗೆ ಮಣ್ಣಿನ ಅವಶ್ಯಕತೆ ಹೆಚ್ಚಿದ್ದು, ಅಮೃತ್ ಸರೋವರ್ ಯೋಜನೆಯಡಿ ಕೆರೆಗಳನ್ನು ತ್ವರಿತವಾಗಿ ಗುರುತಿಸಿ ಅಧಿಸೂಚನೆ ಹೊರಡಿಸುವಂತೆ ನವದೆಹಲಿಯ ಕರ್ನಾಟಕ ರಾಜ್ಯ ವಿಶೇಷ ಪ್ರತಿನಿಧಿ ಹಾಗೂ ಶಿರಾ ಶಾಸಕ ಟಿ.ಬಿ. ಜಯಚಂದ್ರ ಅವರು ಗ್ರಾಮೀಣ ಅಭಿವೃದ್ಧಿ ಮತ್ತು ಸಣ್ಣ ನೀರಾವರಿ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿಯ ನ್ಯಾಯಾಲಯ ಸಭಾಂಗಣದಲ್ಲಿ ಸೋಮವಾರ ಅಮೃತ್ ಸರೋವರ್ ಯೋಜನೆ ಕುರಿತಂತೆ ಸಭೆ ನಡೆಸಿ ಅವರು ಮಾತನಾಡುತ್ತಾ, ಕೆರೆಗಳಲ್ಲಿನ ಮಣ್ಣು ಹಾಗೂ ಹೂಳೆತ್ತುವ ಕುರಿತು ಪ್ರಸ್ತಾವನೆಗಳನ್ನು ತಕ್ಷಣ ಸರ್ಕಾರಕ್ಕೆ ಸಲ್ಲಿಸಲು ಸೂಚಿಸಿದರು. ಇದರಿಂದ ಗಣಿ ಮತ್ತು ಭೂವಿಜ್ಞಾನ ಇಲಾಖೆಗೆ ರಾಯಲ್ಟಿ ವಿನಾಯಿತಿ ದೊರೆಯಲಿದೆ ಎಂದು ತಿಳಿಸಿದರು.

"ಅಮೃತ್ ಸರೋವರ್ ಯೋಜನೆ"ಯಡಿ ತುಮಕೂರು ಜಿಲ್ಲೆಯ ಶಿರಾ ತಾಲ್ಲೂಕಿನ ಕೆರೆಗಳನ್ನು ಗುರುತಿಸಿ ಅಧಿಸೂಚನೆ ಹೊರಡಿಸುವುದು ಹಾಗೂ ರೈಲ್ವೆ ಮತ್ತು ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳಿಗೆ ಅಗತ್ಯವಿರುವ ಮಣ್ಣನ್ನು ಈ ಕೆರೆಗಳಿಂದ ಬಳಸುವ ಕುರಿತು ಸಂಬಂಧಿತ ಇಲಾಖೆಗಳಿಗೆ ನಿರ್ದೇಶನ ನೀಡಿದರು.

ಇದೇ ವೇಳೆ, ರಾಷ್ಟ್ರೀಯ ಹೆದ್ದಾರಿ ಹಾಗೂ ರೈಲ್ವೆ ಯೋಜನೆಗಳಿಗೆ ಅಗತ್ಯವಿರುವ ಮಣ್ಣನ್ನು ಕೆರೆಗಳಿಂದ ಪಡೆಯಲು ಸರ್ಕಾರದಿಂದ ಶೀಘ್ರ ಅನುಮತಿ ಹಾಗೂ ಅಮೃತ್ ಸರೋವರ ಯೋಜನೆ ಅಡಿಯಲ್ಲಿ ಶಿರಾ ಭಾಗದಲ್ಲಿ ಬರುವ 35 ಕೆರೆಗಳಿಗೆ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳುವ ಬಗ್ಗೆ ಸದನದಲ್ಲಿಯೂ ಪ್ರಸ್ತಾಪ ಮಾಡಲಾಗಿದೆ ಎಂದು ತಿಳಿಸಿದರು.

ತುಮಕೂರು– ದಾವಣಗೆರೆ ರೈಲು ಮಾರ್ಗ ಯೋಜನೆಗೆ ಆರಂಭದಲ್ಲಿ 1801 ಕೋಟಿ ರೂ. ಮಂಜೂರು ಮಾಡಲಾಗಿದ್ದು, ಈಗಾಗಲೇ 1300 ಕೋಟಿ ರೂ. ಬಿಡುಗಡೆ ಮಾಡಲಾಗಿದೆ ಎಂದು ಹೇಳಿದರು.

ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಮಾತನಾಡಿ, ಕೆರೆಗಳ ಹೂಳೆತ್ತುವ ಕಾರ್ಯಕ್ಕೆ ಸಂಬಂಧಿಸಿದ ಗ್ರಾಮ ಪಂಚಾಯಿತಿಗಳು ಹಾಗೂ ಸಣ್ಣ ನೀರಾವರಿ ಇಲಾಖೆಯಿಂದ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಅನುಮತಿ ಕೋರಿ ಪತ್ರ ಕಳುಹಿಸಲಾಗಿದ್ದು, ಜಿಲ್ಲಾ ಪಂಚಾಯಿತಿಯಿಂದ ಜಿಲ್ಲಾಧಿಕಾರಿಗಳ ಕಚೇರಿಗೆ ಪತ್ರ ಸಲ್ಲಿಸುವಂತೆ ತಿಳಿಸಿ, ಜಿಲ್ಲಾಧಿಕಾರಿಗಳ ಕಚೇರಿಯಿಂದ ಸರ್ಕಾರಕ್ಕೆ ಅನುಮತಿ ಕೋರಿ ಪತ್ರ ರವಾನಿಸಲಾಗುವುದು ಎಂದು ಹೇಳಿದರು.

ಗಣಿ ಮತ್ತು ಭೂವಿಜ್ಞಾನ ಇಲಾಖೆ ಉಪ ನಿರ್ದೇಶಕರು ಮಾತನಾಡುತ್ತಾ, ರೈತರು ಕೆರೆಗಳ ಹೂಳೆತ್ತುವ ಕಾರ್ಯಕ್ಕೆ ಯಾವುದೇ ಅಭ್ಯಂತರವಿಲ್ಲ, ಆದರೆ ಮದರ್ ಸಾಯಿಲ್ ತೆಗೆಯಲು ಅವಕಾಶ ಇರುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಈ ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅಶ್ವಿಜ ಬಿ.ವಿ., ಸಣ್ಣ ನೀರಾವರಿ ಜಿಲ್ಲಾ ಪಂಚಾಯತ್, ರೈಲ್ವೆ, ರಾಷ್ಟ್ರೀಯ ಹೆದ್ದಾರಿ ಇಲಾಖೆ ಮುಖ್ಯಸ್ಥರು ಸಭೆಯಲ್ಲಿ ಭಾಗವಹಿಸಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy